ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 87
19-9-2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 87

## ಜಾತಿ ಕಾಲಂನಲ್ಲಿ ಬ್ರಾಹ್ಮಣ ಎಂದು ಉಳಿಸಲು ಮನವಿ

**ದಾವಣಗೆರೆ:** ರಾಜ್ಯ ಸರಕಾರದ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುತ್ತಿರುವ ಜಾತಿ ಸಮೀಕ್ಷೆಯಲ್ಲಿ ಜಾತಿ ಕಾಲಂನಲ್ಲಿ ಸುಮಾರು 35 ಬ್ರಾಹ್ಮಣ ಉಪ ಪಂಗಡಗಳನ್ನು ನಮೂದು ಮಾಡಿರುವುದನ್ನು ತೆಗೆದು ಕೇವಲ ಬ್ರಾಹ್ಮಣ ಎಂದು ಮಾತ್ರ ಉಳಿಸಲು ದಾವಣಗೆರೆಯ ಬ್ರಾಹ್ಮಣ ಸಮಾಜ ಸೇವಾ ಸಂಘ ಮನವಿ ಮಾಡಿದೆ.

ಜಾತಿಯ ಕಾಲಂನಲ್ಲಿ 'ಬ್ರಾಹ್ಮಣ' ಎಂದಿರಿಸಿ, ಉಪಜಾತಿಗಳ ಕಾಲಂನಲ್ಲಿ ಉಪಜಾತಿಗಳನ್ನು ಸೇರಿಸುವಂತೆ ಸಂಘದ ಅಧ್ಯಕ್ಷ ಡಾ.ಎಂ.ಸಿ. ಶಶಿಕಾಂತ್ ಪತ್ರಿಕಾ ಹೇಳಿಕೆ?ಯಲ್ಲಿ ಆಗ್ರಹಿಸಿದ್ದಾರೆ.

ಬ್ರಾಹ್ಮಣ ಸಮುದಾಯದವರು ಧರ್ಮದ ಕಾಲಂನಲ್ಲಿ 'ಹಿಂದು', ಜಾತಿಯ ಕಾಲಂನಲ್ಲಿ 'ಬ್ರಾಹ್ಮಣ' ಎಂದು ನಮೂದಿಸಿ, ಉಪಜಾತಿಗಳನ್ನು ಜಾತಿಯ ಕಾಲಂನಲ್ಲಿ ನಮೂದಿಸಬೇಡಿ. ಉಪಜಾತಿಗಳ ಕಾಲಂನಲ್ಲಿ ಉಪಪಂಗಡಗಳನ್ನು ಸೇರಿಸಿ, 'ಬ್ರಾಹ್ಮಣ ಕ್ರಿಶ್ಚಿಯನ್' ಎಂಬ ಇಲ್ಲದ ಜಾತಿಯನ್ನು ಸೇರಿಸಿ ಮತಾಂತರದ ಉದ್ದೇಶವನ್ನು ಕೈಬಿಡುವಂತೆ ವಿನಂತಿಸಿದ್ದಾರೆ.

## ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಇಂದು

**ದಾವಣಗೆರೆ:** ಎಂಹೆಚ್ಆರ್‌ಡಿಸಿ ಇನ್ನೋವೇಶನ ಸೆಲ್-ಭಾರತ, ಬಾಪೂಜಿ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್-2025' ಸಿಐಹೆಚ್-25 ಕಾರ್ಯಕ್ರಮವನ್ನು ಸೆ.19ರಂದು ಬೆಳಿಗ್ಗೆ 9 ಗಂಟೆಗೆ ನಗರದ ಬಿಐಜಟಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಭಾಷಣಕಾರರಾಗಿ ಸಿಎಸ್ ಮತ್ತು ಇ ವಿಭಾಗ ಸಹ ಪ್ರಾಧ್ಯಾಪಕ ಡಾ. ಟಿ. ಗುರುರಾಜ್ ಮತ್ತು ಕಾಲೇಜಿನ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ, ಪ್ರಾಂಶುಪಾಲ ಡಾ. ಎಚ್.ಬಿ. ಅರವಿಂದ್ ಪಾಲ್ಗೊಳ್ಳಲಿದ್ದಾರೆ.

## ಮುಡಾ ನಿವೇಶನ ಹಂಚಿಕೆಯಲ್ಲಿ ದೊಡ್ಡ ಪ್ರಮಾಣದ ಹಗರಣ ನಡೆದಿದೆ: ಇಡಿ

**ನವದೆಹಲಿ:** ಅಕ್ರಮ ಹಣ ವರ್ಗಾವಣೆ ತನಿಖೆಯಲ್ಲಿ ವಿವಿಧ ಕಾನೂನುಗಳು ಮತ್ತು ಸರ್ಕಾರಿ ಆದೇಶಗಳನ್ನು ಉಲ್ಲಂಘಿಸುವ ಮೂಲಕ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನಗಳ ಹಂಚಿಕೆಯಲ್ಲಿ "ದೊಡ್ಡ ಪ್ರಮಾಣದ" ಹಗರಣ ನಡೆದಿರುವುದು ಕಂಡುಬಂದಿದೆ ಎಂದು ಜಾರಿ ನಿರ್ದೇಶನಾಲಯ(ಇಡಿ) ಗುರುವಾರ ಹೇಳಿದೆ.

ಅನರ್ಹ ಸಂಸ್ಥೆ/ವ್ಯಕ್ತಿಗಳಿಗೆ ಪರಿಹಾರ ನಿವೇಶನಗಳ "ಅಕ್ರಮ" ಹಂಚಿಕೆಯಲ್ಲಿ ಒಗಆಂ ಮಾಜಿ ಆಯುಕ್ತ ಜಿ ಟಿ ದಿನೇಶ್ ಕುಮಾರ್ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಇಡಿ ತಿಳಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ಮಂಜೂರು ಮಾಡಿದ ಭೂಮಿಯಲ್ಲೂ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿದೆ.

ಸೆಪ್ಟೆಂಬರ್ 16 ರಂದು ಬೆಂಗಳೂರಿನಲ್ಲಿ ದಿನೇಶ್ ಕುಮಾರ್ ಅವರನ್ನು ಬಂಧಿಸಿರುವ ಇಡಿ, ಸೆಪ್ಟೆಂಬರ್ 26 ರವರೆಗೆ ತನ್ನ ಕಸ್ಟಡಿಗೆ ಪಡೆದು ವಿಚಾರಣೆ ನಡೆಸುತ್ತಿದೆ.

"ಈ ಪ್ರಕರಣದ ತನಿಖೆಯ ಸಮಯದಲ್ಲಿ ಸಂಗ್ರಹಿಸಲಾದ ಪುರಾವೆಗಳು ಮತ್ತು ದಾಖಲೆಗಳು ಜಿಟಿ ದಿನೇಶ್ ಕುಮಾರ್ ಅವರು ಆಯುಕ್ತರಾಗಿದ್ದಾಗ ಮೈಸೂರಿನ ಮುಡಾದಲ್ಲಿ ನಡೆಸಲಾದ ಸಮಗ್ರ ಅಕ್ರಮ ಹಣ ವರ್ಗಾವಣೆ ಯೋಜನೆಯಲ್ಲಿ ಸಕ್ರಿಯವಾಗಿ ಭಾಗಿಯಾಗಿರುವುದನ್ನು ಸೂಚಿಸುತ್ತವೆ" ಎಂದು ಇಡಿ ಹೇಳಿಕೊಂಡಿದೆ.

ದೊಡ್ಡ ಪ್ರಮಾಣದ ಅಕ್ರಮಗಳ ವರದಿಗಳ ನಂತರ ರಾಜ್ಯ ಸರ್ಕಾರ, ಮುಡಾ ಕಾರ್ಯನಿರ್ವಹಣೆಯ ಬಗ್ಗೆ ಆಂತರಿಕ ತನಿಖೆ ನಡೆಸಿದ ನಂತರ ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ದಿನೇಶ್ ಕುಮಾರ್ ಅವರನ್ನು ಅಮಾನತುಗೊಳಿಸಿದೆ.

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರು ದಾಖಲಿಸಿದ ಎಫ್‌ಐಆರ್ ಆಧಾರದ ಮೇಲೆ ಇಡಿ, ಅಕ್ರಮ ಹಣ ವರ್ಗಾವಣೆ ಪ್ರಕರಣ ದಾಖಲಿಸಿಕೊಂಡಿದೆ. ಇದುವರೆಗೆ "ಅಕ್ರಮವಾಗಿ" ಹಂಚಿಕೆ ಮಾಡಲಾದ 252 ಮುಡಾ ಸೈಟ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಕೇಂದ್ರ ತನಿಖಾ ಸಂಸ್ಥೆ ಹೇಳಿದೆ. ಇವುಗಳ ಮಾರುಕಟ್ಟೆ ಮೌಲ್ಯ ಸುಮಾರು 400 ಕೋಟಿ ರೂ. ಆಗಿದ್ದು, ಈ ಪ್ರಕರಣದಲ್ಲಿ ಪಾರ್ವತಿ ವಿರುದ್ಧದ ಇಡಿ ವಿಚಾರಣೆಯನ್ನು ರದ್ದುಗೊಳಿಸಿದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ಜುಲೈನಲ್ಲಿ ಸುಪ್ರೀಂ ಕೋರ್ಟ್ ಸಹ ಎತ್ತಿಹಿಡಿದಿದೆ.

## ಸೆ.20 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

**ದಾವಣಗೆರೆ.ಸೆ.18:** ದಾವಣಗೆರೆ ಜಿಲ್ಲಾ ಆರ್ಯ ಈಡಿಗರ ಸಂಘದ ವತಿಯಿಂದ ಸೆ.20 ರಂದು ನಗರದ ಜಿಲ್ಲಾ ಆರ್ಯ ಈಡಿಗ ವಿದ್ಯಾರ್ಥಿ ನಿಲಯದ ಆವರಣದಲ್ಲಿರುವ ಡಾ.ಪುನೀತ್ ರಾಜ್ ಕುಮಾರ್ ವೇದಿಕೆಯಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಎ.ನಾಗರಾಜ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂ-ದು ಬೆಳ್ಳಿಗೆ 11.30ಕ್ಕೆ ತಮ್ಮ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಸೋಲೂರಿನ ಆರ್ಯ ಈಡಿಗರ ಮಹಾಸಂಸ್ಥಾನದ ಶ್ರೀ ವಿಖ್ಯಾತನಂದ ಸ್ವಾಮಿ ಹಾಗೂ ತೀರ್ಥಹಳ್ಳಿ ಗರ್ತಿ ಸಂಸ್ಥಾನದ ಶ್ರೀ ರೇಣುಕಾನಂದ ಸ್ವಾಮೀಜಿ ವಹಿಸಲಿದ್ದಾರೆ. ಜಿಲಾಮಂತ್ರಿ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಅತಿಥಿಗಳಾಗಿ ಗಣ್ಯರಾದ ಹೆಚ್.ಶಂಕರ್, ದಿನೇಶ್ ಕೆ.ಶೆಟ್ಟಿ, ಗಂಗಾಧರ ಸ್ವಾಮಿ, ಎಂ.ಶ್ರೀನಿವಾಸ ಸೇರಿದಂತೆ ಇತರರು ಆಗಮಿಸಲಿದ್ದಾರೆ ಎಂದು ಹೇಳಿದರು.

ಇದೇ ವೇಳೆ ನಮ್ಮ ಸಂಘ ಹಾಗೂ ಶ್ರೀ ರೇಣುಕಾಂಭ ಕ್ರೆಡಿಟ್ ಕೋ-ಆಫ್ ಸೊಸೈಟಿ ಸಹಯೋಗದಲ್ಲಿ 100 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದರು.

# ವಿಜಯಪುರ ವಿಮಾನ ನಿಲ್ದಾಣಕ್ಕೆ 618 ಕೋಟಿ ರೂ. ಪರಿಷ್ಕೃತ ಅಂದಾಜುಗೆ ಸಚಿವ ಸಂಪುಟ ಅನುಮೋದನೆ



**ಬೆಂಗಳೂರು:** ವಿಜಯಪುರ "ಗ್ರೀನ್‌ಫೀಲ್ಡ್" ವಿಮಾನ ನಿಲ್ದಾಣದ ಅಭಿವೃದ್ಧಿ ಕಾರ್ಯಗಳಿಗಾಗಿ 618.75 ಕೋಟಿ ರೂ.ಗಳ ಪರಿಷ್ಕೃತ ಅಂ-ದಾಜುಗೆ ರಾಜ್ಯ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು, ಎಟಿಆರ್ ವಿಮಾನಗಳ ಬದಲಿಗೆ ದೊಡ್ಡ ವಿಮಾನಗಳ ಲ್ಯಾಂಡಿಂಗ್‌ಗೆ ಅನುಕೂಲವಾಗುವಂತೆ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

ಮೂಲತಃ ಅನುಮೋದಿಸಲಾದ ವೆಚ್ಚ 347.92 ಕೋಟಿ ರೂ.ಗಳಾಗಿದ್ದು, ಹೆಚ್ಚುವರಿ ಅಂದಾಜು ವೆಚ್ಚ 270.08 ಕೋಟಿ ರೂ.ಗಳಾಗಿದೆ ಎಂದು ಅವರು ಹೇಳಿದರು.

ಕೊಡಗು ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್‌ನಲ್ಲಿ ಹೃದ್ರೋಗ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ವೈದ್ಯಕೀಯ ಉಪಕರಣಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ(ಪಿಪಿಪಿ ಮಾದರಿ), ಅಂದಾಜು 10.89 ಕೋಟಿ ರೂ.ಗಳ ವೆಚ್ಚದಲ್ಲಿ ಖರೀದಿಸಲು ಸಂಪುಟ ಅನುಮೋದನೆ ನೀಡಿದೆ.

ಬಳ್ಳಾರಿ, ವಿಜಯಪುರ, ಧಾರವಾಡ, ಶಿವಮೊಗ್ಗ, ಬೆಳಗಾವಿ, ಮೈಸೂರು, ಕಲಬುರಗಿ ಮತ್ತು ತುಮಕೂರು ಜಿಲ್ಲೆಗಳ ಕೇಂದ್ರ ಕಾರಾಗೃಹಗಳಲ್ಲಿ ಅಂದಾಜು 16.75 ಕೋಟಿ ರೂ. ವೆಚ್ಚದಲ್ಲಿ 10 "ಕರೆ ನಿರ್ಬಂಧಿಸುವ ವ್ಯವಸ್ಥೆಯ ಗೋಪುರಗಳನ್ನು" ಸ್ಥಾಪಿಸಲು ಸಂಪುಟ ಅನುಮೋದನೆ ನೀಡಿದೆ ಎಂದು ಪಾಟೀಲ್ ತಿಳಿಸಿದರು.

ದೌರ್ಜನ್ಯದಿಂದ ಸಾವನ್ನಪ್ಪಿದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವ್ಯಕ್ತಿಗಳ ಅವಲಂಬಿತರಿಗೆ ಗ್ರೂಪ್-ಸಿ ಮತ್ತು ಗ್ರೂಪ್-ಡಿ ಕೇಡರ್ ಹುದ್ದೆಗಳಲ್ಲಿ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡಲು ಸಂಪುಟ ಸಭೆ ಅನುಮೋದನೆ ನೀಡಿದೆ.

ಬಡ್ತಿ ಪಡೆಯಲು ಅಧಿಕಾರಿಗಳು/ಉದ್ಯೋಗಿಗಳಿಗೆ ತರಬೇತಿಯನ್ನು ಕಡ್ಡಾಯಗೊಳಿಸುವ ಬಗ್ಗೆಯೂ ಸಂಪುಟ ಚರ್ಚಿಸಿದೆ. ಈ ನಿಟ್ಟಿನಲ್ಲಿ ಕರಡು ನಿಯಮಗಳನ್ನು ಸಿದ್ಧಪಡಿಸಲು ಮತ್ತು ಅಂತಿಮಗೊಳಿಸುವ ಮೊದಲು ಅಭಿಪ್ರಾಯವನ್ನು ಪಡೆಯಲು ನಿರ್ಧರಿಸಲಾಗಿದೆ ಎಂದರು.

ದಾಸನಪುರ, ಕೋಲಾರ ಮತ್ತು ಮೈಸೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿಯಲ್ಲಿ ತಲಾ 50 ಟಿಪಿಡಿ (ಟನ್‌ಗಳು ಪ್ರತಿ ದಿನ) ಜೈವಿಕ ಸಿಎನ್‌ಜಿ ಸ್ಥಾವರಗಳನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

# ಕಸ ತಿನ್ನುವುದಕ್ಕಿಂತ ಪೌಷ್ಠಿಕಯುಕ್ತ ಆಹಾರ ತುಸು ತಿನ್ನಿ

## "ಪೋಷಣ್ ಮಾಸಾಚರಣೆ" ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾ.ಮಹಾವೀರ ಮ.ಕರೆಣ್ಣವರ್



**ದಾವಣಗೆರೆ:** ಪೌಷ್ಠಿಕ ಆಹಾರ ತಯಾರಿ-ಕೆಯು ತಾಯಂದಿರ ಜವಾಬ್ದಾರಿಯಾಗಿದ್ದು ಇಡೀ ಕುಟುಂಬ ಅವರು ತಯಾರಿಸುವ ಪೌಷ್ಠಿಕ ಆಹಾರದ ಮೇಲೆ ಅವಲಂಬಿತವಾಗಿರುತ್ತದೆ. ಆದ್ದರಿಂದ ಕಸ ತಿನ್ನುವುದಕ್ಕಿಂತ ತುಸು ತಿನ್ನಬೇಕು. ಅಂದರೆ ಬೀದಿ ಬದಿಯ ಜಂಕ್ ಫುಡ್ ತಿನ್ನುವುದರ ಬದಲಾಗಿ ಪೌಷ್ಠಿಕತೆಯುಕ್ತ ಆಹಾರ ಸೇವಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಮ ಕರೆಣ್ಣವರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಇವರ ಸಹಯೋಗದಲಿ ಇತ್ತೀಚೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪೌಷ್ಠಿಕಾಂಶವುಳ್ಳ ಆಹಾರ ಸೇವನೆ ಮಾಡುವುದರ ಜೊತೆಗೆ ನಿಸರ್ಗದಲ್ಲಿ ಕಾಲಕಾಲಕ್ಕೆ ದೊರೆಯುವ ಹಣ್ಣು-ತರಕಾರಿ ಸೇವಿಸಬೇಕು. ಇದರಿಂದ ರೋಗ ನಿರೋಧಕ ಶಕ್ತಿಯು ಹೆಚ್ಚುವುದಲ್ಲದೆ, ರೋಗಗಳು ಕಾಣಿಸಿಕೊಂಡಾಗಲೂ ಬೇಗ ಗುಣಮುಖರಾಗಲು ಸಾಧ್ಯವಿದೆ ಎಂದ ಅವರು, ಊಟದ ವಿಷಯದಲ್ಲಿ ಗಂಡು ಹೆಣ್ಣು ಎಂದು ತಾರತಮ್ಯ ಮಾಡದೆ ಎಲ್ಲರೂ ಸರಿಯಾದ ಪ್ರಮಾಣದಲ್ಲಿ ಉತ್ತಮ ಗುಣಮಟ್ಟದ ಆಹಾರ ಪದಾರ್ಥ ಸೇವಿಸಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿ, ಅಪೌಷ್ಠಿಕತೆಯಿಂದಾಗಿ ಹಲವಾರು ಅನಾರೋಗ್ಯದ ಪರಿಸ್ಥಿತಿಗಳು ಉದ್ಭವಿಸಿ, ವಯಸ್ಸು ಹಾಗೂ ಲಿಂಗದ ಭೇದವಿಲ್ಲದೆ ಎಲ್ಲರೂ ಸಂಕಷ್ಟಕ್ಕೆ ಒಳಗಾಗುತ್ತಾರೆ. ಗರ್ಭಿಣಿ ಮಹಿಳೆಯರು ಪೌಷ್ಠಿಕ, ಗುಣಮಟ್ಟದ ಆಧಾರ ಸೇವನೆ ಮಾಡಬೇಕು. ಇದರಿಂದ ಹುಟ್ಟುವ ಮಗುವಿನ ಆರೋಗ್ಯ ಹಾಗೂ ಪೌಷ್ಠಿಕ ಮಟ್ಟ ನಿರ್ಧಾರವಾಗುತ್ತದೆ. ರಕ್ತ ಹೀನತೆಯು ಗರ್ಭಿಣಿ, ಬಾಣಂತಿ ಹಾಗೂ ಕಿಶೋರಿಯರಲ್ಲಿ ಒಂದು ಜ್ವಲಂತ ಸಮಸ್ಯೆಯಾಗಿದ್ದು, ಪ್ರತಿ ದಿನ ಸಮತೋಲನ ಪೌಷ್ಠಿಕತೆ ಆಹಾರವನ್ನು ಸೇವಿಸುವುದರಿಂದ ಮಾತ್ರ ಪರಿಣಾಮಕಾರಿಯಾಗಿ ರಕ್ತ ಹೀನತೆಯನ್ನು ತಡೆಗಟ್ಟುವುದರ ಜೊತೆಗೆ ಆರೋಗ್ಯ ವೃದ್ಧಿಸಿಕೊಳ್ಳಬಹುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್ ಮಾತನಾಡಿ, ಗರ್ಭಿಣಿ ಬಾಣಂತಿ ಮತ್ತು ಮಕ್ಕಳು ಮೊಬೈಲ್ ಬಳಕೆಯಿಂದ ದೂರವಿರಬೇಕು. ಮಕ್ಕಳ ಪಾಲನೆ, ಪೋಷಣೆ ಮೇಲೆ ಹೆಚ್ಚು ಗಮನಹರಿಸಬೇಕು. ಮಕ್ಕಳ ರಕ್ಷಣೆ ಮತ್ತು ಆರೋಗ್ಯಕರವಾದ ಜೀವನ ನಡೆಸಬೇಕೆಂದು ತಿಳಿಸಿದರು.

ಹೊನ್ನೂರು ಪ್ರಾಥಮಿಕ ವೈದ್ಯಾದಿಕಾರಿ ಡಾ.ಎಂ.ಕೆ.ತೃಪ್ತಿ ಕಾರ್ಯಕ್ರಮದ ಕುರಿತು ಉಪನ್ಯಾಸ ನೀಡಿದರು. ತಾಲ್ಲೂಕು ವೈದ್ಯಾಧಿಕಾರಿ ಡಾ. ದೇವರಾಜ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಿ.ಎಸ್.ಅಭಿಕುಮಾರ್,. ಮೇಲ್ವಿಚಾರಕರಾದ ವಿದ್ಯಾ, ಹೆಚ್.ಕವಿತಾ ಹಾಗೂ ಕಛೇರಿಯ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮೇಲ್ವಿಚಾರಕರು, ಎಲ್ಲಾ ಸಿಬ್ಬಂದಿ ವರ್ಗದವರು ಇದ್ದರು.

# ನಮ್ಮ ಸುತ್ತಮತ್ತಲಿನ ಪರಿಸರ ಕಾಪಾಡುವುದು ಪ್ರತಿಯೊಬ್ಬ ನಾಗರೀಕರ ಆದ್ಯ ಕರ್ತವ್ಯ : ಸಂತೋಷ್ ಕುಮಾರ್




**ಹೊನ್ನಾಳಿ :** ಇಂದು ಪರಿಸರವನ್ನು ನಾವು ಸ್ವಚ್ಛವಾಗಿಟ್ಟುಕೊಂಡರೆ ನಮ್ಮನ್ನು ಹಾಗೂ ನಮ್ಮ ಮುಂದಿನ ಪೀಳಿಗೆಯನ್ನು ಪರಿಸರ ಕಾಪಾಡುತ್ತದೆ ನಮ್ಮ ಸುತ್ತಮತ್ತಲಿನ ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬ ನಾಗರೀಕರ ಆದ್ಯ ಕರ್ತವ್ಯವಾಗಿದೆ ಎಂದು ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಹೇಳಿದರು.

ತಾಲೂಕು ಅಡಳಿತ, ಹೊನ್ನಾಳಿ ಪುರಸಭೆವತಿಯಿಂದ ಹಮ್ಮಿಕೊಂಡಿದ್ದ ಸ್ವಚ್ಚತಾ ಇ-ಸೇವೆ- 2025 ಕಾರ್ಯಕ್ರಮದಡಿಯಲ್ಲಿ ಸ್ವಚ್ಛತೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ಲಾಸ್ಟಿಕ್ ಬಳಕೆಯಿಂದ ಸಾರ್ವಜನಿಕರು ದೂರವಿದ್ದು, ತ್ಯಾಜ್ಯವಸ್ತುಗನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವ ಮೂಲಕ ಹಾಗೂ ಅದಷ್ಟು ನಮ್ಮ ಮನೆಗಳ ಹಾಗೂ ಪ್ರದೇಶಗಳ ಸುತ್ತಮುತ್ತ ಗಿಡಗಳನ್ನು ಬೆಳೆಸುವ ಮೂಲಕ, ಪ್ರಕೃತಿದತ್ತವಾದ ನೀರನ್ನು ಹಿತ-ಮಿತವಾಗಿ ಬಳಸುವ ಮೂಲಕ, ಪ್ರತಿಯೊಬ್ಬ ನಾಗರಿಕರೂ ಕೂಡ ಪರಿಸರ ಪ್ರಜ್ಞೆಯನ್ನು ಬೆಳೆಸಿಕೊಂಡಾಗ ಮಾತ್ರ ನಾವು ಮುಂದಿನ ಪೀಳಿಗೆಯವರಿಗೆ ಉತ್ತಮ ಪರಿಸರವನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಅಡಳಿತ, ಪುರಸಭೆ ಜನಪ್ರತಿನಿಧಿಗಳು, ಅಧಿಕಾರಿಗಳು, ಪೌರ ಕಾರ್ಮರಿಕರು ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಪರಿಸರ ಸಂರಕ್ಷಣೆ ಕುರಿತು ಘೋಷಣೆ ಕೂಗಿದರು.

ನಂತರ ತಹಶೀಲ್ದಾರ್ ಸಿ.ರಾಜೇಶ್ ಕುಮಾರ್ ಅವರು ಎಲ್ಲರಿಗೂ ಪರಿಸರ ಸಂರಕ್ಷಣೆ ಕುರಿತು ಪ್ರತಿಜ್ಞಾನವಿಧಿ ಬೋಧಿಸಿದರು. ಪುರಸಭೆ ಮುಖ್ಯಾಧಿಕಾರಿ ಟಿ.ಲೀಲಾವತಿ ಅವರು ಮಾತನಾಡಿ, ಸೆ.17ರಿಂದ ಅಕ್ಟೋಬರ್ 2ರವರೆಗೆ ಏಕ್ ದಿನ್, ಏಕ್ ಘಂಟಾ, ಏಕ್ ಸಾಥ್, ಘೋಷ ವಾಕ್ಯದೊಂದಿಗೆ ಸ್ವಚ್ಛತೋತ್ಸವ ಕಾರ್ಯಕ್ರಮವನ್ನು ಎಲ್ಲಾ

ಸರಕಾರಿ ಕಚೇರಿಗಳು, ಧಾರ್ಮಿಕ ಕೇಂದ್ರಗಳು, ಬ್ಲಾಕ್ ಸ್ಪಾಟ್ ಗಳು, ಸಾರ್ವಜನಿಕ ಪಾರ್ಕ ಮತ್ತು ಸ್ಥಳಗಳು ಹಾಗೂ ವಿವಿಧ ವಾರ್ಡಗಳಲ್ಲಿ ನಡೆಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭಧಲ್ಲಿ ಪುರಸಭೆ ಅಧ್ಯಕ್ಷ ಎ.ಕೆ.ಮೈಲಪ್ಪ, ನ್ಯಾಮತಿ ತಹಶೀಲ್ದಾರ್ ಕವಿರಾಜ್, ಗ್ರೇಡ್-2 ತಹಶೀಲ್ದಾರ್ ಗೋವಿಂದಪ್ಪ, ನ್ಯಾಮತಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಗಣೇಶ್ ರಾವ್, ಹೊನ್ನಾಳಿ ಪುರಸಭೆ ಜನಪ್ರತಿನಿಧಿಗಳು, ಇಂಜಿನಿಯರ್ ದೇವರಾಜ್, ಆರೋಗ್ಯ ಸಹಾಯಕ ಪರಮೇಶ್ ನಾಯ್ಕ, ಸಿದ್ದೇಶ್.ಎ. ಎಸ್.ಐ .ಹರೀಶ್, ಪೌರ ಕಾರ್ಮಿಕರು, ವಿದ್ಯಾರ್ಥಿಗಳು ಇದ್ದರು.

## ಸೆ. 20 ರಂದು ಹಿಂದೂ ಮಹಾಗಣಪತಿ ಗಣೇಶ ವಿಸರ್ಜನಾ ಮೆರವಣೆಗೆ ಸಂಚಾರ ಮಾರ್ಗದಲ್ಲಿ ಬದಲಾವಣೆ

**ದಾವಣಗೆರೆ:** ದಾವಣಗೆರೆ ನಗರದ ಹೈಸ್ಕೂಲ್ ಮೈದಾನದಲ್ಲಿ ಪ್ರತಿಷ್ಠಾಪಿಸಿರುವ ಹಿಂದೂ ಮಹಾಗಣಪತಿ ಮೂರ್ತಿಯ ವಿಸರ್ಜನಾ ಮೆರವಣಿಗೆ ಇರುವುದರಿಂದ ಸಾರ್ವನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಠಿಯಿಂದ ಸೆ.20 ರಂದು ಬೆಳಿಗೆ, 10 ರಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮಾರ್ಗ ಬದಲಾಯಿಸಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಹರಿಹರ ಕಡೆಯಿಂದ ಬಾತಿ ಮೂಲಕ ಹಳೆ ಪಿ.ಬಿ. ರಸ್ತೆ ಮುಖಾಂತರ ಬರುವ ಎಲ್ಲಾ ಭಾರಿ ವಾಹನಗಳು. ಅಂದರೆ ಸರುಕು ಲಾರಿಗಳು ಕೆ.ಎಸ್.ಆರ್.ಟಿ.ಸಿ ಮತ್ತು ಖಾಸಗಿ ಬಸ್‌ಗಳು ಹರಿಹರ ನಗರದಿಂದಲೇ ದಾವಣಗೆರೆ ಕಡೆಗೆ ಬರುವ ಹಳೇ ಪಿ.ಬಿ ರಸ್ತೆಗೆ ಬಾರದೆ ಹರಿಹರದಿಂದ ನೇರವಾಗಿ ಶಿವಮೊಗ್ಗ, ಬೈಪಾಸ್ ಮುಖಾಂತರ ಹೊಸ ಎನ್.ಹೆಚ್-48 ರಸ್ತೆ ಮೂಲಕ ಬಾಡಾ ಕ್ರಾಸ್ ಮುಖಾಂತರ ಅವರಗೆರೆ ಮಾರ್ಗವಾಗಿ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್ ಮುಖಾಂತರ ಎಪಿಎಂಸಿಗೆ ಹೋಗುವುದು. ಕೆ.ಎಸ್.ಆರ್.ಟಿ.ಸಿ ಬಸ್‌ಗಳು ಮೇಲ್ಕಂಡ ಮಾರ್ಗದಲ್ಲಿ ಬಾಡಾ ಕ್ರಾಸ್ ಮುಖಾಂತರ ಅವರಗೆರೆ ಮಾರ್ಗವಾಗಿ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಬೆಂಗಳೂರು, ಬೆಳಗಾವಿ ಕಡೆಗೆ ಹೋಗುವುದು. ನಂತರ ಖಾಸಗಿ ಬಸ್‌ಗಳು ಮೇಲ್ಕಂಡ ಮಾರ್ಗದಲ್ಲಿ ಬಂದು ಎ.ಪಿ.ಎಂ.ಸಿ ಮಾರ್ಕೆಟ್‌ನಲ್ಲಿ ಬಂದು ಪಾರ್ಕಿಂಗ್ ಮಾಡುವುದು

ಚಿತ್ರದುರ್ಗದ ಕಡೆಯಿಂದ ಬರುವ ಸರಕು ಲಾರಿಗಳು ಡಿ.ಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್ ಮುಖಾಂತರ ಎಪಿಎಂಸಿಗೆ ಹೋಗುವುದು ಕೆ.ಎಸ್.ಆರ್.ಟಿ.ಸಿ ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಎಪಿಎಂಸಿ ಹೋಗುವುದು. ಕೆಎಸ್ಆರ್‌ಟಿಸಿ ಬಸ್‌ಗಳು ಮೇಲ್ಕಂಡ ಮಾರ್ಗವಾಗಿ ನೂತನ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಬೆಂಗಳೂರು, ಬೆಳಗಾವಿ ಕಡೆಗೆ ಹೋಗುವುದು. ನಂತರ ಖಾಸಗಿ ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಬಂದು ಎ.ಪಿ.ಎಂ.ಸಿ ಮಾರ್ಕೆಟ್‌ನಲ್ಲಿ ಬಂದು ಪಾರ್ಕಿಂಗ್ ಮಾಡುವುದು. ಜಿಎಂಐಟಿ ಕಾಲೇಜ್ ಹತ್ತಿರ ತಾತ್ಕಾಲಿಕ ರಸ್ತೆ ಬದಿಯಲ್ಲಿ ನಿಲ್ಲಿಸುವಂತಹ ಗೂಡ್ಸ್ ಲಾರಿಗಳು ರಸ್ತೆಯ ಬದಿಯಲ್ಲಿ ನಿಲ್ಲಿಸದೇ ಖಾಸಗಿ ಪಾರ್ಕಿಂಗ್ ವ್ಯವಸ್ಥೆ ಮಾಡಿಕೊಳ್ಳುವುದು. ಚನ್ನಗಿರಿ ಕಡೆಯಿಂದ ಹದಡಿ ಬ್ರಿಡ್ಜ್ ಮೂಲಕ ಬರುವ ಕೆ.ಎಸ್. ಆರ್.ಟಿ.ಸಿ ಬಸ್ ಗಳು ಬಾಡಾ ಕ್ರಾಸ್ ಮೂಲಕ ಆವರಗೆರೆ ಮಾರ್ಗವಾಗಿ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ-ಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಹೋಗುವುದು ನಂತರ ಖಾಸಗಿ ಬಸ್ ಗಳು ಮಾಗನೂರು ಬಸಪ್ಪ ಪೆಟ್ರೋಲ್ ಬಂಕ್ ಹತ್ತಿರದ ಮೈದಾನದಲ್ಲಿ ಪಾರ್ಕಿಂಗ್ ಮಾಡುವುದು ಚನ್ನಗಿರಿ ಕಡೆಯಿಂದ ಸರಕು ಲಾರಿಗಳು ಮೇಲ್ಕಂಡ ಮಾರ್ಗದಲ್ಲಿ ಬಂದು ಎ.ಪಿ.ಎಂ.ಸಿ ಮಾರ್ಕೆಟ್ನಲ್ಲಿ ಬಂದು ಪಾರ್ಕಿಂಗ್ ಮಾಡುವುದು.

ಜಗಳೂರು ಕಡೆಯಿಂದ ಬರುವ ಕೆ.ಎಸ್ಆರ್‌ಟಿಸಿ ಬಸ್ ಗಳು ಬೇತೂರು ರಸ್ತೆ ಮೂಲಕ ಆರ್.ಎಂ.ಸಿ ಫ್ಲೈ ಓವರ್ ಸೇತುವೆ ಮುಖಾಂತರ ಬಂದು ನೂತನವಾಗಿ ನಿರ್ಮಾಣಗೊಂಡಿರುವ ಕೆಎಸ್ಆರ್‌ಟಿಸಿಬಸ್ ನಿಲ್ಯಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಹೋಗುವುದು. ನಂತರ ಜಗಳೂರು ಕಡೆಯಿಂದ ಬರುವ ಖಾಸಗಿ ಬಸ್ ಗಳು ಜಗಳೂರು ಖಾಸಗಿ ಬಸ್ ನಿಲ್ಯಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ ಹೋಗುವುದು. ಹಾಗೂ ಸರಕು ಲಾರಿಗಳು ವೆಂಕಟೇಶ್ವರ ಸರ್ಕಲ್, ಗಣೇಶ ಹೋಟೆಲ್ ಸರ್ಕಲ್ ಮುಖಾಂತರ ಎ.ಪಿ.ಎಂ.ಸಿ ಮಾರ್ಕೆಟ್‌ನಲ್ಲಿ ಬಂದು ಪಾರ್ಕಿಂಗ್ ಮಾಡುವುದು.

ಹರಪನಹಳ್ಳಿ ಕಡೆಯಿಂದ ಕಂಚಿಕೆರೆ ಬೆಂಡಿಗೆರೆ ಮಾರ್ಗವಾಗಿ ದಾವಣಗೆರೆ ನಗರಕ್ಕೆ ಬರುವ ಕೆ.ಎಸ್ಆರ್‌ಟಿಸಿ ಬಸ್ ಗಳು ವೆಂಕಟೇಶ್ವರ ಸರ್ಕಲ್ ಗಣೇಶ, ಹೋಟೆಲ್ ಸರ್ಕಲ್ ಮೂಲಕ ಆರ್.ಎಂ.ಸಿ ಫ್ಲೈ ಓವರ್ ಮುಖಾಂತರ ಬಂದು ನೂತನವಾಗಿ ನಿರ್ಮಾಣಗೊಂಡಿರುವ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ-ಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಹೋಗುವುದು. ನಂತರ ಹರಪನಹಳ್ಳಿ ಕಡೆಯಿಂದ ಕಂಚಿಕೆರೆ ಬೆಂಡಿಗೆರೆ ಮಾರ್ಗವಾಗಿ ದಾವಣಗೆರೆ ನಗರಕ್ಕೆ ಬರುವ ಖಾಸಗಿ ಬಸ್‌ಗಳು ಜಗಳೂರು ಖಾಸಗಿ ಬಸ್ ನಿಲ್ದಾಣಕ್ಕೆ ಬಂದು, ನಂತರ ಅದೇ ಮಾರ್ಗವಾಗಿ ವಾಪಸ್ ಹೋಗುವುದು ಹಾಗೂ ಸರಕು ಲಾರಿಗಳು ವೆಂಕಟೇಶ್ವರ ಸರ್ಕಲ್, ಗಣೇಶ ಹೋಟೆಲ್ ಸರ್ಕಲ್ ಮುಖಾಂತರ ಎ.ಪಿ.ಎಂ.ಸಿ ಮಾರ್ಕೆಟ್‌ನಲ್ಲಿ ಬಂದು ಪಾರ್ಕಿಂಗ್ ಮಾಡುವುದು.

ಸೆ.20 ರಂದು ಬೆಳಿಗ್ಗೆ 10 ರಿಂದ ರಾತ್ರಿ 11 ಗಂಟೆಯವರೆಗೆ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಬಾತಿಕೆರೆಯವರೆಗೆ ಹಳೆ ಪಿ.ಬಿ ರಸ್ತೆಯಲ್ಲಿ ಯಾವುದೇ ಸರ್ಕಾರಿ ಮತ್ತು ಖಾಸಗಿ ಬಸ್‌ಗಳು ಹಾಗೂ ಯಾವುದೇ ರೀತಿಯ ಭಾರಿ ಮತ್ತು ಲಘು ಸರಕು ಸಾಗಣೆ ವಾಹನಗಳು ಮತ್ತು ಯಾವುದೇ ರೀತಿಯ ಭಾರಿ ಮತ್ತು ಲಘು ವಾಹನಗಳು ಸಂಚರಿಸದಂತೆ ಕ್ರಮವಹಿಸಲಾಗಿದೆ ಎಂದು ತಿಳಿಸಿದ್ದಾರೆ.

### ಜಿಲ್ಲೆಗೆ ಉಪ ಲೋಕಾಯುಕ್ತರ ಭೇಟಿ

# ಸಮಸ್ಯೆಗಳಿಗೆ ಪರಿಹಾರದ ಅವಕಾಶ : ಜಿಲ್ಲಾಧಿಕಾರಿ ಮೀನಾ ನಾಗರಾಜ್



**ಚಿಕ್ಕಮಗಳೂರು, ಸೆ.18:** ಗೌರವಾನ್ವಿತ ಉಪಲೋಕಾಯುಕ್ತರು ಸೆಪ್ಟಂಬರ್ 24 ರಿಂದ 25ರವರೆಗೆ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಸ್ಥಳದಲ್ಲಿಯೇ ಸಮಸ್ಯೆಗಳನ್ನು ಪರಿಹರಿಸುವುದರಿಂದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ. ಎನ್ ಹೇಳಿದರು.

ಇಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿದ ಅವರು, ಸೆಪ್ಟಂಬರ್ 24 ರಂದು ಬೆಳಗ್ಗೆ 11 ಗಂಟೆ-ಗೆ ಕುವೆಂಪು ಕಲಾಮಂದಿರದಲ್ಲಿ ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪಲೋಕಾಯುಕ್ತರಾದ ಶ್ರೀ ಕೆ.ಎನ್. ಫಣೀಂದ್ರ ಅವರ ಉಪಸ್ಥಿತಿಯಲ್ಲಿ ಸಾರ್ವಜನಿಕರ ಅಹವಾಲನ್ನು ಸ್ವೀಕರಿಸಿ ಅಲ್ಲಿಯೇ ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಸಮಸ್ಯೆ ಪರಿಹರಿಸಲಾಗುತ್ತದೆ ಎಂದು ಹೇಳಿದರು. ಸೆಪ್ಟೆಂಬರ್ 25 ರಂದು ಬೆಳಿಗ್ಗೆ 9.45 ರಿಂದ 10.45 ಗಂಟೆಯವರೆಗೆ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಬಾರ್ ಅಸೋಸಿಯೇಶನ್ ಸಭಾಂಗಣದಲ್ಲಿ ಬಾರ್ ಅಸೋಸಿಯೇಶನ್ ಸದಸ್ಯರೊಂದಿಗೆ ಸಾರ್ವಜನಿಕ ಆಡಳಿತ ಮತ್ತು ಉತ್ತಮ ಆಡಳಿತದಲ್ಲಿ ವಕೀಲರ ಪಾತ್ರದ ಕುರಿತು ಸಂವಾದ ನಡೆಸುವರು. ಬೆಳಿಗ್ಗೆ 11 ರಿಂದ 1130ರವರೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. 11.30 ರಿಂದ ಮಧ್ಯಾಹ್ನ 1.30ರವರೆಗೆ ಬಾಕಿ ಇರುವ ಪ್ರಕರಣಗಳ ಕುರಿತು ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಈಗಾಗಲೇ ಲೋಕಾಯುಕ್ತರಿಗೆ ನಮ್ಮ ಜಿಲ್ಲೆಯಿಂದ ಸಲ್ಲಿಕೆಯಾಗಿ ಪಟ್ಟಿ ಮಾಡಲಾಗಿರುವ 84 ಪ್ರಕರಣಗಳ ಬಗ್ಗೆ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ವಿಚಾರಣೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಲಾಗುತ್ತದೆ

# ಸೆ.20ಕ್ಕೆ ನಗರದ ಹಿಂದೂ ಮಹಾಗಣಪತಿ ಬೃಹತ್ ಶೋಭಾಯಾತ್ರೆ

**ದಾವಣಗೆರೆ.ಸೆ.18:** ನಗರದ ಹೈಸ್ಕೂಲ್ ಮೈದಾನದಲ್ಲಿ ಹಿಂದೂ ಮಹಾಗಣಪತಿ ಟ್ರಸ್ಟ್ ವತಿಯಿಂದ ಪ್ರತಿಷ್ಠಾಪಿಸಲಾಗಿರುವ 8ನೇ ವರ್ಷದ ಹಿಂದೂ ಮಹಾಗಣಪತಿಯನ್ನು ಇದೇ ಸೆ.20 ರಂದು ಬೃಹತ್ ಶೋಭಾಯಾತ್ರೆ ಮೂಲಕ ವಿಸರ್ಜನೆ ಮಾಡಲಾಗುವುದು ಎಂದು ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಜೊಳ್ಳಿ ಗುರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 1 ಗಂಟೆಯಿಂದ ಶೋಭಯಾತ್ರೆ ಆರಂಭವಾಗಲಿದ್ದು, ಡೋಲು, ಚಂಡೆ, ವೀರಗಾಸೆ, ನಾಸಿಕ್ ಡೋಲ್, ರೋಡ್ ಆರ್ಕೆಸ್ಟ್ರಾ ಸೇರಿದಂತೆ ಹಲವು ಕಲಾ ತಂಡಗಳು, ಕಲಾವಿದರು ಭಾಗಯಾಗಲಿದ್ದಾರೆ. ಶೋಭಯಾತ್ರೆಯು ಎವಿಕೆ ಕಾಲೇಜು ಮುಖಾಂತರ ಅಂಬೇಡ್ಕರ್ ವೃತ್ತ, ಜಯದೇವ ವೃತ್ತ, ಲಾಯರ್ ರೋಡ್ ಮೂಲಕ ಪಿ.ಬಿ.ರಸ್ತೆಗೆ ತೆರಳಿ ಅಲ್ಲಿಂದ ಸಂಗೊಳ್ಳಿ ರಾಯಣ್ಣ ವೃತ್ತಕ್ಕೆ ಕೊನೆಗೊಳ್ಳಲಿದೆ. ನಂತರ ಬಾತಿ ಕೆರೆ ಬಳಿ ಗಣಪತಿ ಮೂರ್ತಿಯನ್ನು ವಿಸರ್ಜನೆ ಮಾಡಲಾಗುವುದು. ಈ ಶೋಭಾಯಾತ್ರೆಗೆ ಸುಮಾರು 2ರಿಂದ 3 ಲಕ್ಷ ಜನ ಸೇರುವ ನಿರೀಕ್ಷೆ ಇದೆ ಎಂದರು.

ರಾಜ್ಯದಲ್ಲಿ ಒಂದು ಕಾನೂನು ಇದ್ದರೆ, ದಾವಣಗೆರೆಯಲೇ ಒಂದು ಕಾನೂನು ಇದೆ ಎನ್ನುವಂತೆ ಜಿಲ್ಲಾಧಿಕಾರಿಗಳು ವರ್ತಿಸುತ್ತಿದ್ದಾರೆ. ಬೇರೆ ಜಿಲ್ಲೆಗಳಲ್ಲಿ ಡಿಜೆ ಗೆ ಅನುಮತಿ ನೀಡಿ-ದ್ದಾರೆ. ಆದರೆ ದಾವಣಗೆರೆಯ ಜಿಲ್ಲಾಡಳಿತ ಡಿಜೆಗೆ ಅನುಮತಿ ನೀಡುತ್ತಿಲ್ಲ. ಇದು ಪೊಲೀಸ್ ಇಲಾಖೆ ನಿರ್ಧಾರ ಎಂದು ಹೇಳುತ್ತಾರೆ. ಆದರೆ ಪೊಲೀಸರು ಜಿಲ್ಲಾಡಳಿತದ ಕಡೆ ಮುಖ ಮಾಡುತ್ತಾರೆ. ಇದು ಹಿಂದೂ ವಿರೋಧಿ ನೀತಿಯಾಗಿದೆ ಎಂದು ಕಿಡಿಕಾರಿದರು. ಪ್ರತಿ ಗ್ರಾಮಗಳಿಂದ ಹಿಂದೂಗಳು ಶೋಭಯಾತ್ರೆಯಲ್ಲಿ ಪಾಲ್ಗೊಳ್ಳಬೇಕು. ಹಿಂದೂಗಳು ಮನೆಯಲ್ಲೇ ಕೂತರೆ ನಮಗೆ ಮಾತ್ರ ದಿನಕ್ಕೊಂದು ಕಾನೂನು ಮಾಡುತ್ತಾರೆ. ಆದ್ದರಿಂದ ನಮ್ಮ ಒಗ್ಗಟ್ಟಿನ ಪ್ರದರ್ಶನ ಮಾಡಬೇಕು ಎಂದು ಕರೆ ನೀಡಿದ ಅವರು, ಜಿಲ್ಲಾಡಳಿತ 'ಡಿಜೆ ಬೇಕೋ, ಬೇಡವೋ ಎಂಬುದರ ಬಗ್ಗೆ ಒಂದು ದಿನದ ಅಭಿಯಾನ ಮಾಡಲಿ, ಅದಕ್ಕೆ ಯಾವ ಉತ್ತರ ಬರಲಿದೆಯೋ ಅದನ್ನು ನಾವು ಪಾಲನೆ ಮಾಡುತ್ತೇವೆ ಎಂದು ಹೇಳಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನೀವು ಪ್ರೀತಿಸುವ ವ್ಯಕ್ತಿಯ ಕಡೆಗಿನ ನಿಮ್ಮ ಒರಟು ವರ್ತನೆ ಸಂಬಂಧದಲ್ಲಿ ಬಹಳಷ್ಟು ಅಸಾಮರಸ್ಯವನ್ನು ತರಬಹುದು.

### ವೃಷಭ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ.

### ಕರ್ಕ ರಾಶಿ

ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಕುಟುಂಬದ ಸಲುವಾಗಿ ಏನಾದರೂ ಉದಾತ್ತ ಮತ್ತು ಉಪಯುಕ್ತವಾದದ್ದರ ಸಲುವಾಗಿ ಶ್ರಮಪಡಿ. ಒಂದು ತಪ್ಪಿದ ಅವಕಾಶ ಮತ್ತೆ ಮರಳದೇ ಇರಬಹುದಾದ್ದರಿಂದ ಹಿಂಜರಿಯಬೇಡಿ.

### ಸಿಂಹ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ - ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಸಂತೋಷದ ಚೈತನ್ಯದಾಯಕ - ಪ್ರಿಯವಾದ ಚಿತ್ತದ - ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ.

### ಕನ್ಯಾ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

### ತುಲಾ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ.

### ವೃಶ್ಚಿಕ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ-ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಧನು ರಾಶಿ

ಸಂಗಾತಿಯೊಡನೆ ಚಲನಚಿತ್ರ - ರಂಗಭೂಮಿ ಅಥವಾ ಊಟ ನಿಮ್ಮನ್ನು ಒಂದು ಶಾಂತ ಮತ್ತು ಅದ್ಭುತವಾದ ಮನಸ್ಥಿತಿಯಲ್ಲಿರುತ್ತದೆ ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ಇಂದು ವಿಶ್ರಾಂತಿ ಪಡೆಯಲು ಸಮಯವಿಲ್ಲ ಬಾಕಿಯಿರುವ ಕೆಲಸಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ.

### ಮಕರ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ. ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ.

### ಕುಂಭ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಸ್ನೇಹಿತರು ಮತ್ತು ಸಂಬಂಧಿಗಳು ಉಪಕಾರ ಮಾಡುತ್ತಾರೆ ಮತ್ತು ನೀವು ಅವರ ಸಂಗದಲ್ಲಿ ಸಾಕಷ್ಟು ಸಂತೋಷವಾಗಿರುವಿರಿ.

### ಮೀನ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು. ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ .

## ಒಂದೇ ದಿನದಲ್ಲಿ 11,786 ಮಹಿಳೆಯರಿಗೆ ಉಚಿತ ಇಸಿಜಿ ಪರೀಕ್ಷೆ

# ಹೊಸ ದಾಖಲೆ ಮಾಡಿದ ನಾರಾಯಣ ಹೆಲ್ತ್

**ಶಿವಮೊಗ್ಗ:** ಭಾರತದ ಅತ್ಯಂತ ಪ್ರತಿಷ್ಠಿತ ವೈದ್ಯಕೀಯ ಸಂಸ್ಥೆ ಆಗಿರುವ ನಾರಾಯಣ ಹೆಲ್ತ್, ಕೇಂದ್ರ ಸರ್ಕಾರದ ಸ್ವಸ್ಥ ನಾರಿ, ಸಶಕ್ತ ಪರಿವಾರ ಅಭಿಯಾನದ ಭಾಗವಾಗಿ ಸೆ.17ರಂದು ಒಂದೇ ದಿನದಲ್ಲಿ ತನ್ನ 20ಕ್ಕೂ ಹೆಚ್ಚು ಆಸ್ಪತ್ರೆಗಳಲ್ಲಿ 11,786 ಮಹಿಳೆಯರಿಗೆ ಉಚಿತ ಇಸಿಜಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಿ ದಾಖಲೆ ಬರೆದಿದೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶದ ಮಹಿಳೆಯರು ಮತ್ತು ಮಕ್ಕಳಿಗೆ ಉತ್ತಮ ವೈದ್ಯಕೀಯ ಸೇವೆ ಒದಗಿಸುವ ಉದ್ದೇಶದಿಂದ ಸೆಪ್ಟೆಂಬರ್ 17ರಂದು ಸ್ವಸ್ಥ ನಾರಿ, ಸಶಕ್ತ ಪರಿವಾರ ಅಭಿಯಾನವನ್ನು ಆರಂಭಿಸಿದರು. ಈ ಯೋಜನೆಗೆ ಕೈ ಜೋಡಿಸಿದ ನಾರಾಯಣ ಹೆಲ್ತ್ ಈ ಮೂಲಕ ಕೇಂದ್ರ ಸರ್ಕಾರದ ಯೋಜನೆಗಳ ಜೊತೆ ಖಾಸಗಿ ವೈದ್ಯಕೀಯ ಸಂಸ್ಥೆಗಳು ಕೆಲಸ ಮಾಡಬೇಕಾದ ಮಹತ್ವವನ್ನು ಸಾರಿದೆ.

ನಾರಾಯಣ ಹೆಲ್ತ್ ನ ಈ ಅಭಿಯಾನದಲ್ಲಿ ಮಹಾನಗರಗಳಿಂದ ಹಿಡಿದು 2ನೇ ಮತ್ತು 3ನೇ ಹಂತದ ನಗರಗಳ ಮಹಿಳೆಯರು ಕೂಡ ಉತ್ಸಾಹದಿಂದ ಭಾಗವಹಿಸಿದರು. ನಾರಾಯಣ ಹೆಲ್ತ್ ನ ಆಸ್ಪತ್ರೆಗಳು, ಹಾರ್ಟ್ ಸೆಂಟರ್ ಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಬೆಳಿಗ್ಗೆ 9:00 ರಿಂದ ಸಂಜೆ 5:00 ರವರೆಗೆ ತೆರೆದಿದ್ದು, ಎಲ್ಲಾ ವಯಸ್ಸಿನ ಮಹಿಳೆಯರಿಗೆ ಯಾವುದೇ ತೊಡಕು ಉಂಟಾಗದ ರೀತಿಯಲ್ಲಿ ಇಸಿಜಿ ಪರೀಕ್ಷೆಯನ್ನು ನಡೆಸಿದವು.

ವಿಶೇಷವೆಂದರೆ ಸಹ್ಯಾದ್ರಿ



ನಾರಾಯಣ ನಲ್ಲಿ ಒಂದೇ ದಿನದಲ್ಲಿ350 ಸಂಖ್ಯೆಯ ಇಸಿಜಿ ಪರೀಕ್ಷೆಗಳು ನಡೆದುವು.

ಈ ಕುರಿತು ಮಾತನಾಡಿದ ನಾರಾಯಣ ಹೆಲ್ತ್ ನ ಸಂಸ್ಥಾಪಕ ಮತ್ತು ಅಧ್ಯಕ್ಷರಾದ ಡಾ. ದೇವಿ ಶೆಟ್ಟಿ ಅವರು, "ಒಂದೇ ದಿನದಲ್ಲಿ 10,000 ಕ್ಕೂ ಅಧಿಕ ಇಸಿಜಿ ಪರೀಕ್ಷೆ ನಡೆಸಿದ್ದು ನಮಗೆ ಖುಷಿ ಕೊಟ್ಟಿದೆ. ಐದು ಸಾವಿರ ಅನ್ನುವುದು ಕೇವಲ ಸಂಖ್ಯೆಯಲ್ಲ, ಬದಲಿದೆ ಇದು ಹೃದಯದ ಆರೋಗ್ಯ ಪಾಲಿಸುವುದು ಮುಖ್ಯ ಎಂದು ಅರಿತುಕೊಂಡು ಆ ನಿಟ್ಟಿನಲ್ಲಿ ಹೆಜ್ಜೆ ಇಟ್ಟ ಮಹಿಳೆಯರ ಯಶಸ್ಸು. ನಾರಾಯಣ ಹೆಲ್ತ್ ನಲ್ಲಿ ನಾವು ರೋಗ ತಡೆಗಟ್ಟುವ ಚಿಕಿತ್ಸೆಯೇ ಆರೋಗ್ಯವಂತ ರಾಷ್ಟ್ರದ ಅಡಿಪಾಯ ಎಂದು ನಂಬಿದ್ದೇವೆ ಮತ್ತು ಆ ನಂಬಿಕೆಗೆ ಪೂರಕವಾಗಿ ಸ್ವಸ್ಥ ನಾರಿ, ಸಶಕ್ತ ಪರಿವಾರ ಯೋಜನೆ ಮೂಡಿ ಬಂದಿದೆ" ಎಂದು ಹೇಳಿದರು.

ನಾರಾಯಣ ಹೆಲ್ತ್ ನ ಗ್ರೂಪ್ ಸಿಇಓ ಡಾ. ಇಮ್ಯಾನುಯೆಲ್ ರೂಪರ್ಟ್ ಅವರು ಮಾತನಾಡಿ, "ದೇಶಾದ್ಯಂತ ನಾವು ಅಭೂತಪೂರ್ವ ಪ್ರತಿಕ್ರಿಯೆಯನ್ನು ಪಡೆದಿದ್ದೇವೆ. ರೋಗ ತಡೆಗಟ್ಟುವ ಚಿಕಿತ್ಸೆಯ ಕುರಿತು ಜಾಗೃತಿ ಹೆಚ್ಚುತ್ತಿರುವುದಕ್ಕೆ ಈ ಅದ್ಭುತ ಪ್ರತಿಕ್ರಿಯೆಯೇ ಸಾಕ್ಷಿಯಾಗಿದೆ.

ಈ ಮೂಲಕ ನಾವು ಕೇವಲ ಪ್ರಮುಖ ನಗರಗಳ ಮಹಿಳೆಯರನ್ನು ಮಾತ್ರವೇ ತಲುಪಿಲ್ಲ, ಬದಲಿಗೆ ಚಿಕ್ಕ ಪಟ್ಟಣಗಳ ಮಹಿಳೆಯರೂ ಇಸಿಜಿ ಪರೀಕ್ಷೆ ಮಾಡಿಸಿಕೊಳ್ಳುವಂತೆ ಮಾಡಿದ್ದೇವೆ. 20ಕ್ಕೂ ಹೆಚ್ಚು ಆಸ್ಪತ್ರೆಗಳಲ್ಲಿನ ನಮ್ಮ ತಂಡಗಳು ಈ ಯೋಜನೆಯನ್ನು ಯಶಸ್ವಿಗೊಳಿಸಲು ದಣಿವರಿಯದೆ ಶ್ರಮಿಸಿವೆ. ಈ ಯಶಸ್ಸು ನಾರಾಯಣ ಹೆಲ್ತ್ ನ ಸಾಮರ್ಥ್ಯವನ್ನು ತೋರಿಸಿಕೊಟ್ಟಿದೆ" ಎಂದು ಹೇಳಿದರು.

ಭಾರತದಲ್ಲಿ ಹೃದಯ ಸಂಬಂಧಿ ಕಾಯಿಲೆಗಳಿಂದ ಶೇ.25ರಷ್ಟು ಸಾವುಗಳು ಉಂಟಾಗುತ್ತಿದ್ದು, ಇದರಲ್ಲಿ ಬಹುಪಾಲು ಮಹಿಳೆಯರೇ ಇದ್ದಾರೆ. ಗ್ಲೋಬಲ್ ಬರ್ಡನ್ ಆಫ್ ಡಿಸೀಸ್ ಸ್ಟಡಿಯ ಪ್ರಕಾರ ಭಾರತದ ಮಹಿಳೆಯರಲ್ಲಿ ಉಂಟಾಗುತ್ತಿರುವ ಸಾವಿಗೆ ಹೃದಯ ಕಾಯಿಲೆಯೇ ಪ್ರಮುಖ ಕಾರಣವಾಗಿದೆ. ಶೇ.18ರಷ್ಟು ಮಹಿಳೆಯರು ಹೃದಯ ಸಮಸ್ಯೆಯಿಂದ ಇಹಲೋಕ ತ್ಯಜಿಸುತ್ತಿದ್ದಾರೆ. ಹೀಗಾಗಿ ಮಹಿಳೆಯರ ಆರೋಗ್ಯ ರಕ್ಷಣೆ ಕಡೆಗೆ ಗಮನ ಹರಿಸಿರುವ ನಾರಾಯಣ ಹಾಸ್ಪಿಟಲ್ ಈ ಮಹತ್ವದ ಕ್ರಮ ಕೈಗೊಂಡಿದೆ.

ಉಚಿತ ಇಸಿಜಿ ಅಭಿಯಾನವು ನಾರಾಯಣ ಹೆಲ್ತ್ ಇತಿಹಾಸದಲ್ಲಿ ಹೊಸ ದಾಖಲೆ ಬರೆದಿದೆ. 2023ರಲ್ಲಿ ಬೆಂಗಳೂರಿನ ನಾರಾಯಣ ಹೆಲ್ತ್ ಸಿಟಿಯು ಒಂದೇ ಸ್ಥಳದಲ್ಲಿ 24 ಗಂಟೆಗಳಲ್ಲಿ 3,797 ಇಸಿಜಿಗಳನ್ನು ನಡೆಸಿ ಗಿನ್ನಿಸ್ ವಿಶ್ವ ದಾಖಲೆಯನ್ನು ಸ್ಥಾಪಿಸಿತ್ತು. ಇದೀಗ ನಾರಾಯಣ ಹೆಲ್ತ್ ತನ್ನ ದಾಖಲೆಯನ್ನು ತಾನೇ ಮುರಿದು ಹೊಸ ದಾಖಲೆ ಬರೆದಿದೆ.

ನಾರಾಯಣ ಹೆಲ್ತ್ ಕುರಿತು:

ಡಾ. ದೇವಿ ಶೆಟ್ಟಿ ಸ್ಥಾಪಿಸಿರುವ ನಾರಾಯಣ ಹೆಲ್ತ್ ಸಂಸ್ಥೆಯ ಕೇಂದ್ರ ಕಚೇರಿ ಬೆಂಗಳೂರಿನಲ್ಲಿದೆ ಮತ್ತು ಈ ಸಂಸ್ಥೆಯು ಜಾಗತಿಕ ಮಟ್ಟದ ವೈದ್ಯಕೀಯ ಸೇವಾ ಕ್ಷೇತ್ರದಲ್ಲಿ ಪ್ರಮುಖ ಸ್ಥಾನವನ್ನು ಪಡೆದಿದೆ. ಭಾರತದ ಅತಿದೊಡ್ಡ ವೈದ್ಯಕೀಯ ಸೇವೆ ಒದಗಿಸುವ ಸಂಸ್ಥೆಗಳಲ್ಲಿ ಒಂದಾಗಿರುವ ನಾರಾಯಣ ಹೆಲ್ತ್ ಸಂಸ್ಥೆಯು ಭಾರತ ಮತ್ತು ಕೆರಿಬಿಯನ್ ಪ್ರದೇಶಗಳಲ್ಲಿ ಪ್ರಾಥಮಿಕ,

ದ್ವಿತೀಯ ಹಂತದ ಮತ್ತು ಸೂಪರ್ ಸ್ಪೆಷಾಲಿಟಿ ವೈದ್ಯಕೀಯ ಸೇವೆಗಳನ್ನು ಒದಗಿಸುತ್ತಾ ಬಂದಿದ್ದು, ಬಹಳ ಪ್ರಸಿದ್ಧವಾಗಿದೆ.

ಸಂಸ್ಥೆಯು ವಿವಿಧ ವೈದ್ಯಕೀಯ ವಿಭಾಗಗಳಲ್ಲಿ ಗುಣಮಟ್ಟದ ಕೇಂದ್ರಗಳು ಮತ್ತು 18,822ರಷ್ಟು ವೃತ್ತಿಪರರ ತಂಡವನ್ನು ಹೊಂದಿದೆ. ಇದರಲ್ಲಿ 3,868 ನುರಿತ ವೈದ್ಯರು ಮತ್ತು ತಜ್ಞರು ಇದ್ದಾರೆ. ಅತ್ಯುತ್ತಮ ಸೌಲಭ್ಯ ಮತ್ತು ತಂಡಗಳ ಮೂಲಕ ಉತ್ಕೃಷ್ಟ ಮಟ್ಟದ ವೈದ್ಯಕೀಯ ಸೇವೆ ಒದಗಿಸುತ್ತದೆ.

ನಾರಾಯಣ ಒನ್ ಹೆಲ್ತ್ (ಎನ್‌ಎಚ್ ಇಂಟಿಗ್ರೇಟೆಡ್ ಕೇರ್) ಮತ್ತು ನಾರಾಯಣ ಹೆಲ್ತ್ ಇನ್ಶೂರೆನ್ಸ್ ಇವು ನಾರಾಯಣ ಹೆಲ್ತ್ ನ ಅಂಗಸಂಸ್ಥೆಗಳಾಗಿವೆ.

# ಕಲಾಕುಂಚದಿಂದ ದಸರಾ ಪ್ರಯುಕ್ತ ಉಚಿತ ವಿವಿಧ ಸ್ಪರ್ಧೆಗಳಿಗೆ ಆಹ್ವಾನ



**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಹಾಗೂ ಕಲಾಕುಂಚ ಮಹಿಳಾ ವಿಭಾಗದ ಸಂಯುಕ್ತಾಶ್ರಯದಲ್ಲಿ ದಸರಾ ಹಬ್ಬದ ಪ್ರಯುಕ್ತ ದಾವಣಗೆರೆಯ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಅಕ್ಟೋಬರ್ 5 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ಮಕ್ಕಳಿಗೆ, ಮಹಿಳೆಯರಿಗೆ, ಪುರುಷರಿಗೆ ಸಾರ್ವಜನಿಕವಾಗಿ ಆಟೋಟ ಸ್ಪರ್ಧೆ, ರಸರಂಜನೆ, ಪ್ರಶ್ನೋತ್ತರ ವಿವಿಧ ಸ್ಪರ್ಧೆಗಳನ್ನು ಉಚಿತವಾಗಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್ ತಿಳಿಸಿದ್ದಾರೆ.

ದಿನಾಂಕ 30-9-2025ರೊಳಗೆ ಈ ಕೆಳಗಿನ ವ್ಯಾಟ್ಸಪ್ ಸಂಖ್ಯೆಗೆ ಹೆಸರು ನೊಂದಾಯಿಸಬೇಕೆಂದು ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ ಪ್ರಕಟಿಸಿದ್ದಾರೆ. ಅವಕಾಶ ವಂಚಿತರಾದ ಪ್ರತಿಭಾವಂತ ಪ್ರತಿಭೆಗಳನ್ನು ಅನಾವರಣಗೊಳಿಸಲು ಮುಕ್ತವಾದ ವೇದಿಕೆಯನ್ನು ಕಲ್ಪಿಸುವ ಸದುದ್ದೇಶದಿಂದ ಈ ಸಮಾರಂಭ ಮಾಡಲಾಗಿದ್ದು ದಾವಣಗೆರೆ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಇರುವ ಪ್ರತಿಭಾವಂತರು ಹೆಸರು ನೊಂದಾಯಿಸಬೇಕಾಗಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ. ಹೆಸರು ನೊಂದಾಯಿಸುವ ವ್ಯಾಟ್ಸಪ್ ಸಂಖ್ಯೆ : 9945785170, 9743897578.

# ಲೋಕಿಕೆರೆಯಲ್ಲಿ ಆರ್ಥಿಕ ಸಾಕ್ಷರತಾ ಕಾರ್ಯಕ್ರಮ



**ದಾವಣಗೆರೆ:** ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್ ವತಿಯಿಂದ ತಾಲ್ಲೂಕಿನ ಲೋಕಿಕೆರೆ ಗ್ರಾಮದಲ್ಲಿ ಮೈಕ್ರೋ ಫೈನಾನ್ಸ್ ಜಾಗೃತಿ ಕಾರ್ಯಕ್ರಮದ ಅಡಿಯಲ್ಲಿ ಬುಧವಾರ 'ಆರ್ಥಿಕ ಸಾಕ್ಷರತಾ ಕಾರ್ಯಕ್ರಮ' ಆಯೋಜಿಸಲಾಗಿತ್ತು.

ಆರ್ಥಿಕ ವಿಷಯಗಳ ಬಗ್ಗೆ ಜನರಿಗೆ ಉತ್ತಮ ತಿಳುವಳಿಕೆಯನ್ನು ನೀಡುವುದು ಹಾಗೂ ಔಪಚಾರಿಕ ಹಣಕಾಸು ಸಂಸ್ಥೆಗಳ ಬಗ್ಗೆ ಸಾರ್ವಜನಿಕರ ತಿಳುವಳಿಕೆಯನ್ನು ವೃದ್ಧಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ

' ಎಂದು ಸಹಾಯಕ ಉಪಾಧ್ಯಕ್ಷ ಎಂ.ಎಸ್. ಮಂಜುನಾಥ ತಿಳಿಸಿದರು.

ಎಲ್ಲಾ ಮೈಕ್ರೋಫೈನಾನ್ಸ್ ಕಂಪನಿಗಳು ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ನಿಯಂತ್ರಿಸಲ್ಪಡುತ್ತವೆ. ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ ಅಧ್ಯಾದೇಶ 2025 ಅನಿಯಂತ್ರಿತ ಘಟಕಗಳ ಕಾರ್ಯಾಚರಣೆಗಳನ್ನು ನಿಯಂತ್ರಿಸುವ ಉದ್ದೇಶವನ್ನು ಹೊಂದಿದೆ ಮತ್ತು ಈ ಸುಗ್ರೀವಾಜ್ಞೆಯು ಭಾರತೀಯ ರಿಸರ್ವ್ ಬ್ಯಾಂಕಿನಲ್ಲಿ ನೋಂದಾಯಿಸಲಾದ ಬ್ಯಾಂಕ್‌ಗಳು, ಸಣ್ಣ ಹಣಕಾಸು ಬ್ಯಾಂಕುಗಳು, ಬ್ಯಾಂಕೇತರ ಹಣಕಾಸು ಕಂಪನಿ ಮೈಕ್ರೋಫೈನಾನ್ಸ್ ಸಂಸ್ಥೆಗಳಿಗೆ ಅನ್ವಯಿಸುವುದಿಲ್ಲ ಎಂಬುದನ್ನು ತಿಳಿಸಿದರು.

ಸಾಲಗಾರರು ಮರುಪಾವತಿಯಲ್ಲಿ ತೊಂದರೆಗಳನ್ನು ಎದುರಿಸುತ್ತಿದ್ದರೆ ಅಥವಾ ಸೇವೆಗಳಿಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳನ್ನು ಹೊಂದಿದ್ದರೆ ಮತ್ತು ನಿಯಂತ್ರಿತ ಸಂಸ್ಥೆಯು ಒದಗಿಸಿದ ಪರಿಹಾರವು

ತೃಪ್ತಿಕರವಾಗಿಲ್ಲದಿದ್ದರೆ, ಸಾಲಗಾರರು ಮೈಕ್ರೋಫೈನಾನ್ಸ್ ನ ಗ್ರಾಹಕರ ಕುಂದುಕೊರತೆ ಪರಿಹಾರ ಕಾರ್ಯವಿಧಾನ ಅಥವಾ ಜಿಲ್ಲಾಡಳಿತ ಅಥವಾ ಆರ್ ಬಿಐ ನ್ನು ಸಂಪರ್ಕಿಸಬಹುದು ಎಂದು ಹೇಳಿದರು.

ಸೈಬರ್ ಕ್ರೈಂ ನಿರೀಕ್ಷಕ ವಸಂತ್, ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕಿನ ಸಿಎಸ್‌ಆರ್ ವಿಭಾಗದ ಹಿರಿಯ ವ್ಯವಸ್ಥಾಪಕ ಪರಮೇಶ್ವರಪ್ಪ, ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕಿನ ಅಭಯ್ ಕುಮಾರ್ ಲಟ್ಟಿಮರಡೆ, ಆರ್ಥಿಕ ಸಾಕ್ಷರತಾ ಸಂಯೋಜಕರಾದ ಕವಿತಾ. ಗ್ರಾಮದ ಮುಖಂಡರುಗಳಾದ ಸಿ.ಪಿ. ಮೃತ್ಯುಂಜಯ, ರವಿ ಕುಮಾರ್, ಸುರೇಶ್ ಮತ್ತಿತರರು ಭಾಗವಹಿಸಿದ್ದರು.

# ದಾವಣಗೆರೆಯ ಮತ್ತು ಹರಿಹರ ರೈಲು ನಿಲ್ದಾಣಗಳಲ್ಲಿ ಸ್ವಚ್ಛತಾ ಹಿ ಸೇವಾ ಅಭಿಯಾನದ ಚಟುವಟಿಕೆಗೆ ಚಾಲನೆ

**ದಾವಣಗೆರೆ :** ನೈಋತ್ಯ ರೈಲ್ವೆ, ಮೈಸೂರು ವಿಭಾಗವು ಸ್ವಚ್ಛತೆ ಹಿ ಸೇವಾ ಅಭಿಯಾನವು ಸೆಪ್ಟೆಂಬರ್ 17 ರಿಂದ ಆರಂಭಿಸಿದ್ದು, ಇದು ಅಕ್ಟೋಬರ್ 2 ರವರೆಗೆ ಮುಂದುವರಿಯಲಿದೆ.

ಕಾರ್ಯಕ್ರಮದ ಅಂಗವಾಗಿ ವಿಭಾಗದ ವಿವಿಧ ಸ್ಥಳಗಳಲ್ಲಿ ಶ್ರಮದಾನ ಚಟುವಟಿಕೆಗಳನ್ನು ನಡೆಸಲಾಯಿತು.

ರೈಲ್ವೆ ಅಧಿಕಾರಿಗಳು, ಸಿಬ್ಬಂದಿ, ಸ್ವಯಂಸೇವಾ ಸಂಸ್ಥೆಗಳು ಹಾಗೂ ಒಪ್ಪಂದದ ಸಿಬ್ಬಂದಿಗಳು ರೈಲ್ವೆ ನಿಲ್ದಾಣಗಳ ಆವರಣದಲ್ಲಿ ನಡೆದ ಶ್ರಮದಾನದಲ್ಲಿ ಭಾಗವಹಿಸಿ, ಪ್ರಯಾಣಿಕರು ಮತ್ತು ನಾಗರಿಕರಿಗೆ ಸ್ವಚ್ಛ ಹಾಗೂ ಹಸಿರು ಪರಿಸರವನ್ನಾಗಿಸಲು ಕೈಜೋಡಿಸಿದರು. ಸಂಕಲ್ಪ ಸೇವಾ ಫೌಂಡೇಶನ್ (ದಾವಣಗೆರೆ), ಹಾಗೂ ವಿವಿಧ ಸ್ವಯಂಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ನಾಟಕಗಳು, ಜಾಗೃತಿ ಜಾಥಾ ಮತ್ತು ಶ್ರಮದಾನ ಚಟುವಟಿಕೆಗಳನ್ನು ನಡೆಸಿ, ಸ್ವಚ್ಛತಾ ಸಂದೇಶ



ಪ್ರಚಾರ ಮಾಡಿದರು. ಈ ಅಭಿಯಾನವು ಸ್ವಚ್ಛತೆ, ಸಾರ್ವಜನಿಕರ ಭಾಗವಹಿಸುವಿಕೆ ಹಾಗೂ ಜಾಗೃತಿಯನ್ನು ಉತ್ತೇಜಿಸಲು ಪ್ರಯತ್ನಿಸುತ್ತದೆ.

ದಾವಣಗೆರೆ ಮತ್ತು ಹರಿಹರ ರೈಲು ನಿಲ್ದಾಣಗಳಲ್ಲಿ ಸಿಬ್ಬಂದಿಗಳು, ಗುತ್ತಿಗೆದಾರ ಮತ್ತು ಸ್ವಯಂ ಸೇವಾ ಸಂಸ್ಥೆಗಳು ಸ್ವಚ್ಛತಾ ಪ್ರತಿಜ್ಞೆಯನ್ನು ಕೈಗೊಂಡು ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಂಡರು.

## ತೀವ್ರಗೊಳಿಸಿದ ಐಇಸಿ ಪ್ರಚಾರಾಂದೋಲನ ನಿಮಿತ್ಯ

# ಎಚ್.ಐ.ವಿ/ ಏಡ್ಸ್ ಜಾಗೃತಿಗಾಗಿ ಬೈಕ್ ರ್‍ಯಾಲಿ

**ಗದಗ :** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಲಾಖೆ ಸಹಯೋಗದಲ್ಲಿ ತೀವ್ರಗೊಳಿಸಿದ ಎಚ್‌ಐವಿ ಏಡ್ಸ್ ಪ್ರಚಾರಾಂದೋಲನ ಬೈಕ್ ರ್‍ಯಾಲಿಗೆ ಡಿಟಿಓ ಡ್ಯಾಪ್ಕೋ ಅಧಿಕಾರಿ ಡಾ. ಅರುಂಧತಿ ಕೆ ಬುಧವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಚಾಲನೆ ನೀಡಿದರು.

ಬೈಕ್ ರ್‍ಯಾಲಿಯು ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಟಿಪ್ಪು ಸರ್ಕಲ್ , ಮುಳಗುಂದ ನಾಕಾ, ಜುಮ್ಮಾ ಮಸೀದಿ, ಟಾಂಗಾ ಕೂಟ , ಮಹೇಂದ್ರ ಕರ ಸರ್ಕಲ್ , ಗಾಂಧಿ ಸರ್ಕಲ್ , ಪೋಸ್ಟ್ ಆಫೀಸ್ ಮುಂದೆ



ಸಾಗಿ ನಗರದ ಕೆ.ಸಿ.ರಾಣಿ ರೋಡ್ ದಲ್ಲಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಬಂದು ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ನೌಕರರ ಸಂಘದ ಅಧ್ಯಕ್ಷ ಡಾ.ಬಸವರಾಜ ಬಳ್ಳಾರಿ, ಜಿಲ್ಲಾ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿ, ಆರೋಗ್ಯ ಇಲಾಖೆಯ ಎನ್ ಟಿ ಇಪಿ , ಡ್ಯಾಪ್ಕೋ, ಐಸಿಟಿಸಿ ,ಎಆರ್‌ಟಿ ಸಿಬ್ಬಂದಿ, ರಕ್ಷಣೆ ಸೃಷ್ಟಿ ಸಂಕುಲ, ನವಚೇತನ ಮತ್ತು ಚೈತನ್ಯ ಸಂಸ್ಥೆಯ ಸಿಬ್ಬಂದಿಗಳು ಹಾಜರಿದ್ದರು.

## ನಿಧನ ಸುದ್ಧಿಗಳು

### ಆಸಿಯಾ ಬೀ ನಿಧನ

**ದಾವಣಗೆರೆ :** ಸಿಟಿ ಕೆ.ಟಿ.ಜೆ. ನಗರ, 14ನೇ ಕ್ರಾಸ್, 3ನೇ ಮೇನ್ ವಾಸಿ ಮಾಯಕೊಂಡದ ದಿ. ಸೈಯ್ಯದ್ ತಾಜ್‌ಪೀರ್ ಸಾಬ್ ಅವರ ಪತ್ನಿ ಆಸಿಯಾ ಬೀ (80) ಇವರು ದಿನಾಂಕ 17.09.2025ರ ಬುಧವಾರ ಬೆಳಿಗ್ಗೆ 4ಕ್ಕೆ ನಿಧನರಾದರು.

ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 18.09.2025ರ ಗುರುವಾರ ಬೆಳಿಗ್ಗೆ 9ಕ್ಕೆ ನಗರದ ಪಿ.ಬಿ.ರಸ್ತೆಯ ಹಳೇ ಖಬರಸ್ಥಾನದಲ್ಲಿ ನೆರವೇರಿದೆ.

### ಶ್ರೀಮತಿ ರಂಗಮ್ಮ ನಿಧನ

**ಹರಿಹರ :** ತಾಲ್ಲೂಕು, ಮಲೇಬೆನ್ನೂರು ವಾಸಿ ದಿ. ಪಕ್ಕೀರಪ್ಪನವರ ಧರ್ಮಪತ್ನಿ ಹಾಗೂ ದಾವಣಗೆರೆ ಜಿಲ್ಲಾ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಪಿ ನಾಗರಾಜ್ ಅವರ ತಾಯಿ ಶ್ರೀಮತಿ ರಂಗಮ್ಮನವರು ದಿನಾಂಕ 17.09.2025ರ ಬುಧವಾರ ಮಧ್ಯಾಹ್ನ 3 ಗಂಟೆಗೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.

ಮೃತರಿಗೆ 94 ವರ್ಷ ವಯಸ್ಸಾಗಿತ್ತು. ಮೂವರು ಪುತ್ರರು, ಇಬ್ಬರು ಪುತ್ರಿಯರು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 18.09.2025 ರ ಗುರುವಾರ ಮಧ್ಯಾಹ್ನ 12ಕ್ಕೆ ಮಲೇಬೆನ್ನೂರಿನಲ್ಲಿರುವ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಯಶೋಧ ನಿಧನ

**ದಾವಣಗೆರೆ :** ಪಿ.ಜೆ. ಬಡಾವಣೆ, 1ನೇ ಕ್ರಾಸ್ ರೈತರ ಬೀದಿ ವಾಸಿ ಮಡಿವಾಳರ ಅಜ್ಜಯ್ಯ ಇವರ ಧರ್ಮಪತ್ನಿ ಯಶೋಧ (48) ದಿನಾಂಕ: 17.09.20250 ಬುಧವಾರ ಸಂಜೆ 6ಕ್ಕೆ ನಿಧನರಾದರು. ಪತಿ, ಇಬ್ಬರು ಪುತ್ರರು,

ಸೊಸೆ ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 18.09.2025ರ ಗುರುವಾರ ಮಧ್ಯಾಹ್ನ 12ಕ್ಕೆ ಗಾಂಧಿನಗರದ ಸಾರ್ವಜನಿಕ ಹಿಂದೂ ರುದ್ರಭೂಮಿಯಲ್ಲಿ ನೆರವೇರಿದೆ

ಮಲೇಬೆನ್ನೂರು ದುಃಖತಪ್ತ ಕುಟುಂಬ ವರ್ಗ, ಟಿ.ಪಿ. ನಾಗರಾಜ್. 9986337093

# ಸ್ವಸ್ಥ ನಾರಿ-ಸಶಕ್ತ ಪರಿವಾರ ಅಭಿಯಾನ" ಕಾರ್ಯಕ್ರಮ

## ಸೆ.17 ರಿಂದ ಅ.02 ರವರೆಗೆ ಮಹಿಳೆಯರು, ಮಕ್ಕಳ ಆರೋಗ್ಯ ತಪಾಸಣೆಗಾಗಿ ವಿಶೇಷ ಆರೋಗ್ಯ ಶಿಬಿರ: ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಕೇಂದ್ರ ಸರ್ಕಾರದ "ಸ್ವಸ್ಥನಾರಿ ಸಶಕ್ತ ಪರಿವಾರ ಅಭಿಯಾನ" ಮತ್ತು ಎಂಟನೇ 'ಪೋಷಣ್ ಮಾಹೆ' ಕಾರ್ಯಕ್ರಮಕ್ಕೆ ಪ್ರಧಾನಿಮಂತ್ರಿ ಮೋದಿ ಅವರು ದೇಶದಾದ್ಯಂತ ಏಕಕಾಲಕ್ಕೆ ವರ್ಚುವಲ್ ಮೂಲಕ ಚಾಲನೆ ನೀಡಿದ್ದು, ಮುಖ್ಯವಾಗಿ ಮಹಿಳೆಯರ ಮತ್ತು ಮಕ್ಕಳ ಆರೋಗ್ಯ ಸಮಸ್ಯೆಗಳನ್ನು ಗುರ್ತಿಸಿ ಚಿಕಿತ್ಸೆ ನೀಡುವಂತೆ ಈ ಅಭಿಯಾನದ ಮೂಲಕ ಸೇವಾ ಸೌಲಭ್ಯಗಳನ್ನು ಒದಗಿಸುವುದಾಗಿದೆ.

ಈ ಅಭಿಯಾನದ ಹಿನ್ನಲೆಯಲ್ಲಿ ಬುಧವಾರ ಜಿಲ್ಲಾ ಆಸ್ಪತ್ರೆಯಲ್ಲಿ ಹಮ್ಮಿಕೊಂಡ ಶಿಬಿರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ವರ್ಚುವಲ್ ಮೂಲಕ ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು, ಸ್ವಸ್ಥ ನಾರಿ-ಸಶಕ್ತ ಪರಿವಾರ ಅಭಿಯಾನದ ಭಾಗವಾಗಿ ಜಿಲ್ಲೆಯಲ್ಲಿ ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2 ರವರೆಗೆ ಮಹಿಳೆಯರು, ಮಕ್ಕಳ ನಿರ್ದಿಷ್ಟ ಆರೋಗ್ಯ ಮತ್ತು ಪೌಷ್ಟಿಕಾಂಶದ ಅಗತ್ಯತೆಗಳನ್ನು ಪೂರೈಸಲು ಆಯುಷ್ಮಾನ್ ಆರೋಗ್ಯ ಮಂದಿರ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ಶಿಬಿರಗಳನ್ನು ನಡೆಸಲಾಗುವುದು ಎಂದು ತಿಳಿಸಿದರು.

ಎಲ್ಲಾ ಮಹಿಳೆಯರಿಗೆ ವೈದ್ಯಕೀಯ ಪರೀಕ್ಷೆ ಮತ್ತು ಇತರೆ ಸೇವೆ: ಕಿವಿ, ಕಣ್ಣು, ಮೂಗು, ಗಂಟಲು, ರಕ್ತದೊತ್ತಡ, ಮಧುಮೇಹ ಮತ್ತು ದಂತ ಪರೀಕ್ಷೆ, ಕ್ಯಾನ್ಸರ್-ಬಾಯಿ/ಸ್ತನ/ಗರ್ಭಾಶಯದ ಬಾಯಿ ಪರೀಕ್ಷೆ ಗರ್ಭಿಣಿ ಮಹಿಳೆಯರಿಗಾಗಿ ಪ್ರಸವಪೂರ್ವ



ಪರೀಕ್ಷೆ, ಲಸಿಕೆ ಸೇವೆಗಳು, ರಕ್ತಹೀನತೆ ಮಟ್ಟ, ಲಿಮನಸ್ ಸೌಲಭ್ಯಗಳು, ಕ್ಷಯರೋಗ ಪರೀಕ್ಷೆ ಸೇರಿದಂತೆ ಎಲ್ಲಾ ವೈದ್ಯಕೀಯ ಪರೀಕ್ಷೆ ಮತ್ತು ಇತರೆ ಸೇವೆಗಳನ್ನು ಒದಗಿಸಲಾಗುತ್ತದೆ ಎಂದು ಅವರು ತಿಳಿಸಿದರು.

ತಾಯಿ ಮತ್ತು ಮಗು ರಕ್ಷಣೆ ಕಾರ್ಡ್, ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ನೋಂದಣಿ, ಆಯುಷ್ಮಾನ್ ವಯ್ ವಂದನಾ ಕಾರ್ಡ್, ಪೌಷ್ಠಿಕ ಆಕರ್‌ನಲ್ಲಿ ಫಲಾನುಭವಿಗಳ ನೋಂದಣಿ ಮೂಲಕ ಆರೋಗ್ಯ ಸೇವೆಗಳ ಪ್ರವೇಶ ಸುಲಭಗೊಳಿಸಲು ಅನುಕೂಲವಾಗುತ್ತದೆ ಎಂದು ಅವರು ಹೇಳಿದರು.

ಮುಖ್ಯವಾಗಿ ಆರೋಗ್ಯಕರ ಜೀವನಶೈಲಿ ಮತ್ತು ಆರೋಗ್ಯ ಮಾನದಂಡಗಳನ್ನು ಕಾಯ್ದುಕೊಳ್ಳಬೇಕು. ಸಕ್ಕರೆ ಮತ್ತು ಆಹಾರ ಎಣ್ಣೆಗಳಲ್ಲಿ ಶೇ.10ರಷ್ಟು ಸೇವನೆ ಇಳಿಕೆಯಿಂದ ದೇಹದ ಕೊಬ್ಬು ಕಡಿಮೆ ಮಾಡಬೇಕು. ಸ್ಥಳೀಯ ಮತ್ತು ಪ್ರಾದೇಶಿಕ ಆಹಾರಕ್ಕೆ ಆದ್ಯತೆ ನೀಡಬೇಕು. ಋತುಚಕ್ರದ ಸ್ವಚ್ಛತೆ ಮತ್ತು ಪೌಷ್ಟಿಕಾಂಶದ ಬಗ್ಗೆ ಅರಿವು ಹೊಂದಬೇಕು ಎಂದು ಅವರು ತಿಳಿಸಿದರು.

ರಕ್ತದಾನ ಶಿಬಿರ, ನಿಕ್ಷಯ್ ಮಿತ್ರ ಸ್ವಯಂ ಸೇವಕರ ನೋಂದಣಿ, ಅಂಗಾಂಗ ದಾನ ನೋಂದಣಿಯಲ್ಲಿ ನಾಗರಿಕರ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಅವರು ವಿನಂತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಗಳು, ಶುಶೂಷ್ರಾಧಿಕಾರಿಗಳು ಸೇರಿದಂತೆ ಮಹಿಳೆಯರು ಹಾಗೂ ಸಾರ್ವಜನಿಕರು ಹಾಜರಿದ್ದರು.

# ಮಹಾ ಪುರುಷರು ಸಮ ಸಮಾಜ ನಿರ್ಮಿಸಲು ಶ್ರಮಿಸಿದವರು

## ವಿಶ್ವಕರ್ಮಜಯಂತಿಯಲ್ಲಿ ಶಾಸಕ ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ಸಮ ಸಮಾಜವನ್ನು ನಿರ್ಮಾಣ ಮಾಡಲು, ವಿಶ್ವಕರ್ಮರಂತಹ ಮಹಾ ಪುರುಷರು ಶ್ರಮಿಸಿದ್ದಾರೆ ಎಂದು ಚಿಕ್ಕಮಗಳೂರು ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ಜಿಲ್ಲಾಡಳಿತದ ವತಿಯಿಂದ ನಗರದ ಕುವೆಂಪು ಕಲಾಮಂದಿರದಲ್ಲಿ ಇಂದು ನಡೆದ ಶ್ರೀ ವಿಶ್ವಕರ್ಮ ಜಯಂತಿ ಆಚರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜಕ್ಕೆ ಬಸವಣ್ಣನವರು, ಕನಕದಾಸರು, ವಿಶ್ವಕರ್ಮರು, ಅಂಬೇಡ್ಕರ್, ಮಹರ್ಷಿ ವಾಲ್ಮೀಕಿಯವರಂತಹ ಮಹನೀಯರ ಕೊಡುಗೆ ಅಪಾರ. ಈ ಪ್ರಪಂಚ ಇರುವವರೆಗೂ ಈ ಮಹಾಪುರುಷರು ತಮ್ಮ ವಿಚಾರಧಾರೆಗಳಿಂದ ಬದುಕಿರುತ್ತಾರೆ ಎಂದು ತಿಳಿಸಿದರು.

ಶ್ರೀ ವಿಶ್ವಕರ್ಮ ಜನಾಂಗದವರು ಅವರದೇ ಆದ ವಿಶಿಷ್ಟವಾದ ರೀತಿಯ ಕಲೆ ಕರಗತ ಮಾಡಿಕೊಂಡವರು. ದೊಡ್ಡ ಬಂಡೆಕಲ್ಲುಗಳನ್ನು ಶಿಲೆಯನ್ನಾಗಿ ಹಾಗೂ ಮರದ ತೊಲೆಗಳನ್ನು ಕೆತ್ತನೆ ಮಾಡುವ ಮೂಲಕ ಮೂರ್ತಿಯ ಸ್ವರೂಪ ನೀಡುವುದಿದೆಯಲ್ಲ ಅದು ನಿಜಕ್ಕೂ ವಿಶೇಷವಾದದ್ದು ಎಂದರು.

ವಿಶ್ವದ ಶಿಲ್ಪಕಲೆಯ ಪ್ರಥಮ ಗುರುಗಳು ಇದ್ದರೆ ಅದು ವಿಶ್ವಕರ್ಮರು ಮಾತ್ರ. ಇತ್ತೀಚೆಗೆ ವೈವಿಧ್ಯಮಯವಾದ ವಾಸ್ತುಶಿಲ್ಪಗಳು, ತಂತ್ರಜ್ಞಾನಗಳು ಬಂದಿರಬಹುದು. ಹೀಗಿದ್ದರೂ ವಿಶ್ವಕರ್ಮರು ಹಾಗೂ ಅವರ ಶಿಲ್ಪಕಲೆಯನ್ನು ಮರೆಯಲು ಸಾಧ್ಯವಿಲ್ಲ. ಸಂಸ್ಕೃತಿಯ ದೈವಶಕ್ತಿಯಾಗಿರುವ ವಿಶ್ವಕರ್ಮರು, ಮಹತ್ತರವಾದ ನಗರಗಳನ್ನು, ಪುಷ್ಪಕ ವಿಮಾನ, ಬಗೆಬಗೆಯ ಅಸ್ತ್ರ-ಶಸ್ತ್ರಗಳನ್ನು ಸೃಷ್ಟಿಸಿ ಕೊಟ್ಟಿರುವುದು ವರ್ಣನೆಗೂ ಮೀರಿರುವಂತಹದ್ದು. ಬೇಲೂರು ಮತ್ತು ಹಳೇಬೀಡು ದೇವಾಲಯಗಳನ್ನು ನಿರ್ಮಿಸಿದ ಜಕಣಾಚಾರಿ ಹಾಗೂ ಡಂಕಣಾಚಾರಿಯವರನ್ನು ಮರೆಯುವಂತಿಲ್ಲ.



ಬಂಗಾರದ ಒಡವೆಗಳ ತಯಾರಿಕೆ ಕೂಡ ವಿಶ್ವಕರ್ಮ ಸಮುದಾಯದ ವಿಶೇಷತೆ ಎಂದೇ ಹೇಳಬೇಕು. ಈ ಹಿನ್ನೆಲೆಯಲ್ಲಿ ವಿಶ್ವಕರ್ಮ ಸಮುದಾಯದ ಶ್ರಮ ಹಾಗೂ ನಿರಂತರ ಕ್ರಿಯಾಶೀಲತೆ ಅವರ ಆದರ್ಶವನ್ನು ಬಿಂಬಿಸುತ್ತದೆ ಎಂದು ಹೇಳಿದರು.

ಶ್ರೀ ವಿಶ್ವಕರ್ಮರ ಬಗ್ಗೆ ಹಾಸನದ ಎಚ್.ಕೆ.ಎಸ್. ಕಾಲೇಜಿನ ಕನ್ನಡ ಉಪನ್ಯಾಸಕ ಎಂ.ರಮೇಶ್ ಉಪನ್ಯಾಸ ನೀಡಿ, ವಿಶ್ವಕರ್ಮರಿಗೆ ಕಲೆ ರಕ್ತಗತವಾಗಿ, ವಂಶಪಾರಂಪರ್ಯವಾಗಿ ಕರಗತವಾಗಿರುವಂತಹದು. ಅವರು ದೈವಸಂಭೂತ ಅಂಶಗಳನ್ನು ಹೊಂದಿದ್ದವರು ಎಂದರಲ್ಲದೆ, ಪುರಾಣದ ಪ್ರಸಂಗಗಳನ್ನು ವರ್ಣಿಸಿದರು.

ತಾಲ್ಲೂಕು ಕಚೇರಿಯ ಉಪತಹಸೀಲ್ದಾರ್ ರಾಮರಾವ್ ದೇಸಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಶ್ವಕರ್ಮ ಸಮಾಜದ ಅಧ್ಯಕ್ಷ ಉಮಾಶಂಕರ್, ಶಿಲ್ಪ ಕಲಾವಿದ ವಿಶ್ವಕರ್ಮ ಆಚಾರ್, ತಾಲ್ಲೂಕು ಅಧ್ಯಕ್ಷ ದಿವಾಕರ್, ಮಹಿಳಾ ಸಂಘದ ಅಧ್ಯಕ್ಷರಾದ ಮಂಜುಳಾ ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಭಾಗವಹಿಸಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿ.ರಮೇಶ್ ಸ್ವಾಗತಿಸಿದರು.

**ವಿಶ್ವದ ಶಿಲ್ಪಕಲೆಯ ಪ್ರಥಮ ಗುರುಗಳು ಇದ್ದರೆ ಅದು ವಿಶ್ವಕರ್ಮರು ಮಾತ್ರ. ಇತ್ತೀಚೆಗೆ ವೈವಿಧ್ಯಮಯವಾದ ವಾಸ್ತುಶಿಲ್ಪಗಳು, ತಂತ್ರಜ್ಞಾನಗಳು ಬಂದಿರಬಹುದು. ಹೀಗಿದ್ದರೂ ವಿಶ್ವಕರ್ಮರು ಹಾಗೂ ಅವರ ಶಿಲ್ಪಕಲೆಯನ್ನು ಮರೆಯಲು ಸಾಧ್ಯವಿಲ್ಲ.**

## ಕುವೆಂಪು ವಿವಿ ಕುಲಸಚಿವರಾಗಿ ಪ್ರೊ.ಆರ್.ತಿಮ್ಮರಾಯಪ್ಪ

**ಚಿಕ್ಕಮಗಳೂರು:** ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವ(ಮೌಲ್ಯಮಾಪನ)ರಾಗಿ ಪ್ರೊ.ಆರ್.ತಿಮ್ಮರಾಯಪ್ಪ ಅವರು ನೇಮಕಗೊಂಡಿದ್ದು, ಸೆಪ್ಟಂಬರ್ 4 ರಂದು ಅಧಿಕಾರ ವಹಿಸಿಕೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಸ್ಥಾಪನೆಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕೃಷಿ ಇಲಾಖೆಯಿಂದ ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಗೆ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿಗೆ 1 ಕಂಬೈನ್ಡ್ ಹಾರ್ವೆಸ್ಟರ್ ಹಬ್ ಕಾರ್ಯಕ್ರಮವಿದ್ದು ಕಡ್ಡಾಯವಾಗಿ ಕಂಬೈನ್ಡ್ ಹಾರ್ವೆಸ್ಟರ್ ಮತ್ತು ಟ್ರ್ಯಾಕ್ಟರ್ ಆಪರೇಟೆಡ್ ಬೇಲರ್ಸ್ ಇರತಕ್ಕದ್ದು. ಸಾಮಾನ್ಯ ವರ್ಗ ಘಟಕದಡಿ ವೈಯಕ್ತಿಕ ಫಲಾನುಭವಿಗೆ ಗರಿಷ್ಠ 40 ಲಕ್ಷ (ಶೇ.50 ಸಹಾಯಧನ) ಇರುತ್ತದೆ.

ಆದ ಕಾರಣ ಆಸಕ್ತ ರೈತರು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಲಭ್ಯವಿರುವ ನಿಗದಿತ ನಮೂನೆಯಲ್ಲಿ ದಾಖಲಾತಿಗಳೊಂದಿಗೆ ಸೆಪ್ಟಂಬರ್ 30 ರ ಒಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಭೆ ಮುಂದೂಡಿಕೆ

**ಚಿಕ್ಕಮಗಳೂರು:** ಜಿಲ್ಲಾ ಕೈಗಾರಿಕಾ ಕೇಂದ್ರದಿಂದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಹಾಗೂ ಕೈಗಾರಿಕಾ ಸ್ಪಂದನ ಸಭೆಯನ್ನು ಸೆಪ್ಟಂಬರ್ 19 ರಂದು ಅಪರಾಹ್ನ 3.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಸೆ.22 ರಂದು ಅ.7 ರವರೆಗೆ ಆಯೋಜಿಸಲಾಗಿದೆ.

ಪಾಲಿಕೆ ವ್ಯಾಪ್ತಿಯಲ್ಲಿ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಬೇಕು. ನಗರ ವ್ಯಾಪ್ತಿಯಲ್ಲಿನ ಮನೆ ಮನೆಗೆ ಗಣತಿದಾರರು ಭೇಟಿ ನೀಡಿದಾಗ ಗಣತಿದಾರರು ಕೋರುವ ಮಾಹಿತಿಯನ್ನು ನೀಡಬೇಕೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

## ಜಿಲ್ಲೆಯಾದ್ಯಂತ ಡಿಜೆ ಸಿಸ್ಟಂ ಬಳಕೆ ನಿಷೇಧ ಮುಂದುವರಿಕೆ

**ಶಿವಮೊಗ್ಗ:** ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬದ ಆಚರಣೆ ಪೂರ್ಣಗೊಳ್ಳುವವರೆಗೆ ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯಾದ್ಯಂತ

ಆ. 27 ರಿಂದ ಸೆ.15 ರವರೆಗೆ ಡಿಜೆ ಸಿಸ್ಟಂ ಬಳಕೆಯ ನಿಷೇಧವನ್ನು ಸೆ. 30 ರವರೆಗೆ ಮುಂದುವರೆಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶಿಸಿದ್ದಾರೆ.

ಜಿಲ್ಲೆಯ ಪ್ರಮುಖ ಗಣಪತಿ ಮೂರ್ತಿ ವಿಸರ್ಜನೆ ಹಾಗೂ ಈದ್ ಮಿಲಾದ್ ಮೆರವಣಿಗೆ ಇರುವುದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ, ಸೌಹಾರ್ದತೆ ಮತ್ತು ಶಾಂತಿ ಕಾಪಾಡುವ ಸಲುವಾಗಿ ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬಗಳ ಆಚರಣೆಗಳು ಪೂರ್ಣಗೊಳ್ಳುವವರೆಗೆ ಜಿಲ್ಲೆಯಾದ್ಯಂತ ಡಿಜೆ ಸಿಸ್ಟಂಗಳ ಬಳಕೆಯನ್ನು ಸೆ. 30 ರವರೆಗೆ ನಿಷೇಧಿಸಿ ಆದೇಶಿಸಲಾಗಿದೆ .

# ವಿಶ್ವಕರ್ಮರ ಕೊಡುಗೆ ಅಮೂಲ್ಯ ಮತ್ತು ಅಪಾರ

**ಗದಗ :** ದೇಶಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು

.ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೇಶದ ಬೆನ್ನೆಲುಬು ರೈತನಾದರೆ ರೈತನಿಗೆ ಹೊಲದಲ್ಲಿ ಉಳುಮೆ ಮಾಡಲು ಉಪಯೋಗಿಸುವ ಸಲಕರಣೆಗಳನ್ನು ಪೂರೈಕೆ ಮಾಡುವವರು ವಿಶ್ವಕರ್ಮದವರಾಗಿದ್ದಾರೆ. ಭಾರತೀಯ ಸಂಸ್ಕೃತಿಯನ್ನು ಬೆಳೆಸಿದವರು ವಿಶ್ವಕರ್ಮರು. ಭಾರತ ದೇಶದಲ್ಲಿ ವಿವಿಧ ಐತಿಹಾಸಿಕ ದೇವಾಲಯಗಳನ್ನು ನಿರ್ಮಾಣ ಮಾಡಿದ ಹಿರಿಮೆ ವಿಶ್ವಕರ್ಮರಿಗೆ ಸಲ್ಲುತ್ತದೆ. ಶ್ರಮ ಹಾಗೂ ಕಾಯಕ ನಿಷ್ಟೆ ಇನ್ನೊಂದು ಹೆಸರೇ ವಿಶ್ವಕರ್ಮರು. ವಿಶ್ವಕರ್ಮನೆಂಬುವನು ಇಲ್ಲದಿದ್ದರೆ ಈ ಜಗತ್ತಿಗೆ ಅಸ್ತಿತ್ವವೇ ಇರುತ್ತಿರಲಿಲ್ಲ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವೇದೋಪನಿಷತ್‌ಗಳು ಸಹ ವಿಶ್ವ ಕರ್ಮನನ್ನು ಕೊಂಡಾಡಿವೆ ಎಂದರು.

ರಾಜ ವಿಷ್ಣುವರ್ಧನನು ಹೊಯ್ಸಳ ಸಾಮ್ರಾಜ್ಯದ ಪ್ರಸಿದ್ಧ ರಾಜನಾಗಿದ್ದ. ಇವನ ರಾಣಿ ಶಾಂತಲೆಯು ಶಿಲ್ಪಕಲೆ ಹಾಗೂ ಸಂಸ್ಕೃತಿಯಲ್ಲಿ ಹೆಚ್ಚಿನ ಆಸಕ್ತಿಯುಳ್ಳವಳಾಗಿದ್ದಳು. ಬೇಲೂರಿನ ಚನ್ನಕೇಶವ ದೇವಾಲಯ, ಹಳೆಬೀಡಿನ ಹೊಯ್ಸಳೇಶ್ವರ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳ ನಿರ್ಮಾತೃ ವಿಶ್ವಕರ್ಮ ಸಮಾಜದ ಅಮರ ಶಿಲ್ಪಿ ಜಕಣಾಚಾರಿಯವರಾಗಿದ್ದಾರೆ. ಈಗಿನ ಮಕ್ಕಳಿಗೆ ವಿಶ್ವಕರ್ಮರ ಮಾರ್ಗದರ್ಶನ ತಿಳಿಸಬೇಕು ಹಾಗೂ ಸಾಹಿತ್ಯದ ಒಲವನ್ನು ಬೆಳೆಸಲು ಪ್ರೇರೇಪಿಸಬೇಕು. ಎಲ್ಲರೂ ಕಾಯಕ ತತ್ವ ಬೆಳೆಸಿಕೊಳ್ಳಬೇಕು.



ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಅವರು ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ರಾಜ್ಯ ಸರ್ಕಾರದಿಂದ ವಿಶ್ವ ಕರ್ಮ ಜಯಂತಿ ಆಚರಿಸುತ್ತಿರುವುದು ಬಹಳ ಸಂತೋಷ ವಿಷಯವಾಗಿದೆ.

ಯಾವುದೇ ಸಾಧನೆಯಾಗಬೇಕಾದರೆ ಸಂಘಟನೆಯು ಬಹಳ ಮುಖ್ಯವಾಗಿರುತ್ತದೆ. ವಿಶ್ವ ಕರ್ಮ ಸಮಾಜದವರು ಒಗ್ಗಟ್ಟಾಗಿ ಮುಂದೆ ಬರಬೇಕು. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಹಿರಿಯ ಸಾಹಿತಿ ಡಿ.ವಿ.ಬಡಿಗೇರ ಉಪನ್ಯಾಸ ನೀಡುತ್ತಾ ಮಾತನಾಡಿ, ವಿಶ್ವಕರ್ಮರ ಪೂಜೆ ಈ ಮೊದಲು ವ್ಯಕ್ತಿಗರ ಹಾಗೂ ಮನೆಗಳಿಗೆ ಸೀಮಿತವಾಗಿತ್ತು. ಆದರೆ ಈಗ ರಾಜ್ಯ ಸರ್ಕಾರದ ಅದೇಶದನ್ವಯ ಜಯಂತಿ ಆಚರಣೆ ಅರ್ಥಪೂರ್ಣವಾಗಿ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಎಲ್ಲಿ ಶ್ರಮದ ಬೆವರ ಹನಿ ಇದೆ ಅಲ್ಲಿ ನಾನು ಇದ್ದೇನೆ ಎಂದು ವಿಶ್ವ ಕರ್ಮರು ಹೇಳುತ್ತಾರೆ. ವಿಶ್ವಕರ್ಮರು ಶ್ರಮ ಪ್ರಿಯರು, ಕಾಯಕ ಪ್ರಿಯರಾಗಿದ್ದಾರೆ. ವೇದ, ಪುರಾಣ, ಶೃತಿ ಸ್ಮೃತಿಗಳಲ್ಲಿ ಸರ್ವಜ್ಞರ ವಚನಗಳಲ್ಲಿಯೂ ಸಹ ವಿಶ್ವ ಕರ್ಮರ ಪ್ರಾಮುಖ್ಯತೆ ಬಗ್ಗೆ ಉಲ್ಲೇಖಿಸಲಾಗಿದೆ. ವಿಶ್ವ ಕರ್ಮನಿಲ್ಲದ ಜಗತ್ತು ಶೂನ್ಯ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ.

ವಿಶ್ವ ಕರ್ಮನಿಲ್ಲದಿದ್ದರೆ ಜಗತ್ತಿನ ಅಸ್ತಿತ್ವ ಇರುತ್ತಿರಲಿಲ್ಲ ಎಂದು ಸಂತ ಕವಿ ವೇಮನರು ತಿಳಿಸಿದ್ದಾರೆ. ಸಕಲ ಚರಾಚರ ವಸ್ತುಗಳಲ್ಲ ವಿಶ್ವ ಕರ್ಮ ಇದ್ದಾನೆ. ವಿಶ್ವಕರ್ಮರು ಕಾಯಕ ಯೋಗಿಗಳು ಎಂದು ವಿವರಿಸುತ್ತಾ ತಮ್ಮ ಚುಟುಕು ಸಾಹಿತ್ಯದ ಮೂಲಕ ವಿಶ್ವ ಕರ್ಮರನ್ನು ಕೊಂಡಾಡಿರುವುದು ನೆರೆದ ಜನಸ್ತೋಮದ ಗಮನ ಸೆಳೆಯಿತು.

ಇದೇ ಸಂದರ್ಭದಲ್ಲಿ ಕವಿ ಸಾಹಿತಿ ಗೋಪಾಲ ಬಡಿಗೇರ ಅವರು ರಚಿಸಿದ ಶ್ರೀ ವಿಶ್ವ ಕರ್ಮ ಸ್ತುತಿ ಮಾಲಾ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದರಿಗ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವ ಕರ್ಮ ಸಮಾಜ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ಅಧ್ಯಕ್ಷ ಆರ್.ಡಿ.ಕಡ್ಲಿಕೊಪ್ಪ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೈಶೈಲ ಸೋಮನಕಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಶ್ರೀಧರ್ ಚಿನಗಡಿ, ಹರಿನಾಥಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿಶ್ವ ಕರ್ಮ ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು.

ಸುತಾರ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

# ವಿಶ್ವಕರ್ಮ ಜಗತ್ತು ಕಂಡ ಮಹಾನ್ ಶಿಲ್ಪಿ: ಸಂಸದ ಈ.ತುಕಾರಾಮ್

**ಬಳ್ಳಾರಿ:** ವಿಶ್ವಕರ್ಮರು ಜಗತ್ತು ಕಂಡ ಮಹಾನ್ ವಾಸ್ತುಶಿಲ್ಪಿ ಮತ್ತು ವಿನ್ಯಾಸಕರಾಗಿದ್ದಾರೆ. ಅವರ ಜೀವನದ ಇತಿಹಾಸವನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದು ಸಂಸದ ಈ.ತುಕಾರಾಮ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ವಿಶ್ವಕರ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕರ್ಮರ ಸತ್ಯ ಧರ್ಮವನ್ನು ಎಲ್ಲಾ ಜನಾಂಗದವರು ಪರಿಪಾಲನೆ ಮಾಡಬೇಕು. ಅವರ ಗ್ರಂಥಗಳ ಬಗ್ಗೆ ಅಧ್ಯಯನ ಮಾಡಿ, ಅವರ ಜೀವನ ಶೈಲಿ ತತ್ವಗಳನ್ನು ಪಾಲಿಸೋಣ ಎಂದು ತಿಳಿಸಿದರು.

ಸಮಾಜದಲ್ಲಿ ಪ್ರತಿಯೊಬ್ಬರೂ ವಿದ್ಯೆಯ ಮಹತ್ವ ತಿಳಿದು ಶೈಕ್ಷಣಿಕವಾಗಿ ಪ್ರಜ್ಞಾವಂತರಾಗಬೇಕು. ಸಂವಿಧಾನವು ನಮಗೆ ಬದುಕುವ ಮತ್ತು ಶಿಕ್ಷಣ ಪಡೆಯುವ ಹಕ್ಕನ್ನು ನೀಡಿದ್ದು, ಅದನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ತಂದೆ-ತಾಯಿ ಜನ್ಮ ನೀಡಿದರೆ, ಗುರುಗಳು ಭವಿಷ್ಯ ನೀಡುತ್ತಾರೆ. ಅಂತಹ ಗುರುಗಳಿಗೆ ಯಾವಾಗಲೂ ನಾವು ಋಣಿಯಾಗಿರಬೇಕು ಎಂದು ಹೇಳುತ್ತಾ ತಮ್ಮ ಪದವಿ ಕಾಲೇಜಿನ ವಿದ್ಯಾಭ್ಯಾಸ ಕಲಿಸಿದ ಗುರುಗಳನ್ನು ಸ್ಮರಿಸಿಕೊಂಡರು.

ಬಳ್ಳಾರಿ ನಗರದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿನಿಲಯಕ್ಕೆ ಅನುದಾನವಾಗಿ 50 ಲಕ್ಷ ನೀಡಲಾಗುವುದು ಎಂದು ತಿಳಿಸಿದ ಅವರು, ಜಿಲ್ಲಾ ಆಸ್ಪತ್ರೆಯಲ್ಲಿ 12 ಕೋಟಿ ವೆಚ್ಚದಲ್ಲಿ ಎಮ್‌ಆರ್‌ಐ ಸ್ಕಾ [illegible]ನಿಂಗ್ ಹಾಗೂ ಇಎಸ್‌ಐ ಆಸ್ಪತ್ರೆಗೆ ಶಂಕುಸ್ಥಾಪನೆಗೆ ಸರ್ಕಾರದಿಂದ ಅನುಮೋದನೆ ಸಿಕ್ಕಿದೆ ಎಂದು ಹೇಳಿದರು.

ಬಳ್ಳಾರಿಯಲ್ಲಿ ಜವಾಹರ್ ನವೋದಯ ವಿದ್ಯಾಲಯ ಸ್ಥಾಪಿಸಲು ಸರ್ಕಾರದ ಗಮನಕ್ಕೆ ತರಲಾಗುವುದು ಹಾಗೂ ನಗರದಲ್ಲಿ ಈಗಾಗಲೇ



ಹಲವಾರು ಯೋಜನೆಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು ಶೀಘ್ರದಲ್ಲೇ ಪೂರ್ಣಗೊಳಿಸಿ ಉದ್ಘಾಟಿಸಲಾಗುವುದು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ವಿಶ್ವಕರ್ಮರು ಅರಮನೆಗಳಿಂದ ಹಿಡಿದು ದೇವರ ಆಯುಧಗಳು, ದೇವತೆಗಳಿಗೆ ಹಾರುವ ರಥಗಳವರೆಗೆ ಎಲ್ಲವನ್ನು ಸೃಷ್ಟಿಸಿದ ವಿನ್ಯಾಸಕರಾಗಿದ್ದಾರೆ. ವಿಶ್ವಕರ್ಮ ಜನಾಂಗದವರು ಕರ್ಮ ಸಿದ್ಧಾಂತ ಮತ್ತು ದುಡಿಮೆ ನಂಬಿ ಬದುಕುವ ಜನರಾಗಿದ್ದು, ಸಮಾಜ ಸೇವೆ ಮಾಡುವ ಸಹೃದಯ ಜನಾಂಗವಾಗಿದೆ ಎಂದು ಹೇಳಿದರು.

ಕೂಡ್ಲಿಗಿ ತಾಲ್ಲೂಕಿನ ಖಾನಹೊಸಹಳ್ಳಿಯ ನಿವೃತ್ತ ಪ್ರಾಂಶುಪಾಲರು ಹಾಗೂ ಸಾಹಿತಿ ಡಾ.ವೃಷಭೇಂದ್ರಚಾರ್ಯ ಅರ್ಕಸಾಲಿ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ವಿಶ್ವಕರ್ಮರು ಪುರಾಣಗಳ ಪ್ರಕಾರ, ಒಬ್ಬ ಅಪ್ರತಿಮ ವಾಸ್ತುಶಿಲ್ಪ, ತಂತ್ರಜ್ಞಾನದ ಹಿಂದೂ ದೇವರು. ವೇದ ಉಪನಿಷತ್ತುಗಳಲ್ಲಿ ಕೊಂಡಾಡಿರುವ ಭಗವಂತ ವಿಶ್ವಕರ್ಮ ಅವರು ವಿಶ್ವದ ಪ್ರಖ್ಯಾತ ಶಿಲ್ಪಿಗಳು. ಹಲವಾರು ಕವಿಗಳು, ಸಾಹಿತಿಗಳು ಸಂಶೋಧನೆ ನಡೆಸಿ ವಿಶ್ವಕರ್ಮ ಅವರ ಬಗ್ಗೆ ಪುಸ್ತಕಗಳನ್ನು ಬರೆದಿದ್ದಾರೆ. ವಿಶ್ವಕರ್ಮ ಅವರ ಬಗ್ಗೆ ಚರಿತ್ರೆ, ಜೀವನದ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದರು.

ನಮ್ಮ ಭಾರತದಲ್ಲಿಯು ವಿಶ್ವಕರ್ಮರಿಂದ ಸ್ಥಾಪಿಸಿಲ್ಪಟ್ಟ ಕೆಲವು ಅದ್ಭುತ ಸ್ಥಳಗಳಿವೆ. 5 ಸಾವಿರ ವರ್ಷಗಳ ಚರಿತ್ರೆ ಹಿನ್ನೆಲೆಯನ್ನು ಹೊಂದಿದ ಜನಾಂಗ ವಿಶ್ವಕರ್ಮ ಜನಾಂಗವಾಗಿದೆ. ಹಲವಾರು ಪ್ರಾಚೀನ ಕಾಲದ ಶಿಲೆಗಳು, ಆಯುಧಗಳು ವಿಶ್ವಕರ್ಮರವರು ರಚಿಸಿದ್ದಾರೆ ಎಂಬ ಉಲ್ಲೇಖಗಳಿವೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನದ ಪ್ರಸ್ತಾವನೆ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ತೋರಣಗಲ್ ನ ಕೆ.ಕೊಟ್ರೇಶ್ ತಂಡದಿಂದ ಭಕ್ತಿ ಸಂಗೀತ ವಚನ ಗಾಯನ ಪ್ರಸ್ತುತ ಪಡಿಸಿದರು. ಇದೇ ವೇಳೆ ಎಸ್‌ಎಸ್‌ಎಲ್‌ಸಿ, ಪಿಯುಸಿ ಮತ್ತು ವಿಶೇಷ ಸಾಧನೆಗೈದ ವಿದ್ಯಾರ್ಥಿಗಳನ್ನು ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ವಿಶ್ವಕರ್ಮ ಅಭಿವೃದ್ಧಿ ನಿಗಮದ ಸದಸ್ಯ ಚಂದ್ರಶೇಖರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಬಳ್ಳಾರಿ ಜಿಲ್ಲಾ ವಿಶ್ವಕರ್ಮ ವಿಕಾಸ್ ವೇದಿಕೆ ಅಧ್ಯಕ್ಷ ಚಂದ್ರಕಾಂತ್ ಸ.ಸೋನಾರ ಸೇರಿದಂತೆ ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಇಲಾಖೆಯ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

## ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರ

**ಶಿವಮೊಗ್ಗ:** ತಾಲೂಕಿನ ನಿಧಿಗೆಯಲ್ಲಿರುವ ಟಿಎಂಎಇಎಸ್ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಅಂಗವಾಗಿ 20-09-2025ರ ಶನಿವಾರ ಬೆಳಿಗ್ಗೆ 10ರಿಂದ ಸಂಜೆ 4 ಗಂಟೆವರೆಗೆ ಸದರಿ ಆಸ್ಪತ್ರೆ ಮತ್ತು ನವಿಲೆ ಬಸಾಪುರ ಗ್ರಾಮ ಪಂಚಾಯಿತಿಯಲ್ಲಿ ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ವಿಶ್ವಹಿತ ಹಾಗೂ ಜನ ಹಿತಕ್ಕಾಗಿ ಆಯುರ್ವೇದ ಎಂಬ ಶೀರ್ಷಿಕೆ ಅಡಿ ನಡೆಯಲಿರುವ ಈ ಶಿಬಿರದಲ್ಲಿ ಆಸ್ಪತ್ರೆಯ ಎಲ್ಲಾ ಚಿಕಿತ್ಸಾ ವಿಭಾಗಗಳಿಂದ ತಪಾಸಣೆ ನಡೆಯಲಿದೆ. ಶಲ್ಯತಂತ್ರ ವಿಭಾಗದಿಂದ ಪೈಲ್ಸ್, ಫಿಸ್ತೂಲ, ಫಿಶರ್, ನಾಡಿವ್ರಣ, ಡಯಾಬಿಟಿಕ್ ಅಲ್ಸರ್, ಗ್ಯಾಂಗ್ರೀನ್, ಪ್ರಸೂತಿ ಮತ್ತು ಸ್ತ್ರೀ ವಿಭಾಗದಿಂದ ಬಿಳಿ ಸೆರಗು, ಕೆಂಪು ಸೆರಗು, ಪಿಸಿಓಡಿ ತೊಂದರೆ, ಬಂಜೆತನ, ಮುಟ್ಟಿನ ಸಮಸ್ಯೆ, ಇನ್ನಿತರೆ ಸ್ತ್ರೀ ರೋಗಗಳು, ಕಾಯ ಚಿಕಿತ್ಸಾ ವಿಭಾಗದಿಂದ ಬಿಪಿ, ಮಧುಮೇಹ ಥೈರಾಯ್ಡ್, ಚರ್ಮರೋಗಗಳು, ಶ್ವಾಸ ಸಂಬಂಧಿ ಕಾಯಿಲೆಗಳು, ನರ ಸಂಬಂಧಿತ ತೊಂದರೆಗಳು, ತಲೆ ನೋವಿನ ಸಮಸ್ಯೆ, ಪಂಚಕರ್ಮ ಚಿಕಿತ್ಸೆ ವಿಭಾಗದಿಂದ ಮೂಳೆ, ಕೀಲು, ನರ ಸಂಬಂಧಿತ ತೊಂದರೆಗಳು, ಬೆನ್ನುಹುರಿ, ಸೊಂಟನೋವಿನ ಸಮಸ್ಯೆ, ಸಂದಿವಾತ, ಆಮವಾತ, ಶಾಲಾಕ್ಯತಂತ್ರ ವಿಭಾಗದಿಂದ ಕಣ್ಣು, ಕಿವಿ, ಮೂಗು, ಬಾಯಿ ಹಾಗೂ ಗಂಟಲಿನ ಸಮಸ್ಯೆಗಳು.

ಬಾಲ ರೋಗ ವಿಭಾಗದಿಂದ ಕುಪೋಷಣೆ, ಕುಂಠಿತ ಬೆಳವಣಿಗೆ, ಮಕ್ಕಳಲ್ಲಿ ಕಾಣುವ ನರ ಸಂಬಂಧಿತ ಸಮಸ್ಯೆ, ಆಟಿಸಂ, ಮಾತನಾಡಲು ತೊಂದರೆ ಸೇರಿದಂತೆ ವಿವಿಧ ಖಾಯಿಲೆಗಳಿಗೆ ವೈದ್ಯರಿಂದ ತಪಾಸಣೆ, ಸಲಹೆ ಮತ್ತು ಚಿಕಿತ್ಸೆ ದೊರೆಯುತ್ತದೆ. ಆಸಕ್ತರು 7259685135, 9880539802ಗೆ ಸಂಪರ್ಕಿಸಬಹುದೆಂದು ಟಿಎಂಎಇಎಸ್ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಆಡಳಿತಾಧಿಕಾರಿ ಜಿ.ಎ. ಹಿರೇಮಠ ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಸಭೆ ಮುಂದೂಡಿಕೆ

**ಹಾಸನ :** ಕಂದಾಯ ಸಚಿವರು ಹಾಗೂ ಹಾಸನ ಜಿಲ್ಲಾಉಸ್ತುವಾರಿ ಸಚಿವರಾದಕೃಷ್ಣ ಬೈರೇಗೌಡರವರಅಧ್ಯಕ್ಷತೆಯಲ್ಲಿ ಹಾಸನ ಜಿಲ್ಲೆಯಕರ್ನಾಟಕಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮವು ಸೇರಿದಂತೆ), 2025-26ನೇ ಸಾಲಿನ ಆಗಸ್ಟ್-2025ರ ಅಂತ್ಯಕ್ಕೆಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯನ್ನುಸೆ.19ರಂದು ಬೆಳಿಗ್ಗೆ.10ಗಂಟೆಗೆ ಹಾಸನ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿನಿಗಧಿಪಡಿಸಲಾಗಿತ್ತು.

# ಬೆಂಗಾಲ್ ಫೈಲ್ಸ್ ವಿಭಜನೆ ಇತಿಹಾಸವ್ರೋ?ಅಥವಾ ಪ್ರಸ್ತುತವ್ರೋ?

**ಮ**ಂಡ್ಯದ ಗಣೇಶೋತ್ಸವದಲ್ಲಿ ನಡೆದ ಮೆರವಣಿಗೆಯ ವೇಳೆ ತೂರಿ ಬಂದ ಕಲ್ಲುಗಳ ಹಿಂದೆ, ಶಿವಮೊಗ್ಗೆಯ ಸಾಗರದ ಸನಿಹ ಪುಟ್ಟ ಬಾಲಕರಿಬ್ಬರು ಗಣೇಶ ಮೆರವಣಿಗೆಯ ಮೇಲೆ ಉಗುಳಿದ ಮಾನಸಿಕತೆಯ ಹಿಂದೆ, ತೀರ್ಥಹಳ್ಳಿಯಂತಹ ಶಾಂತಿಪ್ರಿಯರ ನಾಡಿನಲ್ಲಿ ಸದ್ದಿಲ್ಲದೇ ಬಾಂಬುತಯಾರಿಸುವ ಪ್ರಕ್ರಿಯೆಯಲ್ಲಿ ತೊಡಗಿಕೊಂಡ ಯುವಮನಗಳ ಹಿಂದೆ, ಪೋಲೀಸರ ಕಿವಿಮಾತಿಗೂ ಜಗ್ಗದೇ ತಮ್ಮ ವೋಟ್ ಬ್ಯಾಂಕ್ ರಾಜಕೀಯವೇ ಮೇಲೆಂದು ಕ್ರಿಮಿನಲ್‌ಗಳ ವಿರುದ್ಧ ದಾಖಲಾದ ಪ್ರಕರಣಗಳನ್ನು ಹಿಂಪಡೆಯುವ ಚುನಾಯಿತ ಸರ್ಕಾರದ ಸಂವಿಧಾನದ್ರೋಹಿ ನಡೆಯ ಹಿಂದೆ. ಅತಿಯಾದ ಓಲೈಕೆಯ ರುಚಿಕಂಡಿರುವ ಸಮುದಾಯದ ನಡೆಗಳು ಕಾನೂನು ಬಾಹಿರವಾಗಿದ್ದರೂ ಸಮರ್ಥಿಸಿಕೊಳ್ಳುವ ಸ್ಟೇಟ್ ಸ್ಪಾನ್ಸರ್ಡ್ ಇಂಟಲೆಕ್ಚುಯಲ್ ವಲಯದ ಕುತ್ಸಿತ ಬುದ್ಧಿಯ ಹಿಂದೆ ಯಾವ ವಿಚಾರಗಳು ಮತ್ತು ಸೈದ್ಧಾಂತಿಕ ಹಿನ್ನೆಲೆಗಳು ಕೆಲಸ ಮಾಡುತ್ತಿವೆಯೋ, ಅವುಗಳೇ ಅಖಂಡ ಭಾರತದ ವಿಭಜನೆಗೂ ಕೂಡ ನಾಂದಿ ಹಾಡಿದ್ದವು. "ಭಾರತದ ವಿಭಜನೆ" ಎಂಬ ಮಾತನ್ನು ಕೇಳಿದಾಕ್ಷಣ ನಮ್ಮಲ್ಲಿ ಬಹುಪಾಲು ಜನರಿಗೆ ಸಿಂಧ್ ಮತ್ತು ಪಾಕಿಸ್ತಾನದ ಭಾಗ ನೆನಪಿಗೆ ಬಂದುಬಿಡುತ್ತದೆ. ಆದರೆ ಪೂರ್ವ-ಪಾಕಿಸ್ತಾನ (ಇಂದಿನ ಬಾಂಗ್ಲಾದೇಶ)ದಲ್ಲಿ ನಡೆದ ಭೀಕರ ನರಮೇಧದ ಪರಿಕಲ್ಪನೆ ಕೂಡ ನಮ್ಮೆಲ್ಲರ ಸ್ಮೃತಿಪಟಲಗಳಿಗೆ ನಿಲುಕದ ರೀತಿಯಲ್ಲಿ ಇತಿಹಾಸವನ್ನು ಮುಚ್ಚಿಡಲಾಗಿತ್ತು. ಅಂತಹ ಘನಘೋರ ರಕ್ತಚರಿತೆ-ಯ ಪುಟಗಳನ್ನು ಮೈಕೊಡವೆದ್ದು ಬಿಂಬಿಸುತ್ತಿರುವುದೇ 'ದಿ ಬೆಂಗಾಲ್ ಫೈಲ್ಸ್' ಚಲನಚಿತ್ರ.

## ಇದು ಮತ್ತೊಂದು ಪ್ರೊಪಗಾಂಡಾ ಸಿನೆಮಾ?

ಅನೇಕ ಫೇಸ್‌ಬುಕ್ ಪುಟಗಳಿಂದ ಹಿಡಿದು ಹಲವರ ವಾಟ್ಸಾಪ್ ಸ್ಟೇಟಸ್ ಗಮನಿಸಿದಾಗ ವಿವೇಕ್ ಅಗ್ನಿಹೋತ್ರಿ ಸಿನೆಮಾ ಮಾಡುವುದೇ ಬಿಜೆಪಿಯನ್ನು ಬಿಹಾರದಲ್ಲಿ ಗೆಲ್ಲಿಸಲಿಕ್ಕೆ. ನಮ್ಮ ದೇಶದ ಅಲಸಂಖ್ಯಾತರ ವಿರುದ್ಧ



ದ್ವೇಷ ಭಾವನೆಯನ್ನು ಹುಟ್ಟುಹಾಕಲಿಕ್ಕೆ. 'ಸರ್ವಜನಾಂಗದ ಶಾಂತಿಯ ತೋಟದಲ್ಲಿ' ವಿಷಬೀಜ ಬಿತ್ತುವ ಕೆಲಸವನ್ನು ಈ ನಿರ್ದೇಶಕ ಮಾಡಿದ್ದಾನೆಂದು ಭಾವಿಸುವವರ ಮತಿಭ್ರಷ್ಟತನಕ್ಕೆ ಯಾವ ಮದ್ದೂ ಇಲ್ಲ. ಇಂತವರಿಂದ ಅಂತರ ಕಾಯ್ದುಕೊಳ್ಳುವುದೇ ಉಚಿತ. ಅಲ್ಪಸಂಖ್ಯಾತರು ಎಂಬ ಒಂದೇ ಕಾರಣಕ್ಕೆ ಸಮಾಜದಲ್ಲಿ ಅಶಾಂತಿ ಸೃಷ್ಟಿಸಲು ಯತ್ನಿಸುತ್ತಿರುವವರನ್ನು, ನಿತ್ಯವೂ ಜನವರ್ಗಗಳನ್ನು ಭಯಭೀತ ವಾತಾವರಣದಲ್ಲಿ ಇರುವಂತೆ ಮಾಡುವ ವ್ಯವಸ್ಥೆಯನ್ನು ಯಶಸ್ವಿಯಾಗಿ ಸೃಷ್ಟಿಸುತ್ತಿರುವವರನ್ನು, ತಮ್ಮ ವಿಚಾರಗಳಿಗೆ ಒಗ್ಗದವರನ್ನು ಹತ್ಯೆಮಾಡಲೂ ಹೇಸದೆ ಆರಾಜಕತೆಯನ್ನು ಕೂಡ ಅಪಾಯವೇ! ಕಾರಣ ಇವರೇ ಡೆಮಾಕ್ರೆಟಿಕ್ ಸ್ಟೇಟ್ ಮತ್ತು ಅದರ ಆಡಳಿತ ಅಂಗಗಳಿಗೆ ತೀವ್ರತರ ಹಾನಿಮಾಡಬಲ್ಲರು. ಇದು ಕೇವಲ ಪ್ರಸ್ತುತವಲ್ಲ, ಇತಿಹಾಸದಲ್ಲಿಯೂ ಕೂಡ ಇದೇ ರೀತಿಯ ಘಟನೆಗಳಿಗೆ ದೇಶದ ಪಶ್ಚಿಮ ಬಂಗಾಳ ಎಂತಹ ಬೆಲೆಯನ್ನು ತೆರಬೇಕಾಯಿತೆಂಬುದನ್ನು ಅತ್ಯಂತ ಸ್ಪುಟವಾಗಿ ನಿರ್ದೇಶಕರು ಕಟ್ಟಿಕೊಟ್ಟಿದ್ದಾರೆ.

## ದಿ ಬೆಂಗಾಲ್ ಫೈಲ್ಸ್ ಸಿನೆಮಾದ ಕಥೆಯೇನು?

*ದಿ ಕಾಶ್ಮೀರ್ ಫೈಲ್ಸ್' ಸಿನಿಮಾ ನಿರ್ದೇಶಿಸಿದ್ದ ವಿವೇಕ್ ಅಗ್ನಿಹೋತ್ರಿ ನಿರ್ದೇಶಿಸಿರುವ 'ದಿ ಬೆಂಗಾಲ್ ಫೈಲ್ಸ್' ಸಿನಿಮಾ ಸೆಪ್ಟೆಂಬರ್ 05ರಂದು ವಿಶ್ವದಾದ್ಯಂತ ಬಿಡುಗಡೆ ಆಗಿದೆ. ಸಿನಿಮಾ ಬಿಡುಗ-'ಡೆಗೆ ಮುಂಚೆ ಅನೇಕ ಚಾನೆಲ್ಲುಗಳ ಸಂದರ್ಶನಗಳಲ್ಲಿ ಮಾತನಾಡಿದ್ದ ವಿವೇಕ್ ಅಗ್ನಿಹೋತ್ರಿ ಅವರು 'ದಿ ಕಾಶ್ಮೀರ್ ಫೈಲ್ಸ್' ನಿಮ್ಮ ಮನಸ್ಥಿತಿಯನ್ನು ತಲ್ಲಣಗೊಳಿಸಿದ್ದರೆ, 'ದಿ ಬೆಂಗಾಲ್ ಫೈಲ್ಸ್' ಸಿನಿಮಾ ನಿಮ್ಮನ್ನು ಬೆಂಬಿಡದೆ ಕಾಡುತ್ತದೆ' ಎಂದಿದ್ದರು. ಅಲ್ಲದೆ, 'ಪ್ರಸ್ತುತದಲ್ಲಿ ಭಾರತದಿಂದ ದೂರಾಗುತ್ತಿರುವ ಪಶ್ಚಿಮ ಬಂಗಾಳವನ್ನು ಉಳಿಸಿಕೊಳ್ಳಿರೆಂದು ಹೇಳಲು ಈ ಸಿನಿಮಾ ಮಾಡಿದ್ದೇನೆ' ಎಂದು ಸಹ ವಿವೇಕ್ ಅಗ್ನಿಹೋತ್ರಿ ಹೇಳಿದ್ದರು. ಹಾಗಿದ್ದರೆ, 'ದಿ ಬೆಂಗಾಲ್ ಫೈಲ್ಸ್' ಸಿನಿಮಾದ ಕತೆ ಏನು? ಬೆಂಬಿಡದೆ ಕಾಡುವಂಥಹದ್ದು ಸಿನಿಮಾನಲ್ಲಿ ಏನಿದೆ? ಮೊದಲಿಗೆ ಭಾರತದ ಇತಿಹಾಸದ ಕಡೆಗೆ ಗಮನಹರಿಸೋಣ. 120 ವರ್ಷಗಳ ಹಿಂದೆ 1905ರಲ್ಲಿ ವಿಶ್ವಾವಸು ಸಂವತ್ಸರ ಬಂದ ಸಂದರ್ಭ ಅದು. ಭಾರತದ ಮಟ್ಟಿಗೆ ಬಹಳ ಮಹತ್ವದ ವರ್ಷ. ಆಗ ಭಾರತದಲ್ಲಿ ಬ್ರಿಟಿಷ್ ಆಡಳಿತವಿತ್ತು. ಲಾರ್ಡ್ ಕರ್ಜನ್ ಭಾರತದ ವೈಸರಾಯ್ ಆಗಿದ್ದ. 19055 200 ಬಂಗಾಳ ವಿಭಜನೆಯ ಘೋಷಣೆ ಮಾಡಿದ. ಕರ್ಜನ್ ಆಡಳಿತದ ಆಂತರಿಕ ನೀತಿಯ ಭಾಗವಾಗಿ ಬಂಗಾಳವನ್ನು 1905ರ ಅಕ್ಟೋಬರ್ 16ರಂದು ಪೂರ್ವ ಬಂಗಾಳ ಮತ್ತು ಪಶ್ಚಿಮ ಬಂಗಾಳ ಎಂದು ವಿಭಜಿಸಲಾಯಿತು. ಜನಸಂಖ್ಯೆ ಹೆಚ್ಚಿದ್ದ ಕಾರಣ ಬಂಗಾಳದ ಆಡಳಿತ ಕಷ್ಟವೆನಿಸಿದೆ. ಹೀಗಾಗಿ, ಬಂಗಾಳ ವಿಭಜನೆ




ಮಾಡಲಾಗುತ್ತಿದೆ ಎಂದು ಭಾರತೀಯರನ್ನು ಬ್ರಿಟಿಷರು ನಂಬಿಸಲು ಪ್ರಯತ್ನಿಸಿದ್ದರು. ಆದರೆ ಬ್ರಿಟಿಷರ ಮನದ ಇಂಗಿತ ಬೇರೆಯೇ ಇತ್ತು. ಭಾರತದ ಸ್ವಾತಂತ್ರ್ಯ ಹೋರಾಟದ ಕೇಂದ್ರ ಸ್ಥಾನವಾಗಿ ಬಂಗಾಳ ಬೆಳೆಯುತ್ತಿರುವುದು" ಅವರಿಗೆ ಸಹ್ಯವಾಗಿರಲಿಲ್ಲ. ಹೀಗಾಗಿ, ಮುಸ್ಲಿಂ ಮತ್ತು ಹಿಂದೂಗಳ ನಡುವೆ ಒಡೆದು ಆಳುವ ನೀತಿಗೆ ಅನುಗುಣವಾಗಿ ಬಂಗಾಳ ವಿಭಜನೆ ನಡೆಯಿತು. ಆದಾಗ್ಯೂ, ಬಂಗಾಳ ವಿಭಜನೆಯ ಬ್ರಿಟಿಷರ ಈ ಕ್ರಮಕ್ಕೆ, ವ್ಯಾಪಕ ಟೀಕೆ ಬಂತು. ನಂತರ ತಾತ್ಕಾಲಿಕವಾಗಿ ಅದಕ್ಕೆ ತಡೆಯೊಡ್ಡಲಾಯಿತು. ದಿಟದಲ್ಲಿ ಗಮನಿಸಿದರೆ, ಬಿಟಿಷರು ಇಲ್ಲಿ ನಿಧಾನವಾಗಿ ಪೂರ್ವ ಬಂಗಾಳದ ಆಸೆಯನ್ನು ಮುಸ್ಲಿಂ ಸಮುದಾಯದ ಮನಸ್ಸಿನಲ್ಲಿ ಬಿತ್ತುವ ಕೆಲಸ ಮಾಡಿದ್ದರು. ಹೀಗಾಗಿಯೇ ವಿಭಜನೆಯ ವಿಷಯಕ್ಕೆ ಬಂದಾಗ ಅದನ್ನು ಗಟ್ಟಿಯಾಗಿ ವಿರೋಧಿಸಿದ್ದವರಲ್ಲಿ ಬಹುಪಾಲು ಜನ ಹಿಂದೂಗಳೇ ಆಗಿದ್ದರು.


ಇನ್ನು ಇದುವೇ 1946ರಲ್ಲಿ ಬಂಗಾಳದಲ್ಲಿ ನಡೆದ ಹಿಂದೂ ಮುಸ್ಲಿಂ ಭೀಕರ ಕೋಮುಗಲಭೆಗಳಿಗೆ ಬುನಾದಿ ಒದಗಿಸಿಕೊಟ್ಟಿತ್ತು. 1946, ಆಗಸ್ಟ್ 16ರಂದು ಮಹಮ್ಮದ್ ಅಲಿ ಜಿನ್ನಾ ಕರೆ ನೀಡಿದ್ದ 'ಡೈ-ರೆಕ್ಟ್ ಆಕ್ಷನ್ ಡೇ' ಮತ್ತದರ ಬಳಿಕ ನಡೆದ ಭೀಕರ ಗಲಭೆಯ ಸುತ್ತ 'ದಿ ಬೆಂಗಾಲ್ ಫೈಲ್ಸ್' ಸಿನಿಮಾದ ಕತೆ ಹೆಣೆಯಲಾಗಿದೆ. ಬಂಗಾಳದ ವಿಭಜನೆಯು ಶಾಂತಿಯುತವಾದ ಅಧಿಕಾರ ಹಸ್ತಾಂತರವಾಗಿರಲಿಲ್ಲ. ಅದೊಂದು ದುಃಸ್ವಪ್ನವಾಗಿತ್ತು. ಅದು ನಿರಪರಾಧಿಗಳ ರಕ್ತದಿಂದ ಬೆಲೆಯನ್ನು ತೆರಬೇಕಾದ ಪರಿಸ್ಥಿತಿ ನಿರ್ಮಾಣ ಮಾಡಿತು. ಲಕ್ಷಾಂತರ ಹಿಂದೂಗಳನ್ನು ಮತೀಯ ಉನ್ಮಾದಿಗಳು ಕೊಂದುಹಾಕಿದರು. ಸಹಸ್ರಾರು ಕುಟುಂಬಗಳು ನಶಿಸಿದವು. ಮಹಿಳೆಯರ ಮಾನಭಂಗ ಮಾಡಲಾಯಿತು. ಜೊತೆಗೆ ಬಂಗಾಳದ ಪುರಾತನ ದೇವಾಲಯಗಳನ್ನು ಅಪವಿತ್ರಗೊಳಿಸಲಾಯಿತು. ಇಂತಹ ಸನ್ನಿವೇಶದಲ್ಲಿ ಕಲ್ಕತ್ತ ಕೈ ತಪ್ಪಿಹೋಗದಂತೆ ಕಾಪಾಡಿದ್ದು ಅಲ್ಲಿನ ಕಸಾಯಿಯಾದ ಗೋಪಾಲ್ ಪಾಠ. ಹಿಂದೂ ಸಮುದಾಯಗಳ ಒಗ್ಗಟ್ಟಿನ ಕುರಿತಾದ ಅವರ ದೂರದೃಷ್ಟಿಯ ಕಾರಣದಿಂದ ಆ ಭೀಕರ ಕೋಮುಗಲಭೆಯಲ್ಲಿ ಕಲ್ಕತ್ತಾವನ್ನು ಉಳಿಸಿಕೊಳ್ಳಲು ಸಾಧ್ಯವಾಯಿತು. ಆದರೆ ಮುಸ್ಲಿಂ ಲೀಗ್ ತನ್ನ ಹಠಮಾರಿತನವನ್ನು ಬಿಡದೆ, ಕಲ್ಕತ್ತೆಯ ಸೋಲನ್ನು ನೋವಾಖಾಲಿಯಾದ ಹಿಂದೂಗಳ ಮೇಲೆ ತೀರಿಸಿಕೊಂಡರು. ನೋವಾಖಾಲಿ ಮೂಲತಃ ಬಂಗಾಳಿ ಪದ. ಆ ಭಾಗದಲ್ಲಿ ಕೇವಲ ಶೇಕಡಾ 20ರಷ್ಟು ಮಾತ್ರ ಹಿಂದೂ ಜನಸಮುದಾಯ ವಾಸವಿತ್ತು. ಅಲ್ಲಿನ 80 ಪ್ರತಿಶತ ಮುಸಲ್ಮಾನ ಸಮುದಾಯ ಮತಾಂಧತೆಯ ಅಮಲಿನಲ್ಲಿ ಹಿಂದೂಗಳನ್ನು ಬರ್ಬರವಾಗಿ ಕೊಂದು, ಜನಸಮುದಾಯವನ್ನೇ ನಾಶ ಮಾಡಿದರು. ಅಂತಹ ಪ್ರಕ್ಷುಬ್ಧ ಪರಿಸ್ಥಿಯಲ್ಲಿ ಕೂಡ ಆಗಿನ ನೋವಾಖಾಲಿಯಾದ ಹಿಂದೂ ಮಹಾಸಭೆಯ ಮುಖಂಡರಾದ 'ಬಂಗಾಳಿ ಹುಲಿ- ರಾಯ್ ಚೌಧರಿಯವರು' ತಮ್ಮುಸಿರಿನ ಕೊನೆಘಳಿಗೆಯವರೆಗೂ ಕೂಡ ಹಿಂದೂಗಳಿಗಾಗಿ ಹೋರಾಡಿ ತಮ್ಮ ಪ್ರಾಣತ್ಯಾಗ ಮಾಡಿದರು. ಈ ಎಲ್ಲ ಕರಾಳ ಇತಿಹಾಸದ ಪುಟಗಳನ್ನು ಕಣ್ಣುಕಟ್ಟುವಂತೆ ದೃಶ್ಯಪರದೆಯ ಮೇಲೆ 'ವಿವೇಕ್ ಅಗ್ನಿಹೋತ್ರಿ' ತಂದಿದ್ದಾರೆ.

## ವಾಕ್ ಸ್ವಾತಂತ್ರ್ಯದ ಹಕ್ಕು 'ವಿವೇಕ್' ಅವರಿಗಿಲ್ಲವೇ?

ಈ ದೇಶದಲ್ಲಿ ದಮನಿತರಿಗೆ ಧ್ವನಿಯನ್ನು ಹತ್ತಿಕ್ಕುವುದು ಸಂವಿಧಾನವಿರೋಧಿ ಎನ್ನುವ ಅನೇಕರು ಹಿಂದೂ ಸಮುದಾಯವೂ ಕೂಡ 1200 ವರ್ಷಗಳ ಕಾಲ ನಿರಂತರವಾಗಿ ಅರಬ್ಬರಿಂದ, ಬ್ರಿಟಿಷರಿಂದ, ಕೊನೆಗೆ ಮತಾಂತರಗೊಂಡ ತನ್ನದೇ ನೆಲದ ಜನರಿಂದಲೂ ಕೂಡ ತುಳಿತಕ್ಕೆ ಒಳಗಾಗಿದೆಯೆಂಬ ಸತ್ಯವನ್ನು ಮರೆತೇ ಬಿಡುತ್ತಾರೆ. ಅಲ್ಲೆಲ್ಲೋ ದೂರದ ಆಫ್ರಿಕಾದ ಕರಿಯಜನಾಂಗದ ನೋವು, ಹಿಟ್ಲರ್ ಕೈಯಲ್ಲಿ ಯಮಯಾತನೆ ಅನುಭವಿಸಿದ ಯಹೂದಿಗಳ



ಸದ್ದು, ಅಮೇರಿಕೆಯಲ್ಲಿನ ಮೂಲನಿವಾಸಿಗಳು ಯುರೋಪಿಯನ್ನರಿಂದ ತುಳಿತಕ್ಕೊಳಗಾದ ಕಥೆಗಳು, ಪ್ಯಾಲೇಸ್ತಿನಿಯನ್ನರ ಮತ್ತು ಯಹೂದಿಗಳ ನಡುವಿನ ಸಂಘರ್ಷದ ನಡುವೆ ಕೇಳಿಬರುವ ದಮನಿತರ ಆಕ್ರಂದನಗಳೆಲ್ಲ ಕೇಳಿಸಿಕೊಳ್ಳಲು ನಮ್ಮ ಭಾರತೀಯ ಸಮಾಜದ ಮತ್ತು ವಿಶ್ವದ ಅನೇಕ ಘಟಾನುಘಟಿ ರಾಷ್ಟ್ರಗಳ ಜನರ ಕಿವಿಗಳು ಅದೆಷ್ಟು ಚುರುಕಾಗಿ ನಿಮಿರುವವೋ, ಅದೇ ಕಿವಿಗಳು ತಮ್ಮದೇ ನೆಲದಲ್ಲಿ, ತಮ್ಮದೇ ಚುನಾಯಿತ ಸರ್ಕಾರವಿರುವಾಗಲೂ ದಮನಕ್ಕೆ ಒಳಗಾದ ಕಾಶ್ಮೀರಿ ಪಂಡಿತರ, ಬೆಂಗಾಲಿ ಹಿಂದೂಗಳ ದನಿಯನ್ನು ಕೇಳಲು ಹಿಂದೇ-ಟೇಕೆ ಹಾಕುವರು? ಸದ್ಯ ವಿವೇಕ್ ಅವರ ತಂಡವು ಪಶ್ಚಿಮ ಬಂಗಾಳದಲ್ಲಿ ಸಿನೆಮಾವನ್ನು ಕೂಡ ಬಿಡುಗಡೆ ಮಾಡಲು ಸಾಧ್ಯವಾಗುತ್ತಿಲ್ಲ. ಇದು ಸ್ವಾತಂತ್ರ್ಯದ ದಮನವಲ್ಲವೇ? ಈ ಚಲನಚಿತ್ರವನ್ನು ಭಾರತದಾದ್ಯಂತ ಇರುವ ಎಲ್ಲ ಮತಪಂಗಡದವರೂ ಕೂಡ ನೋಡಲೇಬೇಕು. ಕಾರಣ ಇದು "ವೀ ದಿ ಪೀಪಲ್ ಆಫ್ ಭಾರತ್"ನ ನೈಜ ಇತಿಹಾಸ. ಇತಿಹಾಸ ಮರೆತ ಜನಾಂಗ, ಇತಿಹಾಸದ ಪುಟಗಳಲ್ಲೇ ಕಣ್ಮರೆಯಾಗುತ್ತದೆ. ನಮ್ಮದೇ ಇತಿಹಾಸದಿಂದ ಮರೆಗೆ ತಳ್ಳಲ್ಪಟ್ಟ ಈ ಕಥನದಿಂದ ಪಾಠ ಕಲಿಯಲೇಬೇಕಿದೆ. ಈ ಚಲನಚಿತ್ರವನ್ನು ನೋಡಿದ ಮೇಲೆ ಕಾಡುವ ಒಂದೇ ಒಂದು ಪ್ರಶ್ನೆಯೆಂದರೆ "ವಿಭಜನೆ ಇತಿಹಾಸವೋ? ಅಥವಾ ಪ್ರಸ್ತುತವೋ?".



**ಸೋಮೇಶ್ವರ್ ಆರ್ ಗುರುಮಠ**
ಲೇಖಕರು

# ಪೂರ್ವಭಾವಿ ಸಭೆ

**ಗದಗ** : ಅಕ್ಟೋಬರ್ 07-10-2025 ರಂದು ಮಹರ್ಷಿ ಶ್ರೀ ವಾಲ್ಮೀಕಿ ಜನ್ಮ ದಿನಾಚರಣೆಯನ್ನು ಆಚರಿಸುವ ಕುರಿತು ದಿನಾಂಕ ಃ 20/09/2025 ರಂದು ಮುಂಜಾನೆ 11-30 ಘಂಟೆಗೆ ಮಾನ್ಯ ತಹಶೀಲ್ದಾರರು ಲಕ್ಷ್ಮೇಶ್ವರ ಇವರ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.ಎಲ್ಲ ತಾಲೂಕ ಮಟ್ಟದ ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ದಲಿತಪರ ಸಂಘಟನೆಗಳ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸರ್ವ ಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಪತ್ರಿಕಾ ಮಾಧ್ಯಮದವರು ಹಾಗೂ ಸಾರ್ವಜನಿಕರು ಸಕಾಲಕ್ಕೆ ಆಗಮಿಸಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಈ ಮೂಲಕ ಕೋರಲಾಗಿದೆ ಸದಸ್ಯ ಕಾರ್ಯದರ್ಶಿ ಮಹರ್ಷಿ ಶ್ರೀ ವಾಲ್ಮೀಕಿಜಯಂತಿ ಆಚರಣೆ ಸಮಿತಿ, ಹಾಗೂ ಸಹಾಯಕ ನಿರ್ದೇಶಕರು ಸ.ಕ.ಇ. ಶಿರಹಟ್ಟಿ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಪ್ರೋತ್ಸಾಹಧನ ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ನಗರಸಭೆಯ 2025-26ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಯೋಜನೆಯ ಅನುದಾನದಲ್ಲಿ ಶೇ. 7.25 ರ ಯೋಜನೆಯಡಿ ಇತರೆ ಹಿಂದುಳಿದ ವರ್ಗದ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಫಲಾನುಭವಿಗಳಿಗೆ ಯು.ಜಿ.ಡಿ ಹಾಗೂ ನೀರಿನ ಸಂಪರ್ಕ ಕಲ್ಪಿಸಲು ಸಹಾಯಧನ ನೀಡುವುದು ಮತ್ತು ಶೇ. 5 ರ ಯೋಜನೆಯಡಿ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಮತ್ತು ಪದವಿ, ಸ್ನಾತಕೋತ್ತರ, ವೈದ್ಯಕೀಯ, ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ ಪದವೀಧರರಿಗೆ ವಿದ್ಯಾಭ್ಯಾಸಕ್ಕಾಗಿ ಪ್ರೋತ್ಸಾಹ ಧನವನ್ನು ನೀಡಲು ಚಿಕ್ಕಬಳ್ಳಾಪುರ ನಗರ ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಸಂಬಂಧಪಟ್ಟ ದಾಖಲೆಗಳೊಂದಿಗೆ ಸೆಪ್ಟೆಂಬರ್ 26 ರೊಳಗೆ ನಗರಸಭೆ ಕಚೇರಿಗೆ ಸಲ್ಲಿಸಬಹುದು. ತಡವಾಗಿ ಬಂದ ಅರ್ಜಿಗಳನ್ನು ಅಥವಾ ಅಪೂರ್ಣ ಮಾಹಿತಿಯುಳ್ಳ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಶೇ. 7.25, ಶೇ. 5ರ ಶಾಖೆಯನ್ನು ಸಂಪರ್ಕಿಸಬಹುದು ಎಂದು ಚಿಕ್ಕಬಳ್ಳಾಪುರ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಲಾವಿಕಾಸ ಪರಿಷತ್ ನಿಂದ ಪುಟ್ಟರಾಜರ 15 ನೆಯ ಪುಣ್ಯಸ್ಮರಣೆಯ ಆಚರಣೆ

# ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರಾಗಿದ್ದರು- ಪ್ರೊ. ಅನ್ನದಾನಿ ಹಿರೇಮಠ

**ಗದಗ** : ಕುರುಡರಾಗಿದ್ದರೂಕೂಡಅಂಧ,ಅನಾಥ ಮಕ್ಕಳಿಗೆ ತಂದೆಯಾಗಿ, ಪೋಷಕರಾಗಿ, ಸಂಗೀತದಗುರುವಾಗಿ, ಪುರಾಣ ಪ್ರವಚನಕ್ಕೆ ಪ್ರೇರಕರಾಗಿ ಶತಮಾನದ ಹತ್ತಿರದಇಡೀ ಬದುಕನ್ನು ದಿಕ್ಕಿಲ್ಲದ ಮಕ್ಕಳಿಗೆ ಬದುಕುವ ವಿದ್ಯೆ ನೀಡಿದ ಪಂಡಿತ ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರಾಗಿದ್ದರು. ಅವರ ಸಾಹಿತ್ಯಕಣ್ಣಿದ್ದವರನ್ನೂ ಬೆರಗುಗೊಳಿಸಿತ್ತು ಎಂದುಅನ್ನದಾನಿ ಹಿರೇಮಠಅವರು ಹೇಳಿದರು. ಅವರು, ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ, ಉತ್ತರಕರ್ನಾಟಕಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆಯಾದಗದುಗಿನ ಕಲಾವಿಕಾಸ ಪರಿಷತ್ತಿನವರು ಏರ್ಪಡಿಸಿದ ಪಂಡಿತ ಪುಟ್ಟರಾಜ ಗವಾಯಿಗಳ 15 ನೆ ಪುಣ್ಯ ಸ್ಮರಣೆಯನ್ನು ಸಸಿಗೆ ನೀರುಎರೆಯುವ ಮೂಲಕ ಉದ್ಘಾಟಿಸಿ ಹೇಳಿದರು.

ಮುಖ್ಯಅತಿಥಿಯಾಗಿ ಭಾವಹಿಸಿದ್ದ ವಿಭೂತಿ ಪತ್ರಿಕೆ ಸಂಪಾದಕ ಹಿರಿಯ ಸಾಹಿತಿಅಂದಾನೆಪ್ಪ ವಿಭೂತಿಅವರು, ಪುಟ್ಟರಾಜ ಗವಾಯಿಗಳು ಲಿಂಗೈಕ್ಯರಾದ ಸಂದರ್ಭದಲ್ಲಿಗದಗ ಬೆಟಗೇರಿಜನರುಜಾತ್ಯಾತೀತ ವಾಗಿ ಭಕ್ತಿಯಿಂದ ಪ್ರೀತಿಯಿಂದ ಅಭಿಮಾನದಿಂದ ಅಂತಿಮ ನಮನದಲ್ಲಿ ಸೇವೆ ಸಲ್ಲಿಸಿದ್ದನ್ನು ಸ್ಮರಿಸಿಕೊಂಡರು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದಪ್ರೊ. ಎಸ್ ವಾಯ್‌ಚಿಕ್ಕಟ್ಟಿಅವರು, ಸಮಾರಂಭದ ಅಧ್ಯಕ್ಷತೆವಹಿಸಿ, ಪುಟ್ಟರಾಜ ಗವಾಯಿಗಳೊಂದಿಗಿನ ಒಡನಾಟವನ್ನು ನೆನಪಿಸಿಕೊಳ್ಳುವುದರಂದಿಗೆ ಕಲಾ ವಿಕಾಸ



ಪರಿಷತ್ ಸಿ. ಕೆ. ಹೆಚ್. ಶಾಸ್ತ್ರಿಯವರು 15 ವರ್ಷಗಳಿಂದ ಪೂಜ್ಯರ ಪುಣ್ಯಸ್ಮರಣೆಯನ್ನು ನಮ್ಮ ಸಂಸ್ಥೆಯಲ್ಲಿಆಯೋಜಿಸುತ್ತಿರುವುದು ನಮ್ಮ ಸಂಸ್ಥೆಯ ಭಾಗ್ಯವಿಶೇಷವೆಂದು ಹೇಳಿದರು. ಪ್ರಾರಂಭದಲ್ಲಿಚಿಕ್ಕಟ್ಟಿ ಸಿಬಿಎಸ್ ಶಾಲೆಯ ವಿದ್ಯಾರ್ಥಿಗಳಿಂದ ಪ್ರಾರ್ಥನೆ ನಡೆಯಿತು. ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿಯಅಧ್ಯಕ್ಷರವೇ. ಫಕ್ಕೀರೇಶ್ವರ ಶಾಸ್ತ್ರೀಗಳು ಹಿರೇಮಠಗದಗಇವರು ಸರ್ವರನ್ನು ಸ್ವಾಗತಿಸಿದರು. ಕಲಾವಿಕಾಸ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದಪಂ. ಸಿ ಕೆ ಎಚ್ ಶಾಸ್ತ್ರಿಗಳು (ಕಡಣಿ) ಪ್ರಾಸ್ತಾವಿಕವಾಗಿಮಾತನಾಡಿ ಕಲಾವಿಕಾಸ ಪರಿಷತ್ತು ನಡೆದು ಬಂದದಾರಿಯನ್ನು ಸ್ಮರಿಸಿ ಪುಟ್ಟರಾಜ ಗವಾಯಿಗಳ ಸಂಗೀತ ಬದುಕಿನ ಹಲವಾರು ಸಾಧನೆಗಳನ್ನು ಮೆಲುಕು ಹಾಕಿದರು.ವೇದ ಮಂತ್ರಗಳ ಪಠಣೆಯಂದಿಗೆಪೂಜ್ಯಗುರು ಪುಟ್ಟರಾಜರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಲಾಯಿತು. ಶಿಕ್ಷಕ ಸಾಹಿತಿ ಶ್ರೀಶೈಲ ಬಡಿಗೇರಇವರು ಪುಟ್ಟರಾಜ ಗುರುಗಳ ಕುರಿತು ಸ್ವರಚಿತ ಕವನಗಳ ವಾಚನ ಮಾಡಿದರು.

ಇದೇ ಸಂದರ್ಭದಲ್ಲಿಕರ್ನಾಟಕ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ನೇಮಕವಾದಜೆ ಪಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ, ಡಾ. ಬಿ. ಬಿ. ಹೊಳಗುಂದಿ ಅವರನ್ನುಚಿಕ್ಕಟ್ಟಿಸಮೂಹ ಶಿಕ್ಷಣ ಸಂಸ್ಥೆಯ ಪರವಾಗಿ ಶಿಕ್ಷಣ ಸಂಸ್ಥೆಯಅಧ್ಯಕ್ಷರು ಹಾಗೂ ಸಿಬ್ಬಂದಿಯಿಂದಸನ್ಮಾನಿಸಲಾಯಿತು. ವೇದಿಕೆಯಲ್ಲಿ ಬಿ ಬಿ ಎ ಕಾಲೇಜಿನ ಪ್ರಾಚಾರ್ಯ ಬಿಪಿನ್ ಚಿಕ್ಕಟ್ಟಿ, ಪ್ರಾ. ಶೋಭಾ ಸ್ಥಾವರಮಠ, ಪ್ರಾ. ರಿಯಾನಾ ಮುಲ್ಲಾ, ವೇದಿಕೆಯಲ್ಲಿಇದ್ದರು. ಶಿಕ್ಷಕಿ ರಜನಿಕುರಿಕಾರ್ಯಕ್ರಮ ನಿರೂಪಿಸಿದರು ಶಿಕ್ಷಕ ಗಣೇಶ ಬಡ್ನಿ ವಂದಾರ್ಪಣೆ ಮಾಡಿದರು. ಸಿ ಕೆ ಹೆಚ್. ಶಾಸ್ತ್ರೀಯವರು ರಚಿಸಿದ ಪುಟ್ಟರಾಜ ಗುರುಗಳ ಗೀತೆಗಳನ್ನು ಚಿತ್ರಿಕರಿಸಿದ ವಿಡಿಯೊ ಪ್ರದರ್ಶನಮಾಡುವುದರಂದಿಗೆ ಪುಣ್ಯಸ್ಮರಣೆಗೆ ಮಂಗಳ ಹಾಡಲಾಯಿತು.

## ಶ್ರೀ ರಾಮಾಂಜನೇಯ ಯುದ್ಧ" ಯಕ್ಷಗಾನ ಪ್ರದರ್ಶನ ಯಕ್ಷಗುರು ಹಟ್ಟಿಯಂಗಡಿ ಆನಂದ ಶೆಟ್ಟಿಯವರಿಗೆ "ಸುವರ್ಣ ಪರ್ವ ಗೌರವ ಪುರಸ್ಕಾರ"

**ದಾವಣಗೆರೆ** :ವಿಶ್ವ ವಿಖ್ಯಾತ ಸಾಲಿಗ್ರಾಮ ಮಕ್ಕಳ ಮೇಳವು ಸ್ಥಾಪನೆಯಾಗಿ 50 ವರ್ಷ ಪೂರೈಸಿದ ಸವಿನೆನಪಿಗಾಗಿ ದಾವಣಗೆರೆಯ ಕುವೆಂಪು ಕನ್ನಡ ಭವನದಲ್ಲಿ ದಿನಾಂಕ 21.09.2025 ರ ಭಾನುವಾರ ಮಧ್ಯಾಹ್ನ 4 ಗಂಟೆಯಿಂದ "ಸುವರ್ಣ ಪರ್ವ ಸಮಾರಂಭ", ಯಕ್ಷಗುರು ಹಟ್ಟಿಯಂಗಡಿ ಆನಂದ ಶೆಟ್ಟಿಯವರಿಗೆ "ಸುವರ್ಣ ಪರ್ವ ಗೌರವ ಪುರಸ್ಕಾರ" ಹಾಗೂ ಉತ್ತರಕನ್ನಡ ಜಿಲ್ಲೆಯ ಜಲವಳ್ಳಿ ವಿದ್ಯಾಧರ ರಾವ್ ಸಾರಥ್ಯದ ಕಲಾಧರ ಯಕ್ಷರಂಗ ಬಳಗದ ಕಲಾವಿದರಿಂದ 'ಶ್ರೀ ರಾಮಾಂಜನೇಯ ಯುದ್ಧ' ಎನ್ನುವ ಪೌರಾಣಿಕ ಕಥಾನಕದ ಯಕ್ಷಗಾನ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಾಲಿಗ್ರಾಮ ಮಕ್ಕಳ ಮೇಳದ ಪ್ರಾಕ್ತನ ಕಲಾವಿದ ಹಾಗೂ ಸಂಯೋಜಕ ಕೆ.ರಾಘವೇಂದ್ರ ನಾಯರಿ ಹೇಳಿದರು. ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಯಕ್ಷರಂಗ-ಯಕ್ಷಗಾನ ಸಂಸ್ಥೆ ಹಾಗೂ ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಸಹಕಾರದೊಂದಿಗೆ ಆಯೋಜಿತಗೊಂಡಿರುವ ಸುವರ್ಣ ಪರ್ವ ಸಮಾರಂಭದ ಉದ್ಘಾಟನೆಯನ್ನು ಪೂರ್ವ ವಲಯದ ಪೋಲಿಸ್ ಮಹಾನಿರೀಕ್ಷಕ ಡಾ.ಬಿ.ಆರ್.ರವಿಕಾಂತೇಗೌಡ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಸಾಲಿಗ್ರಾಮ ಮಕ್ಕಳ ಮೇಳದ ಕಾರ್ಯಾಧ್ಯಕ್ಷ ಕೆ.ಮಹೇಶ ಉಡುಪ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ವಾಮದೇವಪ್ಪ, ಯಕ್ಷರಂಗ-ಯಕ್ಷಗಾನ ಸಂಸ್ಥೆಯ ಅಧ್ಯಕ್ಷ ಮಲ್ಯಾಡಿ ಪ್ರಭಾಕರ ಶೆಟ್ಟಿ, ಕರ್ನಾಟಕ ಗ್ರಾಮೀಣ ಬ್ಯಾಂಕಿನ ಸಹಾಯಕ ಮಹಾಪ್ರಬಂಧಕ ಕೆ.ಸೋಮಶೇಖರ ನಾಯರಿ, ಶ್ರೀಮತಿ ಗೌರಮ್ಮ ಪಿ.ಮೋತಿ ರಾಮರಾವ್ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಮೋತಿ ಪರಮೇಶ್ವರ ರಾವ್, ಹೋಟೆಲ್ ಉದ್ಯಮಿ ಶೈಲೇಶ್ ಎನ್ ಶೆಟ್ಟಿ, ಕಾರ್ಮಿಕ ಮುಖಂಡ ಹೆಚ್.ಜಿ.ಉಮೇಶ್ ಅವರಗೆರೆ, ಬ್ಯಾಂಕ್ ಕಾರ್ಮಿಕ ಮುಖಂಡ ಕೆ.ವಿಶ್ವನಾಥ್ ಬಿಲ್ಲವ, ಸಾಲಿಗ್ರಾಮ ಮಕ್ಕಳ ಮೇಳದ ಉಪಾಧ್ಯಕ್ಷ ಹೆಚ್.ಜನಾರ್ದನ ಹಂದೆ, ಕಾರ್ಯದರ್ಶಿ ಹೆಚ್.ಸುಜಯೀಂದ್ರ ಹಂದೆ ಆಗಮಿಸುವರು. ನಾಡಿನ ಹೆಮ್ಮೆಯ ಕಲೆ ಯಕ್ಷಗಾನ ಪ್ರದರ್ಶನಕ್ಕೆ ಕಲಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಯಕ್ಷರಂಗ-ಯಕ್ಷಗಾನ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಬೇಳೂರು ಸಂತೋಷ ಕುಮಾರ್ ಶೆಟ್ಟಿ ಭಾಗವಹಿಸುವರು.

# ಸರ್ವರನ್ನೂ ಒಗ್ಗೂಡಿಸುವುದೇ ಗಣೇಶೋತ್ಸವದ ಉದ್ದೇಶ

**ಚಿಕ್ಕಮಗಳೂರು:**
ಹಿಂದುತ್ವವನ್ನು ಗಟ್ಟಿಗೊಳಿಸಲು ಧಾರ್ಮಿಕವಾಗಿಎಲ್ಲರೂಒಗ್ಗಟ್ಟಿನಿಂದ ಭಾಗವಹಿಸಿ ಆಚರಿಸುವುದೇ ಸಾರ್ವಜನಿಕಗಣೇಶೋತ್ಸವದ

ಪ್ರಮುಖಉದ್ದೇಶಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.ಅವರುನಗರದ ಬೋಳರಾಮೇಶ್ವರ ದೇವಸ್ಥಾನದಆವರಣದಲ್ಲಿಅಜಾದ್ ಪಾರ್ಕ್‌ಗಣೇಶೋತ್ಸವ ಸಮಿತಿ ಪ್ರತಿಷ್ಠಾಪಿಸಿದ್ದ ಸಾರ್ವಜನಿಕಗಣೇಶ ಮೆರವಣಿಗೆಗೆ ಚಾಲನೆ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಕಳೆದ 89 ವರ್ಷಗಳಿಂದ ನಗರದಲ್ಲಿ ವಿಶೇಷವಾಗಿ ಗಣಪತಿಯನ್ನುಅಜಾದ್ ಮೈದಾನದಲ್ಲಿ ಪ್ರತಿಷ್ಠಾಪಿಸಿ 21 ದಿನಗಳ ಕಾಲ ವಿವಿಧ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಗಣೇಶೋತ್ಸವಆಚರಣೆ ಮಾಡಿಕೊಂಡು ಬರಲಾಗುತ್ತಿದೆಎಂದು ಹೇಳಿದರು.

ಕಳೆದ 10 ವರ್ಷಗಳಿಂದ ಬೋಳರಾಮೇಶ್ವರದೇವಸ್ಥಾನದಆವರಣದಲ್ಲಿ ಸಾರ್ವಜನಿಕಗಣಪತಿಯನ್ನು ಪ್ರತಿಷ್ಠಾಪಿಸಿ ವೈಭವದಿಂದ ಪೂಜೆ ಸಲ್ಲಿಸಿ ವಿವಿಧ ಸಾಂಸ್ಕೃತಿಕಜಾನಪದ ಕಲಾತಂಡಗಳ ಮೂಲಕ ಇಂದು ನಗರದ ಪ್ರಮುಖ ರಸ್ತೆಗಳಲ್ಲಿ ಗಣೇಶ ಮೆರವಣಿಗೆ ಸಾಗಲಿದೆಎಂದು ತಿಳಿಸಿದರು.

ಬಾಲಗಂಗಾಧರ ತಿಲಕರು ಜಾತ್ಯಾತೀತ ರಾಷ್ಟ್ರ ಭಾರತದಲ್ಲಿಎಲ್ಲರನ್ನೂಒಗ್ಗೂಡಿಸಲು ಭಾವೈಕ್ಯತಾ ಸಂಕೇತವಾದಗಣೇಶೋತ್ಸವದ ಮೂಲಕ ಸ್ವಾತಂತ್ರ್ಯ ಹೋರಾಟದಲ್ಲಿ ವಿಜಯ ಸಾಧಿಸಿದ್ದರು ಎಂದು ಸ್ಮರಿಸಿದರು.

ನಗರದಎಲ್ಲಾ ನಾಗರೀಕರು ಶಾಂತಿ ಸಂಯಮದಿಂದ ವಿಘ್ನೇಶ್ವರ ಮೆರವಣಿಗೆಯಲ್ಲಿ ಪಾಲ್ಗೊಂಡು ಶ್ರೀಯವರ ಕೃಪೆಗೆ ಪಾತ್ರರಾಗಬೇಕೆಂದು ಮನವಿ ಮಾಡಿದಅವರು, ನಂತರಗಣೇಶ ಮೂರ್ತಿಯನ್ನು ಬಸವನಹಳ್ಳಿ ಕೆರೆಯಲ್ಲಿ ವಿಸರ್ಜಿಸಲಾಗುವುದುಎಂದು ಹೇಳಿದರು.

ಗಣೇಶೋತ್ಸವಎಲ್ಲರಆರೋಗ್ಯಕಾಪಾಡುವಜೊತೆಗೆರೈತರಿಗೆ ಮಳೆ, ಬೆಳೆ, ಬೆಲೆ ಬರುವಂತೆಕರುಣಿಸಲಿ ಎಂದು ಪ್ರಾರ್ಥಿಸಿದರಲ್ಲದೆ, ಮುಂದಿನ ವರ್ಷದಗಣೇಶೋತ್ಸವದ ವೇಳೆಗೆ ಪೆಂಡಾಲ್ ಮೇಲೆ ಮೇಲ್ಛಾವಣಿ ನಿರ್ಮಾಣ ಮಾಡುವುದಾಗಿ ಭರವಸೆ ನೀಡಿದರು.ಮೆರವಣಿಗೆ ಶ್ರೀಯವರನ್ನು ಅಲಂಕೀತವಾದ ಪ್ರಭಾವಳಿಯಲ್ಲಿ ಕುಳ್ಳಿರಿಸಿ, ಮಂಗಳವಾದ್ಯ ರಂಗುರಂಗಿನ ಹೂಮಳೆಗರೆಯುವ ಬಾಣ ಬಿರುಸುಗಳ ನಯನ ಮನೋಹರವಾದ ಕೀಲು ಕುದುರೆ ನೃತ್ಯ, ಸ್ಯಾಕ್ಸೋಫೋನ್ ವಾದ್ಯ, ವೀರಗಾಸೆಕುಣಿತ, ಡೊಳ್ಳು ಕುಣಿತ, ಹಳ್ಳಿವಾದ್ಯ ಇನ್ನೂ ಮುಂತಾದಜನಪದ ಕಲಾತಂಡಗಳೊಂದಿಗೆ ವಿಜೃಂಭಣೆಯಿಂದಕೂಡಿದಮೆರವಣಿಗೆಯು, ಚಿಕ್ಕಮಗಳೂರು ನಗರದ ಪ್ರಮುಖರಾಜ ಬೀದಿಗಳಲ್ಲಿ ಹಾಗೂ ಎಂ.ಜಿ. ರಸ್ತೆಯಲ್ಲಿ ಹಾದು ಹೋಗಿ ರಾತ್ರಿ ಬಸವನಹಲ್ಲಿ ಕೆರೆಯಲ್ಲಿ ವಿಸರ್ಜನೆ ಮಾಡಲಾಗುವುದು.ಈ ಸಂದರ್ಭದಲ್ಲಿ ಶ್ರೀ ಗಣಪತಿ ಸೇವಾ ಸಮಿತಿಅಧ್ಯಕ್ಷ ಸಿ.ಎನ್ ಕುಬೇರ, ಪ್ರಧಾನ ಕಾರ್ಯದರ್ಶಿ ಸಿ.ಆರ್ ಕೇಶವಮೂರ್ತಿ, ಖಜಾಂಚಿ ಹೆಚ್.ಕೆ ಮಂಜುನಾಥ್, ಕಾರ್ಯಾಧ್ಯಕ್ಷರಾದಈಶ್ವರಪ್ಪಎನ್.ಕೋಟೆ, ಗೌರವಅಧ್ಯಕ್ಷರಾದ ಬಿ. ವಿರೂಪಾಕ್ಷಪ್ಪ, ಎಂ. ದಿವಾಕರ್, ವರಸಿದ್ಧಿ ವೇಣುಗೋಪಾಲ್, ಎಲ್.ವಿಕೃಷ್ಣಮೂರ್ತಿ, ಸಿ.ಎಂ ವೇಣುಗೋಪಾಲ್, ಎಂ.ಎಸ್‌ಉಮೇಶ್‌ಕುಮಾರ್, ಹೆಚ್.ವೈ ಮೋಹನ್‌ಕುಮಾರ್, ಸಿ.ಈ ಚೇತನ್‌ಏಕಾಂತ್‌ರಾಮ್, ಶ್ರೀನಿವಾಸ್, ಸಿ.ಎಸ್ ಹೊನ್ನಪ್ಪ ಶೆಟ್ಟಿ, ಸಚಿನ್ ಎಂ.ಕೆ, ಗಂಗಾಧರ ಸಿ.ಎನ್, ಹೆಚ್. ಎನ್‌ಉಮಾಶಂಕರ್, ಸಿ.ಬಿ ಪ್ರಸಾದ್, ಸದಸ್ಯರುಗಳಾದ ಬಿ.ಸಿ ಶಿವಶಂಕರ್, ಮಂಜುನಾಥ್ ಸಿ.ಎನ್, ಸಿ.ವಿ ಕಲ್ಲೇಶ್, ಸುಜಿತ್.ಸಿ, ಸಿ.ಎಂ ದಯಾನಂದ್, ಪಿ.ಕಿರಣ್, ಬಿ.ಆರ್ ಮಾಲತೇಶ್‌ರಾವ್, ಸಿ.ಆರ್ ನಾಗೇಶ್, ಆಡಿಟರ್ ಹೆಚ್.ಆರ್ ಮೋಹನ್, ವಕೀಲ ಬಿ.ಆರ್‌ಜಗದೀಶ್, ಸಿ.ಕೆ ಪ್ರವೀಣ್‌ಕುಮಾರ್, ಶ್ರೀನಿವಾಸ, ಮಹೇಶ್ ಶೆಟ್ಟಿ, ಕೆ.ಎಸ್ ಬಸವರಾಜ್, ದಿನೇಶ್‌ಕೋಟೆ, ಕೆ.ಸಿ ನಿಶಾಂತ್, ಸಿ.ಬಿರಂಜಿತ್, ಎಲ್.ಎಸ್‌ಉಮಾಶಂಕರ್, ಸಿ.ಎಸ್ ಮಂಜುನಾಥ್ ಉಪಸ್ಥಿತರಿದ್ದರು.

## ಶುದ್ಧ ಕುಡಿಯುವ ನೀರಿನ ಘಟಕ ಲೋಕಾರ್ಪಣೆ

**ದಾವಣಗೆರೆ:** ತಂಜೀಮುಲ್ ಮುಸ್ಲಿಮೀನ್ ಫಂಡ್ ಅಸೋಸಿಯೇಷನ್ ಮತ್ತು ಹುಲಿ ಹಳ್ಳಿ ಫೌಂಡೇಶನ್ ಇವರ ಸಹಭಾಗಿತ್ವದಲ್ಲಿ ನಗರದ ಶಾದಿ ಮಹಲ್‌ನಲ್ಲಿ ಅಸೋಸಿಯೇಷನ್ ಅಧ್ಯಕ್ಷ ಶೇಕ್ ದಾದಾಪೀರ್ ಅಧ್ಯಕ್ಷತೆಯಲ್ಲಿ ಉಚಿತ ಶುದ್ಧ ಕುಡಿಯುವ ನೀರಿನ ಘಟಕವನ್ನು ಲೋಕಾರ್ಪಣೆ ಮಾಡಲಾಯಿತು.

ದಾರುಲ್ ಉಲೂಮ್ ರಜ ಉಲ್ ಮುಸ್ತಫಾ ಅರಬ್ಬಿ ಮದ್ರಸ ಇದರ ಸಂಸ್ಥಾಪಕರಾದ ಮೌಲಾನ ಮುಹಮ್ಮದ್ ಹನೀಫ್ ರಜ, ತಂಜೀಮ್ ಉಲಮಾ ಅಹಲೆ ಸುನ್ನತ್ ಇದರ ಅಧ್ಯಕ್ಷರಾದ ಮೌಲಾನ ಮುಹಮ್ಮದ್ ಇಲಿಯಾಜ್ ಖಾಝಿ ಇವರ ಸಾನಿಧ್ಯದಲ್ಲಿ ಪಾಲಿಕೆ ಆಯುಕ್ತರಾದ ರೇಣುಕಾ ಘಟಕವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಫೌಂಡೇಶನ್ ಅಧ್ಯಕ್ಷರಾದ ಎಂ.ಆರ್. ಹುಲಿಹಳ್ಳಿ ಮತ್ತು ಹಿರಿಯ ನ್ಯಾಯವಾದಿ ಎಂ.ಎಂ ಕಿಲೆದಾರ್, ಶೌಕತ್ ಅಲಿ, ಕಾರ್ಯದರ್ಶಿ ಮುಹಮ್ಮದ್ ಜಬಿವುಲ್ಲಾ, ಸಂಸ್ಥೆಯ ಉಪಾಧ್ಯಕ್ಷ ಖಾದರ್ ಭಾಷಾ ರಜ್ವಿ, ಖಜಾಂಚಿ ಈ. ಶಂಶುದ್ದಿನ್, ಸಾಬೀರ್ ಅಲಿ ಖಾನ್, ದಾದಾಪೀರ್ ಸಾಬ್, ಸಯ್ಯದ್ ರಫೀಕ್ ಸಾಬ್, ಜಬೀವುಲ್ಲಾ, ಸನಾ ಉಲ್ಲಾ,ಕೆ. ಇಸ್ಮಾಯಿಲ್ ಸಾಬ್, ಇಮ್ರಾನ್ ರಜ, ಹಾಜಿ ಮೂಸ ಕಲೀಂ ಉಲ್ಲಾ, ಜೆ. ಮುಹಮ್ಮದ್ ಅಲಿ, ಇಮ್ತಿಯಾಜ್ ಬೆಗ್, ಮುಹಮ್ಮದ್ ಜಬಿ ಟೈಲ್ಸ್, ಪಾಲಿಕೆ ಮಾಜಿ ಸದಸ್ಯ ರಹೀಮ್ ಸಾಬ್, ಸಯ್ಯದ್ ಮತ್ತಿತರರು ಉಪಸ್ಥಿತರಿದ್ದರು.

### ಸೆ.22 ರಿಂದ ಅ.07 ರವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ

## ವಿದ್ಯುತ್ ಸಂಪರ್ಕದ 4,91,981 ಕುಟುಂಬಗಳಿಗೆ ಜಿಯೋಟ್ಯಾಗ್

### ಸಮೀಕ್ಷೆ ಕಾರ್ಯಕ್ಕೆ 3876 ಗಣತಿದಾರರು ಭಾಗಿ – ಜಿ.ಎಂ.ಗಂಗಾಧರಸ್ವಾಮಿ

**ದಾವಣಗೆರೆ :** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಇದೇ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ 16 ದಿನಗಳ ಕಾಲ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ನಡೆಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಈ ಕುರಿತು ಮಾಹಿತಿ ನೀಡಿದರು.

ಸೆ.22 ರಿಂದ ಸಮೀಕ್ಷಾ ಕಾರ್ಯ ಆರಂಭವಾಗುವುದರಿಂದ ಈಗಾಗಲೇ ಕುಟುಂಬಗಳ ಸಂಖ್ಯೆ ಹಾಗೂ ಬೆಸ್ಕಾಂ ಇಲಾಖೆ ಸಹಯೋಗದೊಂದಿಗೆ ಆರ್.ಆರ್. ಸಂಖ್ಯೆಗೆ ಅನುಗುಣವಾಗಿ ಒಟ್ಟು 4,91,981 ಕುಟುಂಬಗಳಿಗೆ ಜಿಯೋಟ್ಯಾಗ್ ಮಾಡಲಾಗಿದೆ. ಸಮೀಕ್ಷಾ ಕಾರ್ಯವನ್ನು ವ್ಯವಸ್ಥಿತ ಮತ್ತು ಸುಗಮವಾಗಿ ಯಶಸ್ವಿಗೊಳಿಸಲು ಗ್ರಾಮೀಣ ಪ್ರದೇಶದ ಕುಟುಂಬಗಳ ಆಶಾ ಕಾರ್ಯಕರ್ತೆಯ-ರಿಂದ ಹಾಗೂ ನಗರ ಪ್ರದೇಶಗಳಲ್ಲಿ ದ್ವಿತೀಯ ಪಿಯುಸಿ ಮತ್ತು ಎನ್.ಸಿ.ಸಿ ವಿದ್ಯಾರ್ಥಿಗಳನ್ನು ಬಳಸಿಕೊಂಡು ಪ್ರತಿ ಮನೆಗಳಿಗೆ ತೆರಳಿ ಜಾಗೃತಿ ಮೂಡಿಸುವ ಕಾರ್ಯ ಹಮ್ಮಿಕೊಳ್ಳಲಾಗಿದೆ. ಅಷ್ಟೇ ಅಲ್ಲದೇ ಪ್ರತ್ಯೇಕ ಆಪ್ ಕೂಡ ಸಿದ್ಧಪಡಿಸಲಾಗಿದ್ದು, ಈ ಮೂಲಕ ಹೆಚ್ಚಿನ ಪ್ರಚಾರ ನೀಡಲಾಗುತ್ತಿದೆ.

ಜಿಲ್ಲೆಯಲ್ಲಿ ಒಟ್ಟು 4,52,224 ಮನೆಗಳಿದ್ದು, ಅಲೆಮಾರಿ, ಅರೆ ಅಲೆಮಾರಿ ಹಾಗೂ ಆರ್.ಆರ್ ಸಂಖ್ಯೆಗಳಿಲ್ಲದ ಮನೆ, ಕುಟುಂಬಗಳನ್ನು ಗುರುತಿಸಿ



ಮಾಹಿತಿ ಪಡೆಯಲಾಗಿದೆ. ಇನ್ನುಳಿದ ನಾಗರೀಕರು ಸಮೀಕ್ಷಾ ಕಾರ್ಯದ ವೇಳೆ ಸಿಬ್ಬಂದಿಗಳಿಗೆ ತ್ವರಿತವಾಗಿ ಮಾಹಿತಿ ನೀಡಿ ಸಮೀಕ್ಷೆಗೆ ಸಹಕರಿಸಬೇಕು ಎಂದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳುವ ಗಣತಿದಾರರಿಗೆ, ಮೇಲ್ವಿಚಾರಕರಿಗೆ ಸಮೀಕ್ಷಾ ಕಾರ್ಯ, ಸರ್ವೆ ಅಪ್ಲಿಕೇಷನ್ ಕುರಿತು 90 ಮಾಸ್ಟರ್ ಟ್ರೈನರ್‌ಗಳಿಂದ ತರಬೇತಿ ನೀಡಲಾಗಿದೆ. ಸಮೀಕ್ಷಾ ಕಾರ್ಯವನ್ನು ವ್ಯವಸ್ಥಿತ ಮತ್ತು ಸುಗಮವಾಗಿ ನಡೆಸಲು ಸಾಮಾಜಿಕ ಮತ್ತು ಶೈಕ್ಷಣಿಕ ಕಾರ್ಯ ಭೌತಿಕ ಮತ್ತು ಆನ್ ಲೈನ್ ಆಪ್ ಮೂಲಕ ನಡೆಸಲಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಾದ ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಪಾಲಿಕೆ ಆಯುಕ್ತರು, ಪುರಸಭೆ ಮತ್ತು ನಗರಸಭೆ ಮುಖ್ಯಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

**ಸಮೀಕ್ಷೆಗೆ ಮೊಬೈಲ್ ಆಪ್ ಸಿದ್ಧತೆ:**

ಈ ಸಮೀಕ್ಷೆನ್ನು ಭೌತಿಕವಾಗಿ ಮತ್ತು ಆನ್ ಲೈನ್ ಮೂಲಕ ನಡೆಸಲಾಗುವುದು. ಅದಕ್ಕಾಗಿ ಮೊಬೈಲ್ ಆಪ್ ಕೂಡ ಸಿದ್ಧಪಡಿಸಲಾಗಿದೆ. ಇದು ತುಂಬಾ ಸುಲಭವಾಗಿದ್ದು, ಮೊಬೈಲ್ ಆಪ್‌ನಲ್ಲಿಯೇ ಮಾಹಿತಿಯನ್ನು ಸಲ್ಲಿಸಬಹುದು. ಸರ್ವೆ ಮಾಡುವ ಸಂದರ್ಭದಲ್ಲಿ ಏನಾದರೂ ತಾಂತ್ರಿಕ ದೋಷ ಅಥವಾ ಸಮಸ್ಯೆಗಳು ಉಂಟಾದಲ್ಲಿ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಲಾಗುವುದು. ಈ ವೇಳೆ ತಾಂತ್ರಿಕ ದೋಷಗಳು ಕಂಡುಬಂದಲ್ಲಿ ಆಯೋಗದ ಗಮನಕ್ಕೆ ತಂದು ತ್ವರಿತವಾಗಿ ಸರಿಪಡಿಸುವ ಕಾರ್ಯ ಮಾಡಲಾಗುವುದು.

**ಸಮೀಕ್ಷೆಗೆ 3876 ಗಣತಿದಾರರು:**

ಜಿಲ್ಲೆಯಲ್ಲಿ ಕುಟುಂಬ ಸಂಖ್ಯೆಗಳಿಗೆ ಅನುಗುಣವಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ-ಕ್ಕೆ ಚನ್ನಗಿರಿ ತಾಲ್ಲೂಕಿಗೆ 727, ದಾವಣಗೆರೆ 1626, ಹರಿಹರ 578, ಜಗಳೂರು 387, ಹೊನ್ನಾಳಿ 352, ನ್ಯಾಮತಿ 207 ಸೇರಿದಂತೆ ಒಟ್ಟು 3876 ಗಣತಿದಾರರನ್ನು ನೇಮಿಸಲಾಗಿದೆ. ಗಣತಿ ಕಾರ್ಯಕ್ಕೆ ಸರ್ಕಾರಿ ಮತ್ತು ಅನುದಾನಿತ ಶಾಲೆಯ 9 ಮತ್ತು 10ನೇ ತರಗತಿಗೆ ಬೋಧಿಸುವ ಶಿಕ್ಷಕರು ಮತ್ತು ಅಂಗವಿಕಲ ಶಿಕ್ಷಕರನ್ನು ಹೊರತುಪಡಿಸಿ ಈ ಕಾರ್ಯಕ್ಕೆ ನಿಯೋಜಿಸಲಾಗಿದೆ. ಒಟ್ಟು ಸಿಬ್ಬಂದಿಗಳಿಗೆ ಅನಿವಾರ್ಯ ಅಥವಾ ಹೆಚ್ಚುವರಿ ಕಾರ್ಯಕ್ಕೆ ಅವಶ್ಯಕತೆ ಹಾಗೂ ಆರೋಗ್ಯದ ಹಿತದೃಷ್ಟಿಯಿಂದ ಶೇ.10 ರಷ್ಟು ಹೆಚ್ಚುವರಿ ಸಿಬ್ಬಂದಿಯನ್ನು ಕಾಯ್ದಿರಿಸಲಾಗಿದೆ. ಈ ಪೈಕಿ 150 ಕುಟುಂಬಗಳಿಗೆ ಒಬ್ಬ ಗಣತಿದಾರ ಮತ್ತು 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರಂತೆ ಒಟ್ಟು 273 ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಮಾತನಾಡಿ, ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸುವ ಸಲುವಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮತ್ತು ಗ್ರಾಮೀಣ ಮಟ್ಟದಲ್ಲಿ ಪಿಡಿಓ, ಕರ ವಸೂಲಿಗಾರ ಮತ್ತು ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ಯಾವುದೇ ಒಬ್ಬ ವ್ಯಕ್ತಿಯಾಗಲೀ, ಕುಟುಂಬವಾಗಲಿ ತಪ್ಪಿ ಹೋಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಹೊಲ, ತೋಟಗಳಲ್ಲಿ ವಾಸಿಸುವ ಕುಟುಂಬಗಳು ಸಹ ಯಾವುದೇ ಕಾರಣಕ್ಕೂ ಸಮೀಕ್ಷೆಯಿಂದ ಹೊರಗುಳಿಯದಂತೆ ಸಮೀಕ್ಷಾ ಕಾರ್ಯ ಪೂರ್ಣಗೊಳಿಸಬೇಕು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರೇಣುಕಾದೇವಿ ಇದ್ದರು.

## ಇಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷರ ಜಿಲ್ಲಾ ಪ್ರವಾಸ

**ಚಿತ್ರದುರ್ಗ :** ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಕರ್ನಾಟಕ ವಿಧಾನ ಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ ಅವರು ಇದೇ ಸೆಪ್ಟೆಂಬರ್ 19ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ಸೆ.19ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗಕ್ಕೆ ಆಗಮಿಸುವರು. ನಂತರ ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು.

## ದೇಶದಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನರೇಂದ್ರ ಮೋದಿ ಆಡಳಿತ ದಿಂದ ಮಾತ್ರ ಸಾಧ್ಯ : ವೀರೇಶ್ ಹನಗವಾಡಿ

**ಹರಿಹರ :** ದೇಶದಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನರೇಂದ್ರ ಮೋದಿ ಆಡಳಿತದಿಂದ ಮಾತ್ರ ಸಾಧ್ಯ,ಕಳೆದ 11 ವರ್ಷದ ಆಡಳಿತ ಅವಧಿಯಲ್ಲಿ ಭ್ರಷ್ಟಾಚಾರ ರಹಿತವೇ ಇದ-ಕ್ಕೆ ಸಾಕ್ಷಿಯಾಗಿದೆ ಎಂದು

ಹರಿಹರ ವಿಧಾನಸಭಾ ಕ್ಷೇತ್ರದ ದಾವಣಗೆರೆ ಭಾಜಪಾ ಮಾಜಿ ಜಿಲ್ಲಾಧ್ಯಕ್ಷ ಮತ್ತು ಜಿ.ಪಂ. ಮಾಜಿ ಅಧ್ಯಕ್ಷ ಹನಗವಾಡಿ ವೀರೇಶ್ ಪ್ರಶಂಶಿಸಿದರು.

ಪ್ರಧಾನಿ ನರೇಂದ್ರ ಮೋದಿಯವರ 75 ನೇ ಜನ್ಮ ದಿನೋತ್ಸವದ ಅಂಗವಾಗಿ ತಾಲೂಕಿನ ಭಾರತೀಯ ಜನತಾ ಪಾರ್ಟಿ ವತಿಯಿಂದ ಸಾರ್ವಜನಿಕ ಆಸ್ಪತ್ರೆಯಲ್ಲಿನ ಒಳರೋಗಿಗಳಿಗೆ ಹಣ್ಣು ಹಂಪಲು ಗಳನ್ನು ವಿತರಿಸಿ ಮಾತನಾಡಿದ ಅವರು, ನರೇಂದ್ರ ಮೋದಿ ಎನ್ನುವುದು ವ್ಯಕ್ತಿಯಲ್ಲ ಅವರೊಂದು ಶಕ್ತಿಯಾಗಿದ್ದು 2014 ರ ನಂತರ ಸಾಕಷ್ಟು ಬದಲಾವಣೆಗಳನ್ನು ದೇಶದ ಜನತೆ ನೋಡಿದೆ.

ಭಾರತದ ಜನತೆಯನ್ನು ವಿಶ್ವದಲ್ಲಿ ಬೆಳಗಿಸಿದ ಕೀರ್ತಿ ಮೋದಿ ಅವರಿಗೆ ಸಲ್ಲುತ್ತದೆ ವಿಶ್ವದಲ್ಲಿ 3 ನೆಯ ಶ್ರೇಷ್ಠ ಆರ್ಥಿಕ ರಾಷ್ಟ್ರ ಎಂಬ ಖ್ಯಾತಿಯನ್ನು ದೊರಕಿಸಿಕೊಟ್ಟಿದ್ದಾರೆ.ವಿಶ್ವದ ದೊಡ್ಡ ದೊಡ್ಡ ದೇಶಗಳು ಅವರನ್ನು ಸ್ವಾಗತಿಸಲು ರತ್ನಗಂಬಳಿ ಹಾಸಿ ಕಾಯುತ್ತಿವೆ. ಅವರ ಆಡಳಿತವನ್ನು ದೇಶದ 144 ಕೋಟಿ ಜನತೆ ಸ್ವಾಗತಿಸುತ್ತಿದೆ.

ಕೋವಿಡ್ ಸಂದರ್ಭದಲ್ಲಿ ವಿಶ್ವದ ಹಲವಾರು ದೇಶಗಳಿಗೆ ಮತ್ತು ದೇಶದ ಜನತೆಗೆ ಉಚಿತವಾಗಿ ಹೂವಿಡ್ ನಿರೋಧಕ ಲಸಿಕೆಯನ್ನು ಕೊಡಿಸುವ ಮೂಲಕ ಮಾನವೀಯತೆ ಮೆರೆದಿದ್ದರು. ಅವರು



ಅಧಿಕಾರಾವದಿಯ ಮೊದಲನೇ ಕೆಲಸ ಎಂದರೆ ಅದು ಸ್ವಚ್ಛ ಭಾರತ್ ಅಭಿಯಾನದ ನಿರ್ಣಯ ತೆಗೆದುಕೊಂಡಿದ್ದು.

ನಂತರ ದೇಶದ 140 ಕೋಟಿ ಜನರಲ್ಲಿ ಬಹಳಷ್ಟು ಜನರಿಗೆ ಬ್ಯಾಂಕ್ ಖಾತೆಯ ಅರಿವೇ ಇಲ್ಲದ ಸಂದರ್ಭದಲ್ಲಿ ಜನಧನ್ ಖಾತೆ ತೆರೆಸುವ ಮೂಲಕ ಜನರಿಗೆ ಆರ್ಥಿಕತೆಯ ಅರಿವನ್ನು ನೀಡಿದ್ದು. ಆಮೇಲೆ ದೇಶದಲ್ಲಿ ಜನ ಔಷಧಿ ಕೇಂದ್ರಗಳನ್ನು ತೆರೆದು ಕಡಿಮೆ ದರದಲ್ಲಿ ದೊಡ್ಡ ದೊಡ್ಡ ಕಾಯಿಲೆಗಳ ಔಷಧಿಗಳು ತಲುಪುವಂತೆ ಮಾಡಿದ್ದು ಇಷ್ಟೆಲ್ಲಾ ಮಾಡಿದ ವ್ಯಕ್ತಿಯ ಜನ್ಮದಿನವಾದ ಎಂದು ನಾವೆಲ್ಲರೂ ನೆನಯಬೇಕಾಗಿದೆ ಎಂದು ಹೇಳಿದರು.

ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ಇತರೆ ಮಾಡುವುದಕ್ಕಿಂತ ಮೊದಲು ನಗರದ 25ನೇ ವಾರ್ಡಿನ ಕೆಲವು ಕಡೆ ನರೇಂದ್ರ ಮೋದಿ ಅವರ ಜ್ಞಾಪಕಾರ್ಥವಾಗಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಈ ಸಮಯದಲ್ಲಿ ಬಿಜೆಪಿ ನಗರ ಘಟಕ ಅಧ್ಯಕ್ಷ ಅಜಿತ್ ಸಾವಂತ್, ಗ್ರಾಮಾಂತರ ಘಟಕ ಅಧ್ಯಕ್ಷ ಎಂ.ಪಿ.ಲಿಂಗರಾಜ್,ನಗರ ಪ್ರಧಾನ ಕಾರ್ಯಧರ್ಶಿಗಳಾದ ತುಳುಜಪ್ಪ ಭೂತೆ, ಮಂಜಾ ನಾಯಕ್, ಗ್ರಾಮಾಂತರ ಘಟಕ ಪ್ರಧಾನ ಕಾರ್ಯದರ್ಶಿ ಅದಾಪುರವೀರೇಶ್, ಎಸ್ ಸಿ ಘಟಕ ಅಧ್ಯಕ್ಷ ಸಂತೋಷ್ ಗುಡಿಮನಿ,ರವಿ ರಾಯ್ಕರ್, ರವಿ ತಾವರ್ಗಿ,ಸಂತೋಷ್ ಫೋಟೋಗ್ರಾಫರ್,ಸ್ವಾತಿ ಹನುಮಂತ, ಪ್ರೇಮ್, ಶಾಂತರಾಜ್, ಆಟೋ ರಾಜಣ್ಣ, ವಕೀಲ ನವೀನ್, ಓಂ ನಾಗರಾಜ್, ಜಡಿಯಪ್ಪ, ಕಟಗಿ ಮಂಜಣ್ಣ, ಮಹಿಳಾ ಪ್ರಧಾನ ಕಾರ್ಯದರ್ಶಿ ಸಾಕ್ಷಿ ಶಿಂಧೆ, ಅಂಬುಜಾ ಕಾಟ್ವೆ,ಎಸ್.ಟಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಾಲಕಟ್ಟೆ ಸಿದ್ದಣ್ಣ, ಗ್ರಾಮಾಂತರ ಮಹಿಳಾ ಮೋರ್ಚಾ ಅಧ್ಯಕ್ಷೆ ಸುನೀತಾ ಸೇರಿದಂತೆ ಹಲವಾರು ಭಾರತೀಯ ಜನತಾ ಪಾರ್ಟಿ ಮುಖಂಡರು, ಕಾರ್ಯಕರ್ತರು, ಸರ್ವ ಸದಸ್ಯರು , ಹಿಂದೂ ಬಾಂಧವರು, ಇನ್ನು ಅನೇಕರು ಉಪಸ್ಥಿತರಿದ್ದರು.


### ಬಂಟರ ಸಂಘದಿಂದ ವಿದ್ಯಾರ್ಥಿವೇತನ ವಿತರಣಾ ಕಾರ್ಯಕ್ರಮ

## ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ

**ಚಿಕ್ಕಮಗಳೂರು:** ಆರ್ಥಿಕವಾಗಿ ಹಿಂದುಳಿದಿರುವ ಸಮುದಾಯದ ಬಡ ವಿದ್ಯಾರ್ಥಿಗಳಿಗೆ ಬಂಟರ ಯಾನೆ ನಾಡವರ ಸಂಘ ಉಚಿತ ಶಿಕ್ಷಣ ನೀಡಲಿದೆ ಎಂದು ರಾಜ್ಯ ಬಂಟರ ಯಾನೆ ನಾಡವರ ಸಂಘದ ರಾಜ್ಯಾಧ್ಯಕ್ಷ ಸಿ.ಎ. ಅಶೋಕ್‌ಕುಮಾರ್ ಹೇಳಿದ್ದಾರೆ.

ನಗರದ ಹೊರ ವಲಯದಲ್ಲಿರುವ ಬಂಟರ ಸಂಘದ ಭವನದಲ್ಲಿ ಚಿಕ್ಕಮಗಳೂರು ಬಂಟರ ಯಾನೆ ನಾಡವರ ಸಂಘ ಇತ್ತೀಚೆಗೆ ಹಮ್ಮಿಕೊಂಡಿದ್ದ ವಿದ್ಯಾರ್ಥಿವೇತನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಈ ಸಂಬಂಧ ರಾಜ್ಯ ಬಂಟರ ಸಂಘ ಈಗಾಗಲೇ



132 ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಉಚಿತವಾಗಿ ಶಿಕ್ಷಣ ನೀಡುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲೂ ಕೂಡ ಇಂತಹ ಬಡ ವಿದ್ಯಾರ್ಥಿಗಳು ಇದ್ದಲ್ಲಿ ಅಂತಹವರಿಗೆ ಉಚಿತ ಶಿಕ್ಷಣ ನೀಡಲು ರಾಜ್ಯಸಂಘ ಬದ್ಧವಾಗಿದ್ದು, ಅಂತಹ ವಿದ್ಯಾರ್ಥಿಗಳಿದ್ದಲ್ಲಿ ಎಲ್ಲಾ ತಾಲ್ಲೂಕಿನ ಬಂಡರ ಸಂಘದಿಂದ ಹೆಸರು ಸಂಗ್ರಹಿಸಿ ಜಿಲ್ಲಾ ಸಂಘದ ಅಧ್ಯಕ್ಷ ಪುರಂದರ ಶೆಟ್ಟಿಯವರ ಮೂಲಕ ರಾಜ್ಯ ಸಂಘಕ್ಕೆ ಕಳುಹಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೂ ಉಚಿತ ಶಿಕ್ಷಣ ನೀಡುವುದಾಗಿ ತಿಳಿಸಿದರು.

ಕಳೆದ ಹಲವು ವರ್ಷಗಳಿಂದ ಚಿಕ್ಕಮಗಳೂರು ಬಂಟರ ಯಾನೆ ನಾಡವರ ಸಂಘ ಸಮುದಾಯದ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪ್ರತಿವರ್ಷ ವಿದ್ಯಾರ್ಥಿ ವೇತನ ನೀಡುತ್ತಿದ್ದು, ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಮತ್ತು ಉನ್ನತ ಶಿಕ್ಷಣ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೂ ಕೂಡ ವಿದ್ಯಾರ್ಥಿ ವೇತನ ನೀಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು.

ಚಿಕ್ಕಮಗಳೂರು ಜಿಲ್ಲಾ ಬಂಡರ ಯಾನೆ ನಾಡವರ ಸಂಘ ಸಮುದಾಯದ ಅಭಿವೃದ್ಧಿಗೆ ಯಾವುದೇ ಸಮಾಜಮುಖಿ ಕಾರ್ಯ ಕೈಗೆತ್ತಿಕೊಂಡಲ್ಲಿ ನಿಮ್ಮ ನೆರವಿಗೆ ರಾಜ್ಯ ಸಂಘ ಸದಾ ಬದ್ಧವಾಗಿದೆ ಎಂದು ಭರವಸೆ ನೀಡಿದರು.

## ವಿಕಸಿತ ಭಾರತ ಕ್ವಿಜ್ ಸ್ಪರ್ಧೆ

**ಚಿಕ್ಕಮಗಳೂರು, ಸೆ.18:** ಯುವ ಕಾರ್ಯಕ್ರಮ ಮತ್ತು ಕ್ರೀಡಾ ಸಚಿವಾಲಯವು ವಿಕಸಿತ ಭಾರತ ಯುವ ನಾಯಕ ಸಂವಾದ–2026 ಅಡಿ ವಿಕಸಿತ ಭಾರತ ಕ್ವಿಜ್ ಅನ್ನು ಮೈ ಭಾರತ ಪೋರ್ಟಲ್ ಮೂಲಕ ಪ್ರಾರಂಭಿಸಿದೆ.

ಈ ಕ್ವಿಜ್‌ನ ಉದ್ದೇಶವು 2047ರೊಳಗೆ ವಿಕಸಿತ ಭಾರತ ನಿರ್ಮಾಣದ ಕನಸಿನಲ್ಲಿ ಯುವಕರನ್ನು ತೊಡಗಿಸಿಕೊಳ್ಳುವುದು. ಇದು 12 ಭಾಷೆಗಳಲ್ಲಿ ಲಭ್ಯವಿದ್ದು, ಭಾರತದ ಸಾಧನೆಗಳು, ಪಯಣ ಮತ್ತು ಭವಿಷ್ಯದ ಆಶಾವಾದಗಳ ಬಗ್ಗೆ ಜ್ಞಾನವನ್ನು ಹೆಚ್ಚಿಸಲು ರೂಪಿಸಲಾಗಿದೆ.

ಮುಂದಿನ ಹಂತಗಳಿಗೆ ಅರ್ಹರಾಗುತ್ತಾರೆ. ಕ್ವಿಜ್ ಈಗಾಗಲೇ ಆರಂಭವಾಗಿದ್ದು ಅಕ್ಟೋಬರ್ 15 ರವರೆಗೆ ನಡೆಯಲಿದೆ. ಭಾಗವಹಿಸುವವರು 10 ನಿಮಿಷದಲ್ಲಿ 20 ಪ್ರಶ್ನೆಗಳಿಗೆ ಉತ್ತರಿಸಬೇಕಾಗುತ್ತದೆ. ಕೇವಲ ಒಂದು ಪ್ರಯತ್ನಕ್ಕೆ ಮಾತ್ರ ಅವಕಾಶವಿದ್ದು, ಕನಿಷ್ಠ 7 ಅಂಕಗಳು ಕಡ್ಡಾಯ. ಹೆಚ್ಚು ಅಂಕ ಪಡೆದವರನ್ನು ಆಯ್ಕೆ ಮಾಡಿ, ವಿಜೇತರನ್ನು ಕಂಪ್ಯೂಟರ್ ಲಾಟರಿ ವ್ಯವಸ್ಥೆಯಿಂದ ಘೋಷಿಸಲಾಗುತ್ತದೆ. ಆಯ್ಕೆಯಾದವರು ಪ್ರಬಂಧ ಬರವಣಿಗೆ, ಪ್ರಸ್ತುತಿಕೆ ಮುಂತಾದ ಹಂತಗಳಲ್ಲಿ ಭಾಗವಹಿಸಲಿದ್ದಾರೆ.

ಸ್ಪರ್ಧೆಯಲ್ಲಿ ಭಾಗವಹಿಸುವುದು ಉಚಿತ. ಇದು ಯುವಕರಿಗೆ ನಾಯಕತ್ವ ತೋರಿಸಲು, ಹೊಸ ಆಲೋಚನೆಗಳನ್ನು ಹಂಚಿಕೊಳ್ಳಲು ಹಾಗೂ ವಿಕಸಿತ ಭಾರತ @2047 ನಿರ್ಮಾಣಕ್ಕೆ ಕೊಡುಗೆ ನೀಡಲು ಅವಕಾಶ ಒದಗಿಸುತ್ತದೆ. ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗೆ ಮೈ ಭಾರತ ಪೋರ್ಟಲ್‌ಗೆ (https://mybharat.gov.in) (7204782570) ಭೇಟಿ ನೀಡಬಹುದು ಎಂದು ಮೈ ಭಾರತ್ (ಮೇರಾ ಯುವ ಭಾರತ್) ಯುವಜನ ವ್ಯವಹಾರ ಮತ್ತು ಸಚಿವಾಲಯದ ಜಿಲ್ಲಾ ಯುವ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾತಿ ಸಮೀಕ್ಷೆ ಕಾಲಂ 6ರಲ್ಲಿ ಬೌದ್ಧ ಎಂದು ಬರೆಸಲು ಅಂಬೇಡ್ಕರ್ ವಿಚಾರ ವೇದಿಕೆ ಮನವಿ

**ಚಿಕ್ಕಮಗಳೂರು:** ರಾಜ್ಯಸರ್ಕಾರ ಸೆ.22 ರಿಂದ ಅ.7 ರವರೆಗೆ ನಡೆಸಲಿರುವ ಆರ್ಥಿಕ ಮತ್ತು ಸಾಮಾಜಿಕ ಸಮೀಕ್ಷೆಯಲ್ಲಿ ಬಾಬಾಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್‌ರವರ ಅಭಿಮಾನಿಗಳು ಹಾಗೂ ಅನುಯಾಯಿಗಳು ಧರ್ಮದ ಕಾಲಂ 6 ರಲ್ಲಿ 'ಬೌದ್ಧ' ಎಂದು ಬರೆಸುವಂತೆ ಡಾ. ಬಿ.ಆರ್ ಅಂಬೇಡ್ಕರ್ ವಿಚಾರ ವೇದಿಕೆ 'ಡಿಎಂಎಟಿ' ಘಟಕ ಮನವಿ ಮಾಡಿದೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ವೇದಿಕೆಯ ಗೌರವ ಅಧ್ಯಕ್ಷ ಪುಟ್ಟಸ್ವಾಮಿ.ಡಿ ಅವರು ಭಾರತದಲ್ಲಿ ಜನಿಸಿದ ಗೌತಮ ಬುದ್ಧರು ವಿಶ್ವಕ್ಕೆ ಕರುಣೆ, ಪ್ರೀತಿ, ಮೈತ್ರಿಯನ್ನು ಬೋಧಿಸಿದ್ದಾರೆ. ಪಂಚಶೀಲ ಮತ್ತು ಅಷ್ಟಾಂಗ ಮಾರ್ಗದ ಮೂಲಕ ಮನುಷ್ಯರನ್ನು ತಿದ್ದಿ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಮೌಲ್ಯಗಳನ್ನು ರೂಢಿಸಿಕೊಂಡು



ಸಾರ್ಥಕ ಬದುಕನ್ನು ರೂಪಿಸಿಕೊಳ್ಳಲು ಮಾರ್ಗದರ್ಶನ ಮಾಡಿದ್ದಾರೆ ಎಂದರು.

ಯುದ್ಧ, ಜಾತೀಯತೆ, ದೌರ್ಜನ್ಯ, ದಬ್ಬಾಳಿಕೆ, ಮೂಢನಂಬಿಕೆಗಳ ಆಚರಣೆಗಳನ್ನು ಧಿಕ್ಕರಿಸಿ ವಿಶ್ವಶಾಂತಿಯನ್ನು ಸರಳ ರೀತಿಯಲ್ಲಿ ಜನಮಾನಸವನ್ನು ತಲುಪಿದ ಇವರು, ಮೌರ್ಯ ದೊರೆ ಅಶೋಕನಂತಹವರು ಬುದ್ಧರ ಬೋಧನೆಗಳಿಗೆ ಮಾರುಹೋಗಿ ಕಳಿಂಗ ಯುದ್ಧದ ವಿಜಯ ನಿಜವಾದ ವಿಜಯವಲ್ಲ, ಬದಲಿಗೆ ಜನಕಲ್ಯಾಣವೇ ನಿಜವಾದ ವಿಜಯ ಎಂದು ಸಂಕಲ್ಪಿಸಿದ್ದರು ಎಂದು ಹೇಳಿದರು. ಮೌರ್ಯರ ನಂತರ ಕಾನಿಷ್ಕ, ಹರ್ಷವರ್ಧನ ಮುಂತಾದ ಪ್ರಮುಖ ರಾಜಮಹಾರಾಜರು ಬೌದ್ಧ ಧಮ್ಮವನ್ನು ಭಾರತದಾಚೆಗೂ ಹರಡಿದರು. ಭಾರತದಲ್ಲಿ ಜನಿಸಿದ ಬೌದ್ಧ ಧರ್ಮ ಇಂದು ಪ್ರಪಂಚದ ಹಲವು ರಾಷ್ಟ್ರಗಳ ಧರ್ಮವಾಗಿದೆ.

ಮಾನವ ಜೀವನಕ್ಕೆ ಬೇಕಾದ ಸರಳ ಮಾರ್ಗದರ್ಶನಗಳು ಬೌದ್ಧ ಧರ್ಮದಲ್ಲಿವೆ ಎಂಬುದನ್ನು ಮನಗಂಡ ಡಾ. ಬಿ.ಆರ್ ಅಂಬೇಡ್ಕರ್ ಅವರು ಸುಮಾರು 20 ವರ್ಷಗಳ ಕಾಲ ವಿಶ್ವದ ಹಲವು ಧರ್ಮಗಳನ್ನು ಅಧ್ಯಯನ ಮಾಡಿ, ಪೂರ್ವಿಕರು ಅನುಸರಿಸಿದ ಭಾರತದ ನೆಲಮೂಲದ ಧರ್ಮ ಬೌದ್ಧ ಧರ್ಮಕ್ಕೆ ಮರಳಿದ್ದು ಇತಿಹಾಸ ಎಂದರು.

ಭಾರತದಲ್ಲಿ ಬೌದ್ಧ ಧರ್ಮದ ಪುನರುತ್ಥಾನಕ್ಕಾಗಿ ಪ್ರಬುದ್ಧರು ತಮ್ಮ ಸರ್ವಸ್ವವನ್ನೂ ತ್ಯಾಗಮಾಡಿ, ಅಂಬೇಡ್ಕರ್ ಅವರ ಮಾರ್ಗದಲ್ಲಿ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಸಂದರ್ಭದಲ್ಲಿ ಧರ್ಮದ ಕ್ರ.ಸಂ 6 ರಲ್ಲಿ ಬೌದ್ಧ ಎಂದು ಬರೆಸುವಂತೆ ಮನವಿ ಮಾಡಿದರು. ಪರಿಶಿಷ್ಟ ಜಾತಿಯವರು ಬೌದ್ಧ ಎಂದು ಬರೆಸಿದಲ್ಲಿ ಕೇಂದ್ರ ಸರ್ಕಾರದ ಆದೇಶದಂತೆ ಮೀಸಲಾತಿಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದರು.

## ಸಾರಿಗೆ ಬಸ್ ಕುಡ್ಲೂರು ಗೇಟ್ ಬಳಿ ಕೋರಿಕೆ ನಿಲುಗಡೆಗೆ ಆಗ್ರಹಿಸಿ ಪ್ರತಿಭಟನೆಗೆ ನಿರ್ಧಾರ

**ಚಿಕ್ಕಮಗಳೂರು:** ತರೀಕೆರೆ ತಾಲ್ಲೂಕು ಕುಡ್ಲೂರು ಗೇಟ್ ಬಳಿ ಸಾರಿಗೆ ಬಸ್ ನಿಲುಗಡೆ ಮಾಡುವಂತೆ ಕೋರಿ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಹಾಗೂ ಘಟಕ ವ್ಯವಸ್ಥಾಪಕರು ಕಡೂರು ಇವರಿಗೆ ಮನವಿ ನೀಡಿ ಒತ್ತಾಯಿಸಲಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, 2014 ರಲ್ಲಿ ವ್ಯವಸ್ಥಾಪಕ ನಿರ್ದೇಶಕರ ಆದೇಶದಂತೆ ಕೋರಿಕೆ ನಿಲುಗಡೆ ಮಾಡಲಾಗುತ್ತಿದ್ದು, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ವಿಭಾಗಗಳಿಂದ ಕೆಎಸ್‌ಆರ್‌ಟಿಸಿ ಬಸ್‌ಗಳು ಕುಡ್ಲೂರು ಗೇಟ್ ಬಳಿ ನಿಲುಗಡೆ ಮಾಡುತ್ತಿದ್ದು, ಉಳಿದ ಮೈಸೂರು, ಮಂಡ್ಯ, ಕೋಲಾರ, ಬೆಂಗಳೂರು ಸೆಂಟ್ರಲ್, ವಾಯುವ್ಯ, ಈಶಾನ್ಯ ಸಾರಿಗೆ ಸಂಸ್ಥೆಯ ಹುಬ್ಬಳ್ಳಿ, ಗುಲ್ಬರ್ಗ ಸಾರಿಗೆ ಬಸ್‌ಗಳು ಕೋರಿಕೆ ನಿಲುಗಡೆಯನ್ನು ಅನುಸರಿಸುತ್ತಿಲ್ಲ ಎಂದು ದೂರಿದ್ದಾರೆ.

ಈ ಹಿನ್ನೆಲೆಯಲ್ಲಿ ಸಾರಿಗೆ ಬಸ್ ನಿಲುಗಡೆ ಮಾಡದಿದ್ದರೆ ಸೆ.18 ರಂದು ಬೆಳಗ್ಗೆ 10.30ಕ್ಕೆ ಇಲ್ಲಿನ ಗ್ರಾ.ಪಂ ಮುಂದೆ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ ಎಂದು ಎಚ್ಚರಿಸಿದ್ದಾರೆ.

ಕುಡ್ಲೂರು ಗೇಟ್ ಮೂಲಕ ಮುಂಡರಗಿಗೆ ಹೋಗುವ ಸಾರಿಗೆ ಬಸ್‌ನ್ನು ಕೊರಟಿಕೆರೆ ಗ್ರಾಮಗಳಿಗೆ ಬಂದು ಹೋಗುವಂತೆ ಮಾಡಬೇಕು, ರಾತ್ರಿ 7.30 ಕ್ಕೆ ಕಡೂರಿನಿಂದ ಹೊರಟು ಕುಡ್ಲೂರಿಗೆ ರಾತ್ರಿ 8 ಗಂಟೆಗೆ, ರಾತ್ರಿ 9 ಕ್ಕೆ ಅಜ್ಜಂಪುರ, ಶಿವನಿ ತಲುಪುವುದು, ಪುನಹಾ ಬೆಳಗ್ಗೆ 6.30 ಕ್ಕೆ ಶಿವನಿಯಿಂದ ಅಜ್ಜಂಪುರ ಮಾರ್ಗವಾಗಿ ಕುಡ್ಲೂರಿಗೆ 7.30 ಕ್ಕೆ ಬಂದು ಹೋಗಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

## ಇಬ್ಬರು ಅಪರಿಚಿತರ ಸಾವು


**ಚಿಕ್ಕಮಗಳೂರು :** ನಗರದ ಜಿಲ್ಲಾ ಆಸ್ಪತ್ರೆಯಲ್ಲಿ ಸೆಪ್ಟಂಬರ್ 11 ರ ಬೆಳಿಗ್ಗೆ ಅಪರಿಚಿತ ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದು, ಶವವನ್ನು ಆಸ್ಪತ್ರೆಯ ಫ್ರೀಜರ್ ಶವಾಗಾರದಲ್ಲಿ ಇರಿಸಲಾಗಿದೆ. ಸುಮಾರು 165 ಸೆ.ಮೀ. ಎತ್ತರವಿರುವ ಈ ವ್ಯಕ್ತಿಯು ಸಾಧಾರಣ ಮೈಕಟ್ಟು ಹೊಂದಿದ್ದಾರೆ. ನಗರದ ಕುವೆಂಪು ಕಲಾಮಂದಿರ ಹಿಂಭಾಗದ ಖಾಸಗಿ ಬಸ್ ನಿಲ್ದಾಣದಲ್ಲಿ ಅಪರಿಚಿತ ವ್ಯಕ್ತಿಯೊಬ್ಬರ ಶವ ಪತ್ತೆಯಾಗಿದ್ದು, ಸೆಪ್ಟಂಬರ್ 12 ರ ರಾತ್ರಿ ಮೃತಪಟ್ಟಿರುವ ಶಂಕೆ ಇದೆ. ಸುಮಾರು 45 ವರ್ಷದವರೆನ್ನಲಾದ ಈ ವ್ಯಕ್ತಿ 175 ಸೆ.ಮೀ. ಎತ್ತರ, ಸಾಧಾರಣ ಮೈಕಟ್ಟು ಹೊಂದಿದ್ದಾರೆ. ಈ ಇಬ್ಬರು ವ್ಯಕ್ತಿಗಳ ಬಗ್ಗೆ ಮಾಹಿತಿ ಇದ್ದವರು ನಗರ ಪೊಲೀಸ್ ಠಾಣೆ (08262-235333) ಅಥವಾ ಪೊಲೀಸ್ ಕಂಟ್ರೋಲ್ ರೂಂಗೆ ಮಾಹಿತಿ ನೀಡುವಂತೆ ನಗರ ಠಾಣೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮೈಸೂರು ದಸರಾ : ಪ್ರತಿಭಟನೆ ಮತ್ತು ಗೊಂದಲ ನಡೆಯದಂತೆ ಕಟ್ಟೆಚ್ಚರ ವಹಿಸಲು ಡಿಜಿ ಸೂಚನೆ

**ಮೈಸೂರು,ಸೆ.18–** ದಸರಾ ಮಹೋತ್ಸವ ಉದ್ಘಾಟಕರ ವಿಚಾರದಲ್ಲಿ ವಿವಾದ ಉಂಟಾಗಿರು ವುದರಿಂದ ಚಾಮುಂಡಿ ಬೆಟ್ಟದಲ್ಲಿ ನಡೆಯಲಿರುವ ದಸರಾ ಉದ್ಘಾಟನೆ ಸಮಾರಂಭದಲ್ಲಿ ಯಾವುದೇ ಪ್ರತಿಭಟನೆ ಮತ್ತು ಗೊಂದಲ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಸೂಚನೆ ನೀಡಿದರು.

ನಗರ ಪೊಲೀಸ್ ಆಯುಕ್ತರ ಕಚೇರಿ ಸಭಾಂಗಣ ದಲ್ಲಿ ದಸರಾ ಭದ್ರತೆ ಸಂಬಂಧ ನಡೆದ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ಸೂಚನೆ ನೀಡಿದರು.

ಚಾಮುಂಡಿ ಬೆಟ್ಟದಲ್ಲಿ ನಡೆಯಲಿರುವ ದಸರಾ ಉದ್ಘಾಟನಾ ಕಾರ್ಯಕ್ರಮದಲ್ಲಿ ಪ್ರತಿಭಟನೆ ನಡೆಯುವ ಸಾಧ್ಯತೆ ಇರುವುದರಿಂದ ಹೆಚ್ಚಿನ ಪೊಲೀಸ್ ಪಡೆಯನ್ನು ನಿಯೋಜಿಸಬೇಕು. ಹಂತ ಹಂತವಾಗಿ ಭದ್ರತಾ ಕಾರ್ಯ ಕೈಗೊಳ್ಳಬೇಕು. ದಸರಾ ಉದ್ಘಾಟಕರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ಗಣ್ಯರು ಬಂದು ಕಾರ್ಯಕ್ರಮ ಮುಗಿಸಿ ಸುರಕ್ಷಿತವಾಗಿ



ತೆರಳುವವರೆಗೆ ಎಚ್ಚರದಿಂದ ಇರಬೇಕು ಎಂದು ಸಲಹೆ ನೀಡಿದರು.

ಸೆ. 22ರಿಂದ ಅ. 2ರವರೆಗೆ ನಡೆಯಲಿರುವ ದಸರಾ ಉತ್ಸವಕ್ಕೆ ಸ್ಥಳೀಯರು ಸೇರಿದಂತೆ ಲಕ್ಷಾಂತರ ಪ್ರವಾಸಿಗರು ಆಗಮಿಸಲಿದ್ದು, ಹೆಚ್ಚಿನ ಪೊಲೀಸ್ ಪಡೆ ನಿಯೋಜಿಸಬೇಕು ಎಂದು ಸೂಚಿಸಿದರು.

ಅರಮನೆ ಸೇರಿದಂತೆ ಪಂಜಿನ ಕವಾಯತು ಮೈದಾನ, ಆಹಾರ ಮೇಳ ಮತ್ತು ಯುವ ದಸರಾ ಕಾರ್ಯಕ್ರಮಗಳಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದಂತಹ ಪ್ರಕರಣ ನಡೆಯದಂತೆ ಸಾರ್ವಜನಿಕರ ಮೇಲೆ ನಿಗಾವಹಿಸಬೇಕು. ವಿಜಯದಶಮಿ ಮೆರವಣಿಗೆ, ಟಾರ್ಚ್‌ಲೈಟ್ ಪರೇಡ್ ಮೈದಾನ, ಚಾಮುಂಡಿಬೆಟ್ಟ, ಯುವ ದಸರಾ, ಆಹಾರ ಮೇಳ, ಫಲಪುಷ್ಪ ಪ್ರದರ್ಶನ, ದಸರಾ ವಸ್ತುಪ್ರದರ್ಶನ, ವೈಮಾನಿಕ ಪ್ರದರ್ಶನದಂತಹ ಕಾರ್ಯಕ್ರಮ ನಡೆಯುವ ಸ್ಥಳದಲ್ಲೂ ಮೆಟಲ್ ಡಿಟೆಕ್ಟರ್ ಅಳವಡಿಸಿ, ಪ್ರತಿಯೊಬ್ಬರನ್ನೂ ತಪಾಸಣೆ ನಡೆಸಿ ಪ್ರವೇಶಾವಕಾಶ ನೀಡಬೇಕು. ಮೈಸೂರು ನಗರ ಪೊಲೀಸ್ ಘಟಕವು ಜಿಲ್ಲಾಡಳಿತದೊಂದಿಗೆ ನಿರಂತರ ಚರ್ಚೆ ನಡೆಸಿ ದಸರಾ ಬಂದೋಬಸ್ತ್ ಯೋಜನೆಯನ್ನು ಅಂತಿಮಗೊಳಿಸಬೇಕು ಎಂದು ಸೂಚಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**